ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 90 ಸಂಚಿಕೆ- 90 | PAGE-8 ಪುಟ-8 | ಗುರುವಾರ 15.05.2025 | RS.2/- ಬೆಲೆ 2/-

## ದೇಶದಲ್ಲಿ ಉಗ್ರರನ್ನು ಸಾಕುತ್ತಿರುವ ಕಾಂಗ್ರೆಸ್



ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು:ಮೇ.14:ಕಾಂಗ್ರೆಸ್‌ನವರು ಭಾರತದಲ್ಲಿ ಉಗ್ರರನ್ನು ಸಾಕ್ತಿದ್ದಾರೆ ಎಂದು ಪರಿಷತ್ ಸದಸ್ಯ ರವಿಕುಮಾರ್ ಕಿಡಿಕಾರಿದರು. ಬೆಂಗಳೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಐಎಂಎಫ್‌ನಿಂದ ಪಡೆದ ಸಾಲದ ಹಣದಲ್ಲಿ ಪಾಕಿಸ್ತಾನ ಸರ್ಕಾರ ಮಸೂದ್ ಅಜರ್‌ಗೆ ಪರಿಹಾರ ಕೊಟ್ಟಿದೆ. ಆ ಮೂಲಕ ಪಾಕಿಸ್ತಾನ ಉಗ್ರರನ್ನ ಸಾಕ್ತಿದೆ. ಇಲ್ಲಿ ಸುಹಾಸ್ ಶೆಟ್ಟಿ ಹತ್ಯೆ ಮಾಡಿದ ಆದಿಲ್‌ಗೆ ಸುಪಾರಿ ಹಣ ಎಲ್ಲಿಂದ ಬಂತು? ಇದೇ ಕಾಂಗ್ರೆಸ್ ಸರ್ಕಾರ ಕೊಟ್ಟ ಪರಿಹಾರದಿಂದ ಬಂದಿದೆ. ಅಲ್ಲಿಗೆ ಕಾಂಗ್ರೆಸ್‌ನವ್ರೂ ಭಯೋತ್ಪಾದಕರನ್ನು ಸಾಕ್ತಿದ್ದಾರೆ ಅಂತಾ ಆಯ್ತು ಅಲ್ವಾ ಎಂದು ವಾಗ್ದಾಳಿ ನಡೆಸಿದರು.

ಕಾಂಗ್ರೆಸ್ ನಾಯಕರು ಮೋದಿ ಮತ್ತು ಕೇಂದ್ರ ಸರ್ಕಾರವನ್ನು ಟೀಕೆ ಮಾಡ್ತಿದ್ದಾರೆ. ಪಹಲ್ಗಾಮ್ ಕೃತ್ಯ ನಡೆಯುವಾಗ ಮೋದಿಯವ್ರು ಎಲ್ಲಿದ್ರು ಅಂತ ಪ್ರಿಯಾಂಕ್ ಖರ್ಗೆ ಕೇಳಿದ್ದಾರೆ. ಆ ಸಂದರ್ಭದಲ್ಲಿ ಮೋದಿ ಎಲ್ಲಿದ್ರು, ಏನು ಮಾಡಿದ್ರು ಅಂತ ದೇಶದ ಎಲ್ಲ ಪ್ರಜೆಗಳಿಗೆ ಗೊತ್ತಿದೆ. ಎಲ್ಲರಿಗೂ ಗೊತ್ತಿರುವ ವಿಷಯ ಪ್ರಿಯಾಂಕ್ ಖರ್ಗೆಗೆ ಯಾಕೆ ಗೊತ್ತಿಲ್ಲ. ಇದೇನು ಪ್ರಿಯಾಂಕ್ ಖರ್ಗೆಯ ಗೋಸಂಬಿತನನಾ ಅಥವಾ ಡಬಲ್ ಸ್ಟಾಂಡರ್ಡಾ ಎಂದು ಪ್ರಶ್ನಿಸಿದರು.

ಕಾಂಗ್ರೆಸ್ ಅವಧಿಯಲ್ಲಿ 2004ರಿಂದ 2014ರವರೆಗೆ ಹೆಚ್ಚಿನ ಉಗ್ರ ದಾಳಿಗಳು ದೇಶದಲ್ಲಾಯ್ತು. 900ಕ್ಕೂ ಹೆಚ್ಚು ನಾಗರಿಕರು ಸತ್ರು, ಆಗ ಎಲ್ಲಿತ್ತು ಕಾಂಗ್ರೆಸ್? ಯಾಕೆ ಅಧಿಕಾರದಲ್ಲಿದ್ರೂ ಉಗ್ರ ವಿರುದ್ಧ ಕ್ರಮ ಕೈಗೊಳ್ಳಲಿಲ್ಲ. ಕಾಂಗ್ರೆಸ್ ಅವಧಿಯಲ್ಲಿ ಪ್ರತೀಕಾರಕ್ಕೆ ಸೇನೆ ಸಿದ್ಧವಾಗಿತ್ತು. ಆದ್ರೆ ಮನಮೋಹನ್ ಸಿಂಗ್ ಸರ್ಕಾರ ಯಾವುದೇ ಕ್ರಮ ಕೈಗೊಳ್ಳಲಿಲ್ಲ ಎಂದು ತಿರುಗೇಟು ನೀಡಿದರು. ಬಿಜೆಪಿ ಅವಧಿಯಲ್ಲಿ ಮೂರು ಪ್ರಮುಖ ಉಗ್ರ ದಾಳಿ ಆಯ್ತು. ಅದಕ್ಕೆ ಭಾರತ ತಕ್ಕ ಕ್ರಮ ಹಾಗೂ ಪ್ರತೀಕಾರ ತೀರಿಸಿಕೊಂಡಿದೆ. ಕಾಂಗ್ರೆಸ್ ನಾಯಕರು ಮನಸೋ ಇಚ್ಛೆ ಮಾತಾಡೋದನ್ನ ನಿಲ್ಲಿಸಲಿ. ದೇಶದ ಒಳಿತಿಗೆ ಒಗ್ಗಟ್ಟು ಕಾಯ್ದುಕೊಳ್ಳಬೇಕು. ಅನಗತ್ಯ ಹೇಳಿಕೆ ಕೊಡಬಾರದು ಎಂದು ಹೇಳಿದರು. ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಪ್ರಿಯಾಂಕ್ ಖರ್ಗೆ ಅವರು ಇಂದಿರಾ ಗಾಂಧಿ ಅವರ ನಿಜವಾದ ಉತ್ತರಾಧಿಕಾರಿ ಅಂತ ಭಾವಿಸಿದ್ದಾರೆಯೇ ಇಲ್ಲ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ತನ್ನ ಸಂವಹನವನ್ನು ಜೂನಿಯರ್ ಖರ್ಗೆ ಅವರಿಗೆ ಹೊರಗುತ್ತಿಗೆ ನೀಡಿದೆಯೇ ಎಂದು ಪ್ರಶ್ನೆ ಮಾಡಿದ್ದಾರೆ.

ಮಾನ್ಯ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕಾ ಖರ್ಗೆ ಅವರೇ ಕಲಬುರಗಿಯ ಜನರು ಎಸ್,ಎಸ್.ಎಲ್.ಸಿ/10 ನೇ ತರಗತಿಯ ಬೋರ್ಡ್ ಪರೀಕ್ಷೆಯ ಕಾರ್ಯಕ್ಷಮತೆಯಲ್ಲಿ ಕಳಪೆ ಪ್ರದರ್ಶನ ತೋರಿಸಿದ್ದಾರೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕಲಬುರಗಿ ಏಕೆ ಕೆಳ ಮಟ್ಟದಲ್ಲಿದೆ ಎಂದು ಅಲ್ಲಿನ ಜನ ಕೇಳುತ್ತಿದ್ದಾರೆ. ವಿದೇಶಾಂಗ ನೀತಿ ಮತ್ತು ರಾಜತಾಂತ್ರಿಕತೆಯ ಬಗ್ಗೆ ಕಾಮೆಂಟ್ ಮಾಡುವ ಮೊದಲು, ನೀವು ಕಲಬುರಗಿಯ ಮಾನವ ಅಭಿವೃದ್ಧಿಯ ಬಗ್ಗೆ ನಿಮ್ಮ ಜ್ಞಾನ ದರ್ಶನವನ್ನು ದಯವಿಟ್ಟು ಸ್ವಲ್ಪ ವಿಸ್ತರಿಸಬಹುದೇ ಎಂದು ಕಾಲೆಳೆದಿದ್ದಾರೆ.

ಮುಂದುವರಿದು

(2ನೇ ಪುಟ ನೋಡಿ)

## ಐವರು ಆರೋಪಿಗಳ ಬಂಧನ:30.80 ಲಕ್ಷ ರೂ. ಮೌಲ್ಯದ ಸ್ವತ್ತು, ನಕಲಿ ಪಿಸ್ತೂಲ್ ಜಪ್ತಿ



ಮಲ್ಲಮ್ಮ ನುಡಿ ವಾರ್ತೆ
ಬೀದರ್,ಮೇ.14:ನಗರದ ಗಾಂಧಿಗಂಜ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ 1 ದರೋಡೆ ಪ್ರಕರಣ, 4 ಸುಲಿಗೆ ಪ್ರಕರಣಗಳು ಹಾಗೂ 3 ಮನೆ ಕಳವು ಪ್ರಕರಣಗಳು ಸೇರಿ ಒಟ್ಟು 8 ಪ್ರಕರಣಗಳಲ್ಲಿ ಐವರು ಆರೋಪಿಗಳನ್ನು ಬಂಧಿಸಿ 30,80,100 ರೂ. ಬೆಲೆಬಾಳುವ ಸ್ವತ್ತನು ಜಪ್ತಿ ಮಾಡಿ ಆರೋಪಿತರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ಎಸ್‌ಪಿ ಪ್ರದೀಪ್ ಗುಂಟಿ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗಾಂಧಿ ಗಂಜ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ 1 ದರೋಡೆ ಪ್ರಕರಣ, 4 ಸುಲಿಗೆ ಪ್ರಕರಣಗಳು ಹಾಗೂ 3 ಮನೆ ಕಳವು ಪ್ರಕರಣಗಳ ಪತ್ತೆಗೆ ಎಸ್‌ಪಿ, ಹೆಚ್ಚುವರಿ ಎಸ್‌ಪಿ ಚಂದ್ರಕಾಂತ ಪೂಜಾರಿ, ಪೊಲೀಸ್ ಉಪಾಧೀಕ್ಷಕ ಶಿವನಗೌಡ ಪಾಟೀಲ ಅವರ ಮಾರ್ಗದರ್ಶನದಲ್ಲಿ ಗಾಂಧಿ ಗಂಜ್ ಪೊಲೀಸ್ ಠಾಣೆ ಪಿಐ ಆನಂದರಾವ್, ಸಿಪಿಐ ಜಿ.ಎಸ್.ಬಿರಾದಾರ, ನೂತನ ನಗರ ಠಾಣೆ ಪಿಐ ವಿಜಯಕುಮಾರ ಪಿ.ಐ ನೂತನ ನಗರ ಠಾಣೆ, ಬೀದರ ಗ್ರಾಮೀಣ ಠಾಣೆ ಪಿಐ ಮಲ್ಲಿಕಾರ್ಜುನ ಯಾತನೂರ, ಔರಾದ ಸಿಪಿಐ ರಘುವೀರಸಿಂಗ್ ಠಾಕೂರ ಅವರ ನೇತೃತ್ವದಲ್ಲಿ ಹಾಗೂ ಸಿಬ್ಬಂದಿಗಳಾದ ನವೀನ್, ಅನೀಲ್ , ಆರೀಫ್, ಇರ್ಫಾನ್, ಗಂಗಾಧರ, ಸುಧಾಕರ, ಇಮ್ರಾನ ಕಮಲ ನಗರ, ಪ್ರಶಾಂತ, ಮಲ್ಲಿಕಾರ್ಜುನ, ನಿಂಗಪ್ಪಾ, ರಾಹುಲ ಹಿಬ್ಬಾರೆ, ವಿಜಯಕುಮಾರ ಬಾಳುರೆ, ಅಶೋಕ ಕೋಟೆ ಮತ್ತು ಹರ್ಷಾ ಹಾಗೂ ಟೆಕ್ನಿಕಲ್ (ತಾಂತ್ರಿಕ) ಅಧಿಕಾರಿ ವಿ.ಎಸ್. ಮಂಕಣಿ

(2ನೇ ಪುಟ ನೋಡಿ)

## ಸದ್ದಿಲದೇ ನಡೆಯುತ್ತಿರುವ ಅಕ್ರಮ ದಂಧೆಗಳು : ಆರೋಪ ಕಡಿವಾಣ ಹಾಕುವಲ್ಲಿ ತಾಲೂಕ ಆಡಳಿತ ಮೌನ



ಮಲ್ಲಮ್ಮ ನುಡಿ ವಾರ್ತೆ
ಚಿಟಗುಪ್ಪ:ಮೇ.14:ತಾಲ್ಲೂಕಿನ್ಯಾಂತ ಅನಧಿಕೃತ ಮರಳು ಸಾಗಾಟ, ಅಕ್ರಮ ಕಲ್ಲು ಗಣಿಗಾರಿಕೆ, ಸೇರಿದಂತೆ ಇನ್ನಿತರೆ ಅಕ್ರಮ ಚಟುವಟಿಕೆಗಳು ರಾಜಾರೋಷವಾಗಿ ನಡೆಯುತ್ತಿವೆ ಇವುಗಳಿಗೆ ಕಡಿವಾಣ ಯಾವಾಗ ಎಂಬ ಪ್ರಶ್ನೆ ಸಾರ್ವಜನಿಕವಲಯದಲ್ಲಿ ಕೇಳಿ ಬರುತ್ತಿದೆ. ಈ ಬಗ್ಗೆ ಸಾಕಷ್ಟು ಬಾರಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಹಾಗೂ ತಾಲೂಕ ಆಡಳಿತ ಅಧಿಕಾರಿಗಳ ಗಮನಕ್ಕೆ ತಂದರು ಕೂಡ ಯಾವುದೇ ಪ್ರಯೋಜನವಾಗುತ್ತಿಲ್ಲಾ ಇದ್ದರಿಂದ ಜನರು ಬೇಸೆತ್ತುತ್ತಿದ್ದಾರೆ ಈಗಲಾದರೂ ಸಂಬಂಧ ಪಟ್ಟ ಹಿರಿಯ ಅಧಿಕಾರಿಗಳು ತಪ್ಪಿಸ್ಥರ ಮೇಲೆ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಒತ್ತಾಯಿಸುತ್ತಿದ್ದಾರೆ.



ತಾಲೂಕಿನಲ್ಲಿ ಅನಧಿಕೃತ ಕಲ್ಲು ಗಣಿಗಾರಿಕೆ, ಮರಳು ಸಾಗಾಟ ಸೇರಿದಂತೆ ಇತರೆ ಚಟುವಟಿಕೆಗಳು ನಡೆಯುತ್ತಿವೆ ಎಂದು ಹಲವಾರು ಬಾರಿ ತಾಲೂಕ ಆಡಳಿತಕ್ಕೆ ಮನವಿ ಮಾಡಿದ್ದೇವೆ, ಆದರೂ ಕೂಡ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲಾ ಇದರಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಶಾಮಿಲಿದ್ದಾರೆ ಏನೋ ಎಂದು ಮೇಲ್ನೋಟಕ್ಕೆ ಕಾಣುತ್ತಿದ್ದೆ ಇದರ ಬಗ್ಗೆ ಜಿಲ್ಲಾಧಿಕಾರಿಗಳು ಕ್ರಮ ಕೈಗೊಳ್ಳಬೇಕು ಇಲ್ಲದಿದ್ದರೆ ಉಗ್ರ ಹೋರಾಟ ಮಾಡುತ್ತೇವೆ.

–ಸುಭಾಷ ಕೆನಡೆ ಜಿಲ್ಲಾಧ್ಯಕ್ಷರು ಕನ್ನಡ ಸೇನೆ ಕರ್ನಾಟಕ ಸಂಘಟನೆ ಬೀದರ್.

## ಟೆಕ್ಕಿಗೆ 3ಕೋಟಿ ಪಂಗನಾಮ



ಮಲ್ಲಮ್ಮನುಡಿ ವಾರ್ತೆ ಬೀದರ. ಮೇ. 14 : ಷೇರು ಮಾರ್ಕೆಟ್‌ನಲ್ಲಿ ಹಣ ಡಬಲ್ ಮಾಡೋ ಹೆಸರಿನಲ್ಲಿ ಪಂಗನಾಮ ಹಾಕಲಾಗಿದೆ. ಬೀದರ್ ನ ಟೆಕ್ಕಿಗೆ ಗಾಳ ಹಾಕಿದ್ದ ಮೂವರು ಖದೀಮರು ಹಣ ಡಬಲ್ ಮಾಡಿಕೊಡ್ತೀವಿ ಅಂತಾ ನಂಬಿಸಿ ವಂಚಿಸಿದ್ದಾರೆ.

ವೃತ್ತಿಯಲ್ಲಿ ಸಾಫ್ಟ್ ವೇರ್ ಇಂಜಿನೀಯರ್ ಆಗಿರುವ ರಘುವೀರ್

(2ನೇ ಪುಟ ನೋಡಿ)

## ಪಾಕ್‌ನಿಂದ ಬಿಎಸ್‌ಎಫ್ ಯೋಧ ಪಿ ಕೆ ಶಾ ಬಿಡುಗಡೆ



ನವದೆಹಲಿ:ಮೇ.14: ಪಾಕಿಸ್ತಾನ ವಿರುದ್ಧ ಭಾರತಕ್ಕೆ ಮತ್ತೊಂದು ರಾಜತಾಂತ್ರಿಕ ಜಯ ಲಭಿಸಿದ್ದು,

(2ನೇ ಪುಟ ನೋಡಿ)

## ಸಿಂಧೂ ಜಲ ಒಪ್ಪಂದ ಪರಿಶೀಲಿಸುವಂತೆ ಪಾಕ್ ಮನವಿ

ಮಲ್ಲಮ್ಮ ನುಡಿ ವಾರ್ತೆ
ನವದೆಹಲಿ:ಮೇ.14: ಭಾರತ ಒಂದೊಂದೇ ಏಟಿಗೆ ಬೆದರಿ ತೆಪ್ಪಗಾದ ಪಾಕಿಸ್ತಾನ ಇದೀಗ ಸಿಂಧೂ ನದಿ ಜಲ ಒಪ್ಪಂದ ಸ್ಥಗಿತಗೊಳಿಸುವ ನಿರ್ಧಾರವನ್ನು ಪರಿಶೀಲಿಸುವಂತೆ ದುಂಬಾಲು ಬಿದ್ದಿದೆ.

ಈ ಸಂಬಂಧ ಪಾಕಿಸ್ತಾನದ ಜಲಸಂಪನ್ಮೂಲ ಸಚಿವಾಲಯದ ಕಾರ್ಯದರ್ಶಿ ಸೈಯದ್ ಅಲಿ ಮುರ್ತಾಜಾ, ಭಾರತದ ಜಲ ಶಕ್ತಿ ಸಚಿವಾಲಯದ ಕಾರ್ಯದರ್ಶಿಗೆ ಪತ್ರ ಬರೆದಿದ್ದು, ಭಾರತ ತನ್ನ ನಿರ್ಧಾರವನ್ನು ಮರುಪರಿಶೀಲಿಸುವಂತೆ ಮನವಿ ಮಾಡಿದೆ.

ಈ ವಿಷಯವನ್ನು ಚರ್ಚಿಸಲು ಪಾಕಿಸ್ತಾನ ಸಿದ್ಧವಾಗಿದೆ ಎಂದು ಹೇಳಿರುವುದಾಗಿ ಮೂಲಗಳು ತಿಳಿಸಿವೆ. ಏಪ್ರಿಲ್ 22 ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಪಾಕ್ ಪ್ರಾಯೋಜಿತ ಉಗ್ರರು ದಾಳಿ ನಡೆಸಿದ ಬಳಿಕ ಏಪ್ರಿಲ್ 23 ರಂದು ಭದ್ರತಾ ಸಭೆಯ ಕ್ಯಾಬಿನೆಟ್ ಸಮಿತಿ ಸಭೆಯಲ್ಲಿ 1960ರಲ್ಲಿ ನಡೆದಿದ್ದ ಸಿಂಧೂ ಜಲ ಒಪ್ಪಂದವನ್ನು ಅಮಾನತುಗೊಳಿಸುವ ಮಹತ್ವದ ನಿರ್ಧಾರವನ್ನು ಕೈಗೊಳ್ಳಲಾಗಿತ್ತು.

ಸಿಂಧೂ ಜಲ ಒಪ್ಪಂದ: ವಿಶ್ವ ಬ್ಯಾಂಕ್ ಮಧ್ಯಸ್ಥಿಕೆಯಲ್ಲಿ ನಡೆದ ಒಪ್ಪಂದದ ಪ್ರಕಾರ, ಪೂರ್ವದ ನದಿಗಳ ನೀರನ್ನು ಭಾರತವು ಬಳಸಿಕೊಳ್ಳಬಹುದು. ಪಶ್ಚಿಮದ ನದಿಗಳ ನೀರನ್ನು ಪಾಕಿಸ್ತಾನವು ಹೆಚ್ಚಾಗಿ ಬಳಸುತ್ತದೆ.

ಭಾರತವು ಪಶ್ಚಿಮ ನದಿಗಳ ಮೇಲೆ ಜಲವಿದ್ಯುತ್ ಯೋಜನೆಗಳನ್ನು ನಿರ್ಮಿಸಬಹುದು. ಆದರೆ, ಕೆಲವು ನಿಯಮಗಳನ್ನು ಪಾಲಿಸಬೇಕು. ಪಾಕಿಸ್ತಾನವು ಭಾರತದ ಯೋಜನೆಗಳ ಬಗ್ಗೆ ಆಕ್ಷೇಪಣೆಗಳನ್ನು ಸಲ್ಲಿಸಬಹುದು.

ಸಿಂಧೂ ನದಿ ಒಪ್ಪಂದದನ್ವಯ ಭಾರತಕ್ಕೆ ಪೂರ್ವ ನದಿಗಳಾದ ಸಟ್ಲೆಜ್, ಬಿಯಾಸ್ ಮತ್ತು ರಾವಿ ನದಿಗಳ ನೀರನ್ನು ಬಳಸುವ ಹಕ್ಕಿದೆ. ಅದೇ ರೀತಿ ಪಾಕಿಸ್ತಾನಕ್ಕೆ ಪಶ್ಚಿಮ

(2ನೇ ಪುಟ ನೋಡಿ)

## ಸರ್ಕಾರದಿಂದಲೇ ಇನ್ನು ಮುಂದೆ 108 ಆಂಬ್ಯುಲೆನ್ಸ್ ಸೇವೆ



ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು:ಮೇ.14: ಯಾವುದೇ ಏಜೆನ್ಸಿ ಮೂಲಕ ಕಾರ್ಯನಿರ್ವಹಿಸದೆ ಸರ್ಕಾರವೇ ಇನ್ನು ಮುಂದೆ 108 ???ಂಬುಲೆನ್ಸ್ ಸೇವೆ ಒದಗಿಸುತ್ತದೆ. ಈಗಾಗಲೇ ಚಾಮರಾಜನಗರದಲ್ಲಿ ಪ್ರಾಯೋಗಿಕವಾಗಿ ನಡೆಸಲಾಗುತ್ತಿದೆ. ಸಂಪೂರ್ಣ ಸೇವೆ ಹಾಗೂ ನಿರ್ವಹಣೆ ಸರ್ಕಾರವೇ ನಡೆಸಲು ಮುಂದಾಗಿದೆ ಎಂದು ಆರೋಗ್ಯ ಸಚಿವ ದಿನೇಶ್? ಗುಂಡೂರಾವ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 108 ???ಂಬುಲೆನ್ಸ್ ಸಿಬ್ಬಂದಿ ಮೂರು ಶಿಫ್ಟ್ ಗಳಲ್ಲಿ ಕೆಲಸ ಮಾಡುವ ವಿಚಾರ ಏಜೆನ್ಸಿ ಮೂಲಕ ನಡೆಯುತ್ತದೆ. ಹೀಗಾಗಿ ಸಿಬ್ಬಂದಿಗಳು ಏಜೆನ್ಸಿ ಜೊತೆ ಮಾತನಾಡಬೇಕು ಎಂದರು. ನಾವು ಯಾವುದೇ ವೇತನ ತಡೆ ಹಿಡಿದಿಲ್ಲ 30 ಸಾವಿರ ಸಿಬ್ಬಂದಿ ವೇತನವಾಗದ ವಿಚಾರವಾಗಿ ಪ್ರತಿಕ್ರಿಯಿಸಿದ್ದು, 2023-24 ರಲ್ಲಿ ಓಪನಿಂಗ್ ಬ್ಯಾಲೆನ್ಸ್ ಹೆಚ್ಚಿತ್ತು. ಆದರೆ ಕಳೆದ ಸರ್ಕಾರದಿಂದ ಓಪನಿಂಗ್ ಬ್ಯಾಲೆನ್ಸ್ ಕಡಿಮೆಯಾಗಿದೆ. ಹೀಗಾಗಿ ನಾವು ರಾಜ್ಯ ಸರ್ಕಾರದಿಂದ ಕೊಡಲು ಆಗುತ್ತಿಲ್ಲ. ಕೇಂದ್ರ ಸರ್ಕಾರ ಹಣ ಬಿಡುಗಡೆ ಮಾಡಿಲ್ಲ. ಕೇಂದ್ರ ಸರ್ಕಾರ ಹಣ ಬಿಡುಗಡೆ ಮಾಡದ ಹಿನ್ನೆಲೆ ತಡವಾಗಿದೆ. ಇನ್ನೆರಡು ಮೂರು ದಿನಗಳಲ್ಲಿ ವೇತನ ಆಗಬಹುದು. ನಾವು ಯಾವುದೇ ವೇತನ ತಡೆ ಹಿಡಿದಿಲ್ಲ ಎಂದರು.


ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮದಡಿ ಕರ್ತವ್ಯ ನಿರ್ವಹಿಸುತ್ತಿರುವ ಎಂಬಿಬಿಎಸ್ ವೈದ್ಯರು, ತಜ್ಞ ವೈದ್ಯರು ಹಾಗೂ ಎಸ್??ಎನ್??ಸಿಯು ಮತ್ತು ಐಸಿಯುದಲ್ಲಿ ಕಾರ್ಯನಿರ್ವಹಿಸುವ ಸ್ಟಾಫ್ ನರ್ಸ್?ಗಳ ವೇತನ ಪರಿಷ್ಕರಿಸಿ ಗಣನೀಯವಾಗಿ ಹೆಚ್ಚಳ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ನಾನು ಯಾರಿಗೂ ಶಿಫಾರಸು ಮಾಡಿಲ್ಲ

ಕುಕ್ಕೆ ಸುಬ್ರಹ್ಮಣ್ಯ ವ್ಯವಸ್ಥಾಪನಾ ಆಡಳಿತ ಮಂಡಳಿ ಅಧ್ಯಕ್ಷರಾಗಿ ಹರೀಶ್ ಆಯ್ಕೆ ವಿಚಾರವಾಗಿ, ನಾನು ಯಾರಿಗೂ ಶಿಫಾರಸು ಮಾಡಿಲ್ಲ. ಚುನಾವಣೆ ಮೂಲಕವೇ ಹರೀಶ್ ಇಂಜಾಡಿ ಆಯ್ಕೆ ಮಾಡಿರುವುದು. ಇದು ಒಳ್ಳೆ ಬೆಳವಣಿಗೆ ಅಲ್ಲ. ಇದರ ಬಗ್ಗೆ ಮುಜರಾಯಿ ಇಲಾಖೆ ಸಚಿವರ ಜತೆ ಮಾತನಾಡುತ್ತೇನೆ. ರೂಲ್ಸ್ ಪ್ರಕಾರ ಹರೀಶ್?ನನ್ನು ಬದಲಾವಣೆ ಮಾಡಲು ಆಗುವುದಿಲ್ಲ. 3 ವರ್ಷ ಅಧಿಕಾರಾವಧಿ ಇರುತ್ತದೆ ಈ ಬಗ್ಗೆ ಮಾಹಿತಿ ಪಡೆಯುತ್ತೇನೆ

(2ನೇ ಪುಟ ನೋಡಿ)

## ಟ್ರಂಪ್ ಬಳಿ ವಿದೇಶಾಂಗ ನೀತಿ ಅಡವಿಟ್ಟಿದ್ದಿರಾ ಪ್ರಧಾನಿಗೆ ಸಚಿವ ಖರ್ಗೆ ಪ್ರಶ್ನೆ



ಮಲ್ಲಮ್ಮನುಡಿ ವಾರ್ತೆ
ಕಲಬುರಗಿ,ಮೇ.14:ಭಾರತ-ಪಾಕಿಸ್ತಾನ ಮಧ್ಯೆ ನಡೆದ ಅಘೋಷಿತ ಯುದ್ಧ ನಿಲ್ಲಿಸುವಂತೆ ಕದನ ವಿರಾಮ ಮಾಡಿಸಿದ್ದು ತಾವೇ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪದೇಪದೆ ಹೇಳುತ್ತಿರುವುದನ್ನು ನೋಡಿದರೆ ಪ್ರಧಾನಿ ಮೋದಿ ಭಾರತದ ವಿದೇಶಾಂಗ ನೀತಿಯನ್ನು ಟ್ರಂಪ್ ಬಳಿ ಅಡವಿಟ್ಟಂತೆ ಕಾಣುತ್ತದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಖಾರವಾಗಿ ನುಡಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೋದಿ ಆಪ್ತ ಮಿತ್ರ ಟ್ರಂಪ್ ಈವರೆಗೆ ನಾಲ್ಕು ಬಾರಿ ಭಾರತ ಮತ್ತು ಪಾಕ್ ಮಧ್ಯೆ ಯುದ್ಧ ನಿಲ್ಲಿಸಿರುವುದಾಗಿ ಹೇಳಿಕೊಂಡಿದ್ದಾರೆ. ಮಂಗಳವಾರ ಸೌದಿ ಅರೇಬಿಯಾದಲ್ಲಿಯೂ ಟ್ರಂಪ್ ಅದನ್ನೇ ಹೇಳಿದ್ದಾರೆ. ಇಷ್ಟು ಸಾಲದು ಎಂಬಂತೆ ನಮ್ಮನ್ನು ಉಗ್ರ ರಾಷ್ಟ್ರಕ್ಕೆ ಟ್ರಂಪ್ ಹೋಲಿಕೆ ಮಾಡುತ್ತಿದ್ದಾರೆ. ಇಷ್ಟಾದರೂ, ಮೋದಿ ಏಕೆ ಮೌನವಹಿಸಿದ್ದಾರೆ ಎಂದು ಅಚ್ಚರಿ ವ್ಯಕ್ತಪಡಿಸಿದರು.


ಪ್ರತಿ ಬಾರಿಯೂ ತಮ್ಮಿಂದಲೇ ಕದನವಿರಾಮ ಸಾಧ್ಯವಾಗಿದೆ ಎಂದು ಟ್ರಂಪ್ ಹೇಳುತ್ತಿದ್ದಾರೆ. ಹಾಗಾದರೆ, ನಮ್ಮ ವಿದೇಶಾಂಗ ನೀತಿ ಟ್ರಂಪ್ ಅವರಿಗೆ ಅಡವಿಡಲಾಗಿದೆಯೇ ಎಂದು ಪ್ರಶ್ನಿಸಿದರು.

ಒಂದು ಕಡೆ ಟ್ರಂಪ್ ನಿಮ್ಮ ಎರಡು ದೇಶಗಳು ನನ್ನಿಂದಲೇ ನಡೆಯುತ್ತಿವೆ ಎಂಬರ್ಥದಲ್ಲಿ ಮಾತನಾಡುತ್ತಿದ್ದಾರೆ. ಆದರೂ ಮೋದಿ ಮೌನವಾಗಿದ್ದಾರೆ. ನಮ್ಮ ರಾಷ್ಟ್ರದ ಘನತೆ-ಗೌರವ ಬೇರೆ ರಾಷ್ಟ್ರದ ಬಳಿ ಇಡಬೇಡಿ. ಅವರು (ಟ್ರಂಪ್) ನಿಮಗೆ ಸ್ನೇಹಿತರೇ ಆಗಿದ್ದರೂ ಸರಿ; ನಮ್ಮನ್ನು ಅವರ ಬಳಿ ಅಡವಿಡಬೇಡಿ ಎಂದರು.

ಪ್ರಧಾನಿ ಮೋದಿ ಇನ್ನಾದರೂ ಬಹಿರಂಗವಾಗಿ ಸುದ್ದಿಗೋಷ್ಠಿ ಮಾಡುವ ಧೈರ್ಯ ಪ್ರದರ್ಶಿಸಲಿ ಎಂದು ಸವಾಲು ಹಾಕಿದ ಪ್ರಿಯಾಂಕ್;

(2ನೇ ಪುಟ ನೋಡಿ)

## ಮುಂಗಾರು ಆರ್ಭಟ: ಈ ಬಾರಿ ನಗರ ಪ್ರದೇಶಗಳಲ್ಲಿ ಹೆಚ್ಚಿನ ಮಳೆ ಸಾಧ್ಯತೆ



ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು:ಮೇ.14:ಭಾರತದಾದ್ಯಂತ ಈ ನೈಋತ್ಯ ಮಾನ್ಸೂನ್‌ನಲ್ಲಿ ಸಾಮಾನ್ಯಕ್ಕಿಂತ ಶೇ.5 ರಷ್ಟು ಹೆಚ್ಚಿನ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತ ಹವಾಮಾನ ಇಲಾಖೆ (ಐಎಂಡಿ) ಮುನ್ಸೂಚನೆ ನೀಡಿದ್ದಾರೆ. ಆದರೆ ಕರ್ನಾಟಕಕ್ಕೆ, ವಿಶೇಷವಾಗಿ ಬೆಂಗಳೂರಿನಂತಹ ನಗರ ಪ್ರದೇಶಗಳಲ್ಲಿ ಹೆಚ್ಚಿನ ಮಳೆಯಾಗುವ ಬಗ್ಗೆ ಕರ್ನಾಟಕದ ಹವಾಮಾನ ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.

ಜೂನ್ 1 ರಂದು ಮುಂಗಾರು ಪ್ರವೇಶಿಸಬೇಕಿತ್ತು, ಆದರೆ ಐದು ದಿನ ಮುಂಚಿತವಾಗಿ, ಮೇ 27 ರಂದು ಕೇರಳ ಕರಾವಳಿಯನ್ನು ಮಾನ್ಸೂನ್ ಅಪ್ಪಳಿಸುವ ಸಾಧ್ಯತೆಯಿದೆ. ಜಾಗತಿಕ ಹವಾಮಾನ ಅಂಶಗಳ ಆಧಾರದ ಮೇಲೆ ಇಡೀ ದೇಶಕ್ಕೆ ಹೆಚ್ಚಿನ ಮಳೆಯ ಮುನ್ಸೂಚನೆ ನೀಡಲಾಗಿದೆ ಎಂದು ಐಎಂಡಿ-ಬೆಂಗಳೂರಿನ ನಿರ್ದೇಶಕ ಎನ್. ಪುವಿಯರಸನ್ ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್‌ಗೆ ತಿಳಿಸಿದ್ದಾರೆ. ದಕ್ಷಿಣ ಒಳನಾಡಿನಲ್ಲಿ ಹೆಚ್ಚುವರಿ ಮಳೆಯಾಗುವ ಮುನ್ಸೂಚನೆ ನೀಡಲಾಗಿದೆ. ಹೆಚ್ಚುತ್ತಿರುವ ತಾಪಮಾನ ಮತ್ತು ನಗರೀಕರಣದ ಎಫೆಕ್ಟ್ ಮಳೆಯ ಪ್ರಮಾಣದಲ್ಲಿಯೂ ಸಹ ಪಾತ್ರವಹಿಸುತ್ತವೆ ಎಂದಿದ್ದಾರೆ.

(2ನೇ ಪುಟ ನೋಡಿ)

## ಒಂದನೇ ಪುಟದಿಂದ

### ಅಡವಿಟ್ಟಿದ್ದಿರಾ ಪ್ರಧಾನಿಗೆ ಸಚಿವ ಖರ್ಗೆ ಪ್ರಶ್ನೆ

ಮೋದಿಯವರ ಮನ್ ಕೀ ಬಾತ್ ಕೇಳಿ ಕೇಳಿ ಜನರ ಕಿವಿ ಕಿತ್ತು ಹೋಗಿದೆ. ಹಾಗಾಗಿ, ಕನಿಷ್ಠ ನಿಮ್ಮದೇ ಮೀಡಿಯಾ ಸ್ನೇಹಿತರು ಹಾಗೂ ಇತರ ಮಾಧ್ಯಮದವರ ಜೊತೆ ಸುದ್ದಿಗೋಷ್ಠಿ ಮಾಡಿದರೆ ನಮ್ಮ ಪ್ರಧಾನಿಗೆ 56 ಇಂಚಿನೆದೆ ಇದೆ ಎಂದು ನಾವೆಲ್ಲರೂ ಒಪ್ಪುತ್ತೇವೆ ಎಂದು ಲೇವಡಿ ಮಾಡಿದರು.

ಯುದ್ಧ ವಿರಾಮ ಘೋಷಣೆ ಬಳಿಕ ಅದಂಪುರ ಸೇನಾ ಕೇಂದ್ರಕ್ಕೆ ಪ್ರಧಾನಿ ಮೋದಿ ಭೇಟಿ ನೀಡಿ ನಮ್ಮ ಸೈನಿಕರಿಗೆ ನೈತಿಕ ಧೈರ್ಯ ತುಂಬುವ ಕೆಲಸ ಮಾಡಿದ್ದಾರೆ. ಆದರೆ ಮೋದಿ ಹಲವು ಪ್ರಶ್ನೆಗಳಿಗೆ ಇಲ್ಲಿಯವರೆಗೂ ಉತ್ತರಿಸಿಲ್ಲ ಎಂದರು.ಏ.22ರಂದು ಪಹಲ್ಗಾಂ ಘಟನೆ ನಡೆದಾಗ್ಯೂ ಪ್ರಧಾನಿ ಮೋದಿ ಬಿಹಾರ ಚುನಾವಣೆಯಲ್ಲಿ ಕಂಡಿದ್ದಾರೆ. ಇದಾದ ಬಳಿಕ ಅವರು ಎಲ್ಲಿಯೂ ಕಂಡುಬಂದಿಲ್ಲ. ಮಾಕ್ ಡ್ರಿಲ್ ನಡೆದ ಭಾರತದ ಗಡಿ ಭಾಗದಲ್ಲೂ ಮೋದಿ ಕಂಡು ಬರಲಿಲ್ಲ. ಟ್ರಂಪ್ ಯುದ್ಧ ವಿರಾಮ ಘೋಷಣೆ ಮಾಡಿದ ಬಳಿಕ ಮೇ 12ರಂದು ಪ್ರಧಾನಿ ಮೋದಿ ಮನ್ ಕೀ ಬಾತ್ ಆಡಿದರು. ಹಾಗಾದರೆ, ಏಪ್ರಿಲ್ 22ರಿಂದ ಮೇ 12ರವರೆಗೆ ಪ್ರಧಾನಿ ಮೋದಿ ಎಲ್ಲಿಗೆ ಹೋಗಿದ್ದರು ಎಂಬುದನ್ನು ಬಹಿರಂಗಪಡಿಸಲಿ ಎಂದು ಸಚಿವ ಪ್ರಿಯಾಂಕ್ ಮತ್ತೊಮ್ಮೆ ಸವಾಲೆಸೆದರು.

### 108 ಆಂಬ್ಯುಲೆನ್ಸ್ ಸೇವೆ

ಎಂದರು.ನಾಳೆಯಿಂದ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಅಸ್ತಿತ್ವ ವಿಚಾರವಾಗಿ ಮಾತನಾಡಿದ ಅವರು, ಸರ್ಕಾರ ಬಂದ ಮೇಲೆ ಹೊಸ ಕಾಯಕಲ್ಪ ಕೊಟ್ಟಿದೆ. ಅಧಿವೇಶನದಲ್ಲಿ ಕೂಡ ಚರ್ಚೆ ಆಗಿ ಶಾಸಕರ ಸಮಿತಿ ವರದಿ ಕೊಟ್ಟು, ಸಾರ್ವಜನಿಕರ ಜೊತೆ ಚರ್ಚೆ ಆಗಿ ರಾಜ್ಯ ಲರು ಅನುಮೋದನೆ ಕೊಟ್ಟು ಮಾನ್ಯತೆ ಸಿಕ್ಕಿದೆ. ಬೆಂಗಳೂರು ವಿಶ್ವ ದರ್ಜೆ ನಗರ. ಆಡಳಿತ ವ್ಯವಸ್ಥೆ ಸುಧಾರಣೆ ಮಾಡುವ ಅವಶ್ಯಕತೆ ಇದೆ ಎಂದರು.

### ಪ್ರದೇಶಗಳಲ್ಲಿ ಹೆಚ್ಚಿನ ಮಳೆ ಸಾಧ್ಯತೆ

ಮಳೆಯ ಮೇಲೆ ಪ್ರಭಾವ ಬೀರುವಲ್ಲಿ ತಾಪಮಾನ ಏರಿಕೆಯೂ ನಿರ್ಣಾಯಕ ಪಾತ್ರ ವಹಿಸುತ್ತದೆ ಎಂದು ಪುವಿಯರಸನ್ ತಿಳಿಸಿದ್ದಾರೆ. ಕಳೆದ ವರ್ಷ, ಬೆಂಗಳೂರಿನಲ್ಲಿ ದಾಖಲಾದ ಗರಿಷ್ಠ ತಾಪಮಾನವು ಮೇ ತಿಂಗಳಲ್ಲಿ ಸುಮಾರು 36 ಡಿಗ್ರಿ ಸೆಲ್ಸಿಯಸ್ ಆಗಿತ್ತು. ಈ ವರ್ಷ, ಇದು 33 ಡಿಗ್ರಿ ಸೆಲ್ಸಿಯಸ್ ಇದೆ. ಪ್ರಸ್ತುತ, ಕರ್ನಾಟಕದ ಹೆಚ್ಚಿನ ಭಾಗಗಳಲ್ಲಿ ಪೂರ್ವ ಮುಂಗಾರು ಮಳೆ ಉತ್ತಮವಾಗಿದೆ, ಆದರೆ ಬೆಂಗಳೂರಿನಲ್ಲಿ ಅಷ್ಟೊಂದು ಹೆಚ್ಚು ಮಳೆಯಾಗಿಲ್ಲ.ಬೆಳಗಾವಿ ಸೇರಿದಂತೆ ಇತರ ಜಿಲ್ಲೆಗಳಲ್ಲಿ ಅತಿ ಹೆಚ್ಚು ಮಳೆಯಾಗುತ್ತಿದೆ. ಲಭ್ಯವಿರುವ ಮಾಹಿತಿಯ ಪ್ರಕಾರ, ಕರ್ನಾಟಕವು ಮೇ 2023 ರಲ್ಲಿ 86.4 ಮಿಮೀ ಮಳೆಯನ್ನು ಕಂಡಿದೆ, ಇದು ಸಾಮಾನ್ಯ ಮುನ್ಸೂಚನೆಯ 73.7 ಮಿಮೀ ಮಳೆಯಾಗಿದೆ. ಮೇ 2024 ರಲ್ಲಿ, ರಾಜ್ಯದಲ್ಲಿ 118 ಮಿಮೀ ಮಳೆಯಾಗಿತ್ತು.

ಇದಲ್ಲದೆ, ಬೆಂಗಳೂರಿನಲ್ಲಿ ಮೇ 2024 ರಲ್ಲಿ 181.5 ಮಿಮೀ ಮತ್ತು ಮೇ 2023 ರಲ್ಲಿ 305.4 ಮಿಮೀ ಮಳೆಯಾಗಿತ್ತು. ಹವಾಮಾನ ತಜ್ಞ ಪ್ರೊ. ಎಂ.ಬಿ. ರಾಜೇಗೌಡ ಅವರ ಪ್ರಕಾರ, ರಾಜ್ಯದಲ್ಲಿ ಹೆಚ್ಚಿದ ಮಳೆಯನ್ನು ರೈತರು ಮತ್ತು ಕೃಷಿ ಪ್ರದೇಶಗಳು ಹೆಚ್ಚಿನ ಕೃಷಿಗಾಗಿ ಸದುಪಯೋಗಪಡಿಸಿಕೊಳ್ಳಬೇಕು. ರೈತರು ದೀರ್ಘಾವಧಿಯ ಬೆಳೆಗಳಿಗೆ ಹೋಗಬಹುದು ಎಂದು ಅವರು ಸೂಚಿಸಿದ್ದಾರೆ.ಬೆಂಗಳೂರಿನ ಸನ್ನಿವೇಶದ ಬಗ್ಗೆ ವಿವರಿಸಿದ ಅವರು, ಹೆಚ್ಚಿದ ಶಾಖ ಪದರಗಳು ಹೆಚ್ಚಿನ ಮೋಡಗಳನ್ನು ಸೆಳೆಯುತ್ತವೆ. "1950 ರ ದಶಕದಲ್ಲಿ 600 ಮಿ.ಮೀ ಮಳೆಯಾಗಿತ್ತು, ಈಗ ಅದು 1,000 ಮಿ.ಮೀ. ಆಗಿದೆ. ಬೇಸಿಗೆಯ ಉಷ್ಣತೆ ಹೆಚ್ಚಾಗಿದೆ, ಮತ್ತು ಮಳೆಯೂ ಸಹ ಹೆಚ್ಚಾಗಿದೆ" ಎಂದು ಅವರು ವಿವರಿಸಿದರು.ಆದಾಗ್ಯೂ, ಕರ್ನಾಟಕ ರಾಜ್ಯ ನೈಸರ್ಗಿಕ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧಿಕಾರಿಗಳು, ಪೂರ್ವ ಮಾನ್ಸೂನ್ ಮಳೆ ಈಗಾಗಲೇ ಪ್ರಾರಂಭವಾಗಿದೆ ಎಂದು ಹೇಳಿದರು. ನಗರ ಪ್ರದೇಶಗಳಲ್ಲಿ ತೀವ್ರ ಮಳೆ ಮತ್ತು ಪ್ರವಾಹವು ಈಗ ಹೊಸ ಸಾಮಾನ್ಯವಾಗಿದೆ ಎಂದು ಅಧಿಕಾರಿಯೊಬ್ಬರು ಹೇಳಿದರು. ಕರ್ನಾಟಕದ ಕರಾವಳಿ ಮತ್ತು ಉತ್ತರ ಒಳನಾಡಿನಲ್ಲಿಯೂ ಸಹ ಭಾರೀ ಮಳೆಯಾಗಲಿದೆ ಎಂದು ಅಧಿಕಾರಿಯೊಬ್ಬರು ಹೇಳಿದರು.

### 3ಕೋಟಿ ಪಂಗನಾಮ

ಜೋಶಿಯನ್ನು ಸಂಪರ್ಕಿಸಿದ್ದ ಆರೋಪಿಗಳಾದ ರಿದ್ದಿ, ನಿನಾದ, ಕೇಶವ ಹಣ ಡಬಲ್ ಮಾಡೋ ಆಸೆ ಹುಟ್ಟಿಸಿದ್ದಾರೆ. ಈ ವಂಚಕರ ಜಾಲದಲ್ಲಿ ಸಿಲುಕಿದ ಜೋಶಿ ತನ್ನ ಖಾತೆ ಸೇರಿದಂತೆ ಪತ್ನಿ, ಅತ್ತಿಗೆ ಖಾತೆಯಿಂದಲೂ ಖದೀಮರಿಗೆ ಹಣ ವರ್ಗಾವಣೆ ಮಾಡಿದ್ದಾರೆ. ಈವರೆಗೂ ವಂಚಕರನ್ನೇ ನಂಬಿ ಜೋಶಿ 3 ಕೋಟಿ ವರ್ಗಾಯಿಸಿದ್ದಾರೆ. ಆದ್ರೀಗ ಹಣ ಕೈಸೇರ್ತಿದ್ದಂತೆ ಮೂವರು ಆರೋಪಿಗಳು ಎಸ್ಕೇಪ್ ಆಗಿದ್ದಾರೆ. ಟೆಕ್ಕಿ ಸಂಪರ್ಕಿಸಲು ಯತ್ನಿಸಿದ್ರೆ ಆರೋಪಿಗಳೆಲ್ಲಾ ನಾಟ್ ರೀಚಬಲ್ ಆಗಿದ್ದಾರೆ. ಹೀಗಾಗಿ ತಾನು ಮೋಸ ಹೋದೆ ಅಂತಾ ಅರಿತ ರಘುವೀರ್ ಜೋಶಿ ಇದೀಗ ಬೀದರ್ ನ ಸೆನ್ ಠಾಣೆಗೆ ದೂರು ದಾಖಲಿಸಿದ್ದಾರೆ. ಇನ್ನು ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಖದೀಮರ ಬಂಧನಕ್ಕೆ ಖೆಡ್ಡಾ ತೋಡಿದ್ದಾರೆ.

### ಯೋಧ ಪಿ ಕೆ ಶಾ ಬಿಡುಗಡೆ

ಇತ್ತೀಚೆಗೆ ಅಜಾಗರೂಕತೆಯಿಂದ ಆಕಸ್ಮಿಕವಾಗಿ ಪಾಕಿಸ್ತಾನ ಗಡಿ ಪ್ರವೇಶ ಮಾಡಿದ್ದ ಬಿಎಸ್‌ಎಫ್‌ಯೋಧ ಕೊನೆಗೂ ಬಿಡುಗಡೆಯಾಗಿದ್ದಾನೆ.ಏಪ್ರಿಲ್ ನಲ್ಲಿ ಭಾರತ ಪಾಕ್ ಗಡಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಅಜಾಗರೂಕತೆಯಿಂದ ಪಾಕಿಸ್ತಾನ ಗಡಿ ಪ್ರವೇಶ ಮಾಡಿದ್ದ ಭಾರತೀಯ ಗಡಿ ಭದ್ರತಾ ಪಡೆಯ ಯೋಧ ಪೂರ್ಣಂ ಕುಮಾರ್ ಶಾನನ್ನು ಪಾಕಿಸ್ತಾನ ಸೇನೆ ಬಿಡುಗಡೆ ಮಾಡಿದೆ. ಈಗಾಗಲೇ ಯೋಧ ಪಿಕೆ ಶಾನನ್ನು ಭಾರತದ ವಶಕ್ಕೆ ನೀಡಲಾಗಿದೆ ಎಂದು ಸೇನಾ ಮೂಲಗಳು ತಿಳಿಸಿವೆ.ಪೂರ್ಣಮ್ ಕುಮಾರ್ ಶಾ ಅವರನ್ನು ಅಮೃತಸರದ ಅಟ್ಟಾರಿಯಲ್ಲಿರುವ ಜಂಟಿ ಚೆಕ್ ಪೋಸ್ಟ್ ಮೂಲಕ ಬೆಳಿಗ್ಗೆ 10.30 ರ ಸುಮಾರಿಗೆ ಹಸ್ತಾಂತರಿಸಲಾಯಿತು ಎಂದು ಬಿಎಸ್‌ಎಫ್ ತಿಳಿಸಿದೆ. ಏಪ್ರಿಲ್ 23, 2025 ರಿಂದ ಪಾಕಿಸ್ತಾನ ರೇಂಜರ್‌ಗಳ ವಶದಲ್ಲಿದ್ದ ಜವಾನ್ ಪಿಕೆ ಶಾ ಅವರನ್ನು ಭಾರತಕ್ಕೆ ಹಸ್ತಾಂತರಿಸಲಾಗಿದೆ ಎಂದು ಗಡಿ ಭದ್ರತಾ ಪಡೆ (ಬಿಎಸ್‌ಎಫ್) ಬುಧವಾರ ತಿಳಿಸಿದೆ.

ಅಧಿಕಾರಿಗಳ ಪ್ರಕಾರ, ಫಿರೋಜ್‌ಪುರ ಸೆಕ್ಟರ್‌ನಲ್ಲಿ ಆಕಸ್ಮಿಕವಾಗಿ ಎಲ್‌ಓಸಿಯ ಶೂನ್ಯ ರೇಖೆಯನ್ನು ದಾಟಿದ ನಂತರ ಏಪ್ರಿಲ್ 23 ರಂದು ಶಾ ಅವರನ್ನು ಪಾಕಿಸ್ತಾನ ರೇಂಜರ್‌ಗಳು ಬಂಧಿಸಿದ್ದರು. ಏಪ್ರಿಲ್ 22 ರಂದು ಕಾಶ್ಮೀರದ ಪಹಲ್ಗಾಮ್‌ನಲ್ಲಿ 26 ಜನರು ಸಾವನ್ನಪ್ಪಿದ ವಿನಾಶಕಾರಿ ಭಯೋತ್ಪಾದಕ ದಾಳಿಯ ಒಂದು ದಿನದ ನಂತರ ಅವರನ್ನು ವಶಕ್ಕೆ ಪಡೆಯಲಾಗಿತ್ತು.

### ಮೌಲ್ಯದ ಸ್ವತ್ತು, ನಕಲಿ ಪಿಸ್ತೂಲ್ ಜಪ್ತಿ

ಅವರನ್ನೊಳಗೊಂಡ ತಂಡ ರಚಿಸಲಾಗಿತ್ತು.ಈ ತಂಡ ತನಿಖೆ ನಡೆಸಿ ಆರೋಪಿಯನ್ನು ವಶಕ್ಕೆ ಪಡೆದು ಮೂರು ಮನೆ ಕಳ್ಳತನ ಪ್ರಕರಣಗಳಲ್ಲಿ ಕಳವು ಮಾಡಿದ್ದ 35 ಗ್ರಾಂ.ಬಂಗಾರದ ಆಭರಣ, 500 ಗ್ರಾಂ.ಬೆಳ್ಳಿ ವಸ್ತುಗಳು ಮತ್ತು ಕೃತ್ಯಕ್ಕೆ ಉಪಯೋಗಿಸಿದ ಬೈಕ್ ಸೇರಿ 4 ಲಕ್ಷ ರೂ.ಮೌಲ್ಯದ ವಸ್ತುಗಳನ್ನು ಜಪ್ತಿ ಮಾಡಿದೆ.4 ಪ್ರಕರಣಗಳಲ್ಲಿ ಸರಗಳ್ಳತನ ಮಾಡಿದ್ದ ಒಟ್ಟು 140 ಗ್ರಾಂ.ಬಂಗಾರದ ಆಭರಣ, ಕೃತ್ಯಕ್ಕೆ ಬಳಸಿದ ಬೈಕ್ ಸೇರಿ 11,90,000 ರೂ.ಮೌಲ್ಯದ ವಸ್ತುಗಳನ್ನು ಜಪ್ತಿ ಮಾಡಲಾಗಿದೆ.ದರೋಡೆ ಪ್ರಕರಣಕ್ಕೆ ಸಂಬಂಧಿಸಿದಂತೆ ಒಬ್ಬ ಆರೋಪಿಯನು ಪೂನಾದಲ್ಲಿ ಬಂಧಿಸಲಾಗಿದೆ. ಬೀದರ ತಾಲೂಕಿನ ಹೋನ್ನಿಕೇರಿ ಅರಣ್ಯ ಪ್ರದೇಶದಲ್ಲಿ ಅಡಗಿರುವ ಬಗ್ಗೆ ಬಂದ ಖಚಿತ ಮಾಹಿತಿಯ ಮೇರೆಗೆ ಆರೋಪಿತರ ಪತ್ತೆಗಾಗಿ ತಪಾಸಣೆ ಮಾಡುವ ಕಾಲಕ್ಕೆ ಪೊಲೀಸ್ ಸಿಬ್ಬಂದಿಯವರ ಮೇಲೆ ಹಲ್ಲೆ ಮಾಡಿ ಓಡಿ ಹೋಗುವಾಗ ಸದರಿ ಆರೋಪಿತನ ಮೇಲೆ ಗುಂಡು ಹಾರಿಸಿ ದಸ್ತಗಿರಿ ಮಾಡಲಾಗಿದೆ. ನಂತರ ಇನ್ನೊಬ್ಬ ಆರೋಪಿತನನ್ನು ಕೂಡ ದಸ್ತಗಿರಿ ಮಾಡಿ ಆರೋಪಿತರ ವಶದಿಂದ ದರೋಡೆ ಮಾಡಿದ 132 ಗ್ರಾಂ. ಬಂಗಾರದ ಆಭರಣಗಳು ಮತ್ತು 480 ಗ್ರಾಂ ಬೆಳ್ಳಿ, ಹಾಗೂ ಕೃತ್ಯಕ್ಕೆ ಬಳಸಿದ ಒಂದು ಮಾರುತಿ ಇಕೋ ವಾಹನ, ಒಂದು ಝರ್ರಾ ನಕಲಿ ಪಿಸ್ತೂಲ್ ಮತ್ತು 10 ಝರ್ರಾಗಳು ಹೀಗೆ ಒಟ್ಟು ಅಂ.ಕೀ. 14,90,100/–ರೂ. ಬೆಲೆಬಾಳುವ ಮುದ್ದೆ ಮಾಲನ್ನು ಜಪ್ತಿ ಮಾಡಲಾಗಿದೆ. ದರೋಡೆ, ಸುಲಿಗೆ ಹಾಗೂ ಮನೆ ಕಳವು ಪ್ರಕರಣಗಳಲ್ಲಿ ಒಟ್ಟು 30,80,100/– ರೂ ಬೆಲೆ ಬಾಳುವ ಸ್ವತ್ತನ್ನು ಜಪ್ತಿ ಮಾಡಿ ಐದು (05) ಜನ ಆರೋಪಿತರನ್ನು ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಗಿದೆ ಎಂದು ತಿಳಿಸಿದರು.

ದರೋಡೆ, ಸುಲಿಗೆ ಮತ್ತು ಮನೆ ಕಳ್ಳತನ ಪ್ರಕರಣಗಳನ್ನು ಪತ್ತೆ ಹಚ್ಚುವಲ್ಲಿ ಯಶಸ್ವಿಯಾದ ಅಧಿಕಾರಿ ಮತ್ತು ಸಿಬ್ಬಂದಿ ಕಾರ್ಯವನ್ನು ಅವರು ಶ್ಲಾಘಿಸಿದರು.

### ಪರಿಶೀಲಿಸುವಂತೆ ಪಾಕ್ ಮನವಿ

ನದಿಗಳಾದ ಸಿಂಧೂ, ಝೀಲಂ ಮತ್ತು ಚೆನಾಬ್ ನದಿಗಳ ನೀರನ್ನು ಬಳಸುವ ಹಕ್ಕಿದೆ.

ಆದರೆ ಈಗ ಭಾರತ ತನಗೆ ಇಷ್ಟ ಬಂದ ಸಮಯದಲ್ಲಿ ನೀರನ್ನು ಜಲಾಶಯದಿಂದ ಹರಿಸುತ್ತಿದೆ. ರಕ್ತ ಮತ್ತು ನೀರು ಜೊತೆಯಾಗಿ ಹರಿಯಲು ಸಾಧ್ಯವಿಲ್ಲ. ಭಯೋತ್ಪಾದಕತೆ ಮತ್ತು ಮಾತುಕತೆ ಎರಡು ಜೊತೆಯಾಗಿ ಸಾಗುವುದಿಲ್ಲ. ಉಗ್ರರ ವಿರುದ್ಧ ಪಾಕ್ ಕಠಿಣ ಕ್ರಮ ಕೈಗೊಳ್ಳುವವರೆಗೂ ಈ ಒಪ್ಪಂದ ಅಮಾನತಿನಲ್ಲಿ ಇರಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಈ ಹಿಂದೆ ಹೇಳಿಕೆ ನೀಡಿದ್ದರು.

ಹೀಗಾಗಿ ಮುಂದಾಗುವ ಅನಾಹುತಗಳನ್ನು ಅಂದಾಜಿಸಿರುವ ಪಾಕಿಸ್ತಾನ ಸಿಂಧೂ ನದಿ ಜಲ ಒಪ್ಪಂದವನ್ನು ಪುನರ್ ಪರಿಶೀಲಿಸುವಂತೆ ಭಾರತಕ್ಕೆ ಮನವಿ ಮಾಡಿದೆ ಎನ್ನಲಾಗಿದೆ.

### ಉಗ್ರರನ್ನು ಸಾಕುತ್ತಿರುವ ಕಾಂಗ್ರೆಸ್

ಹಿರಿಯ ಸಹೋದರನಾಗಿ ನಿಮಗೆ ನನ್ನ ಸಣ್ಣ ಸಲಹೆ. ನಿಮ್ಮ ಕಾಂಗ್ರೆಸ್

ಪಕ್ಷದ ಸದಸ್ಯರು ರಾಹುಲ್ ಗಾಂಧಿ ಅವರ ಮೇಲಿನ ವಿಶ್ವಾಸವನ್ನು ಕಳೆದುಕೊಂಡು ಇದ್ದಕ್ಕಿದ್ದಂತೆ ಇಂದಿರಾ ಗಾಂಧಿಯನ್ನು ನೆನಪಿಸಿಕೊಳ್ಳಲು ಪ್ರಾರಂಭಿಸಿದ್ದಾರೆ. ಒಂದು ದಿನ ನೀವು ಇಂದಿರಾ

ಗಾಂಧಿಯವರ ಉತ್ತರಾಧಿಕಾರಿಯಾಗಬಹುದು ಎಂಬ ಭ್ರಮೆಯಲ್ಲಿರಬೇಡಿ. ನಿಮ್ಮ ತಂದೆ ಪಕ್ಷಕ್ಕೆ 50 ವರ್ಷಗಳ ಸೇವೆ ಸಲ್ಲಿಸಿದ ನಂತರ ಶ್ರೀ ಮಲ್ಲಿಕಾರ್ಜುನ ಖರ್ಗೆ ಅವರು, ಕರ್ನಾಟಕದ ಮುಖ್ಯಮಂತ್ರಿಯಾಗಲು ಸಹ ಸಾಧ್ಯವಾಗಲಿಲ್ಲ. ಇಂದಿರಾ ಗಾಂಧಿ ಅವರ ಉತ್ತರಾಧಿಕಾರಿಯಾಗುವ ಕನಸು ಕಾಣಲು ನಿಮಗೆ ಹೇಗೆ

ಸಾಧ್ಯ ಎಂದು ವ್ಯಂಗ್ಯವಾಡಿದ್ದಾರೆ.

ಅಲ್ಲದೇ ಪಾಕಿಸ್ತಾನವು ತನ್ನ ಪತ್ರಿಕಾಗೋಷ್ಠಿಗಳಲ್ಲಿ ಭಾರತದ ಮೇಲೆ ದಾಳಿ ಮಾಡಲು ಮತ್ತು ಅವಮಾನಿಸಲು ಎಐಸಿಸಿ ಅಧ್ಯಕ್ಷ ಹಾಗೂ ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವೀಡಿಯೊ ಹೇಳಿಕೆಗಳನ್ನು ಬಳಸುತ್ತಿದೆ.

ಅಲ್ಲದೇ

ತನ್ನನ್ನು ತಾನು ಮುಗ್ಧ ಎಂದು ಬಿಂಬಿಸಿಕೊಳ್ಳಲು ಪ್ರಯತ್ನಿಸುತ್ತಿದೆ. ಪಾಕಿಸ್ತಾನವು ತನ್ನ ಸಂವಹನವನ್ನು / ಕಮ್ಯುನಿಕೇಷನ್ ಅನ್ನು ಭಾರತೀಯ ಕಾಂಗ್ರೆಸ್‌ಗೆ ಹೊರುಗುತ್ತಿಗೆ ನೀಡಿದೆಯೇ ಎಂದು ಪ್ರಶ್ನಿಸಿದ್ದಾರೆ.

## ಪತ್ರಕರ್ತರ ಸಂಘಟನೆಯನ್ನ ದೇಶದೆಲ್ಲಡೆ ವಿಸ್ತರಿಸಿ ಗಟ್ಟಿಗೊಳಿಸಿದ್ದ ಕಾಮ್ರೆಡ್: ಶಿವಾನಂದ ತಗಡೂರು

ಬೆಂಗಳೂರು:ಮೇ.14:ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟದ ಅಧ್ಯಕ್ಷರಾಗಿದ್ದ ಕೆ. ವಿಕ್ರಮ್ ರಾವ್ ಅವರು ಉತ್ತಮ ಸಂಘಟಕರಷ್ಟೆ ಅಲ್ಲ, ಹೋರಾಟಗಾರರು ಆಗಿದ್ದರು ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಹೇಳಿದ 'ರು.ಪತ್ರಕರ್ತರ ಸಂಘಟನೆಯಲ್ಲಿ




ಸುದೀರ್ಘ ಅವಧಿಗೆ ರಾಷ್ಟ್ರೀಯ ಅಧ್ಯಕ್ಷರಾಗಿ ದೇಶದಾದ್ಯಂತ ಸಕ್ರಿಯವಾಗಿ ಸಂಘದ ಚಟುವಟಿಕೆಗಳನ್ನು ಒಗ್ಗೂಡಿಸಲು ಅವರಿಂದ ಸಾಧ್ಯವಾಯಿತು ಎಂದರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಕೆಯುಡಬ್ಲ್ಯೂಜೆ) ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟದ (ಐಎಫ್‌ಡಬ್ಲ್ಯೂಜೆ) ಮಾಜಿ ಅಧ್ಯಕ್ಷ ಕೆ. ವಿಕ್ರಮ್‌ರಾವ್ ಅವರಿಗೆ ನುಡಿ ನಮನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.ಪತ್ರಕರ್ತರ ವೇತನ ಆಯೋಗವೂ ಸೇರಿದಂತೆ ವಿವಿಧ ಅನುಕೂಲತೆಗಳನ್ನು ಪತ್ರಕರ್ತರಿಗೆ ದೊರಕಿಸಿಕೊಡುವಲ್ಲಿ ವಿಕ್ರಮ್ ರಾವ್‌ಅವರ ಪಾತ್ರ ಪ್ರಮುಖವಾಗಿತ್ತು.ಸದಾಹೋರಾಟದ ಮನೋಭಾವವನ್ನು ಬೆಳೆಸಿಕೊಂಡಿದ್ದ ಅವರು ಟೈಮ್ಸ್ ಆಫ್ ಇಂಡಿಯಾ ಪತ್ರಿಕೆಯಲ್ಲಿ ಹಿರಿಯ ಪತ್ರಕರ್ತರಾಗಿ ಉತ್ತಮ ಹೆಸರನ್ನೂ ಗಳಿಸಿಕೊಂಡಿದ್ದರು ಎಂದೂ ಹೇಳಿದರು.

## ಹುತಾತ್ಮ ಪಿಎಸ್‌ಐ ಮಲ್ಲಿಕಾರ್ಜುನ್ ಬಂಡೆ ಕುರಿತ ಬಂಡೇಸಾಹೇಬ್ ಚಲನಚಿತ್ರ ನಾಳೆ ರಾಜ್ಯಾದ್ಯಂತ ಬಿಡುಗಡೆ

ಕಲಬುರಗಿ,ಮೇ.14:ಹುತಾತ್ಮ ಪಿಎಸ್‌ಐ ಮಲ್ಲಿಕಾರ್ಜುನ್ ಬಂಡೆ ಅವರ ಕುರಿತಾದ ಬಂಡೆಸಾಹೇಬ್ ಹೊಸ ಕನ್ನಡ ಚಲನಚಿತ್ರವು ಕಲಬುರ್ಗಿ ಸೇರಿ ಇಡೀ ರಾಜ್ಯಾದ್ಯಂತ ಎಲ್ಲ ಕಡೆಗಳಲ್ಲಿ ಏಕಕಾಲಕ್ಕೆ ಮೇ 16ರಂದು ಬಿಡುಗಡೆ ಆಗಲಿದೆ ಎಂದು ಚಲನಚಿತ್ರದ ನಿರ್ದೇಶಕ ಚಿನ್ಮಯ್ ರಾಮ್ ಅವರು ಹೇಳಿದರು.



ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇಲ್ಲಿಯವರೇ ಆಗಿರುವ ಹುತಾತ್ಮ ಪಿಎಸ್‌ಐ ಮಲ್ಲಿಕಾರ್ಜುನ್ ಬಂಡೆಯವರ ಕುರಿತು ಹೊಸ ಚಲನಚಿತ್ರ ಬಂಡೇ ಸಾಹೇಬ್ ನಿರ್ಮಾಣ ಮಾಡಿದ್ದು, ನಾಲ್ಕು ಹಾಡುಗಳು, ನಾಲ್ಕು ಫೈಟ್‌ಗಳು ಇವೆ. ಚಿತ್ರೀಕರಣವನ್ನು ಕಲಬುರ್ಗಿ, ಶಿವಮೊಗ್ಗ ಹಾಗೂ ಬೆಂಗಳೂರಿನಲ್ಲಿ ಕೈಗೊಂಡಿದ್ದೇವೆ ಎಂದರು.

ಚಲನಚಿತ್ರದ ಚಿತ್ರೀಕರಣವು ಬಹುಭಾಗ ಕಲಬುರ್ಗಿಯಲ್ಲಿಯೇ ಆಗಿದೆ. ವಿಶ್ವವಿದ್ಯಾಲಯ, ಶ್ರೀ ಶರಣಬಸವೇಶ್ವರ ದೇವಸ್ಥಾನ, ಸೂಪರ್ ಮಾರ್ಕೆಟ್, ಆಳಂದ್ ತಾಲ್ಲೂಕು ಸೇರಿದಂತೆ ವಿವಿಧೆಡೆ ಚಿತ್ರೀಕರಿಸಲಾಗಿದ್ದು, ಇದೇ ಮೊದಲಬಾರಿಗೆ ಕಲಬುರಗಿಯನ್ನು ಚಲನಚಿತ್ರದಲ್ಲಿ ಎಲ್ಲವನ್ನೂ ತೋರಿಸುವಂತಹ ಕೆಲಸ ಆಗಿದೆ ಎಂದು ಅವರು ಹೇಳಿದರು.

ಹುತಾತ್ಮ ಪೊಲೀಸ್ ಅಧಿಕಾರಿ (ಪಿಎಸ್‌ಐ) ಮಲ್ಲಿಕಾರ್ಜುನ್ ಬಂಡೆ ಅವರ ಕುರಿತಾದ ಚಿತ್ರವು ನೈಜಘಟನೆ ಆಧಾರಿತವಾಗಿದೆ. ಚಿತ್ರದ ನಾಯಕನಾಗಿ ಸಂತೋಷ್ ರಾಮ್ ಅವರು ನಟಿಸಿದ್ದಾರೆ. ಸಂತೋಷ್ ರಾಮ್ ಅವರು ಈಗಾಗಲೇ ಕೃಷ್ಣ ರುಕ್ಮಿಣಿ ಸೇರಿದಂತೆ ಹಲವು ಜನಪ್ರಿಯ ಧಾರಾವಾಹಿಗಳಲ್ಲಿ ಹಾಗೂ ಟೋನಿ ಸೇರಿದಂತೆ ಅನೇಕ ಸೂಪರ್ ಹಿಟ್ ಚಿತ್ರಗಳಲ್ಲಿ ಅಭಿನಯಿಸಿದ್ದಾರೆ.ಪಂಟ್ರು ಚಿತ್ರದ ಮೂಲಕ ನಾಯಕನಾದ ಅವರು ನಾಯಕನಾಗಿರುವುದು ಇದು ಎರಡನೇ ಚಲನಚಿತ್ರವಾಗಿದೆ ಎಂದು ಅವರು ತಿಳಿಸಿದರು.

ಮಾಡೆಲಿಂಗ್ ಕ್ಷೇತ್ರದಲ್ಲಿ ಗುರುತಿಸಿಕೊಂಡಿರುವ ಕಾವ್ಯ ಭಾರದ್ವಾಜ್ ಈ ಚಿತ್ರದ ನಾಯಕಿ. ವೀರಣ್ಣ ಕೊರಳ್ಳಿ, ಬಿರಾದಾರ್, ಸಿಂಬಾ ಮುಂತಾದವರು ತಾರಾಬಳಗದಲ್ಲಿದ್ದಾರೆ. ಮಲ್ಲಿಗೆ ಸಿನಿ ಕಂಬೈನ್ಸ್ ಲಾಂಛನದಲ್ಲಿ ಗೋಪಣ್ಣ ದೊಡ್ಮನಿ, ಕಮಲ ದೊಡ್ಮನಿ ಹಾಗೂ ಮಾಲಾ ವಿ. ಕೊರಳ್ಳಿ ಅವರು ನಿರ್ಮಿಸಿರುವ ಚಿತ್ರವನ್ನು ನಾನೇ ನಿರ್ದೇಶನ ಮಾಡಿರುವುದಾಗಿ ಚಿನ್ಮಯ್ ರಾಮ್ ಅವರು ಹೇಳಿದರು.

ಚಿತ್ರದಲ್ಲಿ ಎಂ.ಎಸ್. ತ್ಯಾಗರಾಜ್ ಅವರು ಸಂಗೀತ ನೀಡಿರುವ ನಾಲ್ಕು ಹಾಡುಗಳಿವೆ. ಚಿತ್ರದ ಪ್ರಮುಖ ಪಾತ್ರದಲ್ಲಿ ಅಭಿನಯಿಸಿರುವ ವೀರಣ್ಣ ಕೊರಳ್ಳಿ ಅವರು ಚಿತ್ರಕ್ಕೆ ಕಥೆ, ಚಿತ್ರಕಥೆ ಹಾಗೂ ಸಂಭಾಷಣೆ ಬರೆದಿದ್ದಾರೆ. ಮುಂಜಾನೆ ಮಂಜು ಛಾಯಾಗ್ರಹಣ ಹಾಗೂ ಚಂದ್ರು ಬಂಡೆ ಅವರ ಸಾಹಸ ನಿರ್ದೇಶನ 'ಬಂಡೆ ಸಾಹೇಬ್' ಚಿತ್ರಕ್ಕಿದೆ ಎಂದು ಅವರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಗೋಪಣ್ಣ ದೊಡ್ಡಮನಿ, ನಾಯಕಿ ಕಾವ್ಯಾ ಭಾರದ್ವಾಜ್, ವೀರಣ್ಣ ಕೊರಳ್ಳಿ ಮುಂತಾದವರು ಉಪಸ್ಥಿತರಿದ್ದರು.

## ಕಂದಾಯ ಇಲಾಖೆಯ ಪ್ರಗತಿ ಪರಿಶೀಲನೆ | ರಾಜ್ಯದಲ್ಲಿ 1 ಲಕ್ಷ ಹಕ್ಕು ಪತ್ರ ವಿತರಣೆಗೆ ಕ್ರಮ

## ವಾರಸುದಾರರಿಗೆ ಆಸ್ತಿ ಹಕ್ಕು ಪರಿವರ್ತನೆಗೆ ಕ್ರಮ : ಸಚಿವ ಬೈರೇಗೌಡ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ, ಮೇ 14 : ಮೃತ ಹೊಂದಿರುವವರ ಹೆಸರಿನಲ್ಲಿಯೇ ಆಸ್ತಿಗಳು ಮುಂದುವರೆದು, ಇಂದು ದೊಡ್ಡಪ್ರಮಾಣದಲ್ಲಿ ಉಳಿದಿವೆ. ಅವುಗಳನ್ನು ಅಭಿಯಾನದ ರೂಪದಲ್ಲಿ ಜನರ ಬಳಿಗೆ ಹೋಗಿ ವಾರಸುದಾರರಿಗೆ ಆಸ್ತಿಯ ಹಕ್ಕು ಪರಿವರ್ತನೆಗೆ ಕ್ರಮಕೈಗೊಳ್ಳುವಂತೆ ಕಂದಾಯ ಇಲಾಖೆಯ ಸಚಿವ ಕೃಷ್ಣಾ ಬೈರೇಗೌಡ ಅಧಿಕಾರಿಗಳಿಗೆ ಸೂಚಿಸಿದರು.



ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಮಂಗಳವಾರ ಜರುಗಿದ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ರಾಜ್ಯದಲ್ಲಿ 52 ಲಕ್ಷ ಮೃತರ ಹೆಸರಿನಲ್ಲಿ ಇದ್ದ ಕೃಷಿ ಜಮೀನುಗಳು ವಾರಸುದಾರರಿಗೆ ಕಾಲದಿಂದ ಕಾಲಕ್ಕೆ ಹಸ್ತಾಂತರವಾಗದೇ ಉಳಿದು, ದೊಡ್ಡಪ್ರಮಾಣದಲ್ಲಿ ಉಳಿದಿವೆ. ಇದು ದಾಖಲೆಗಳ ನಿರ್ವಹಣೆಗೆ ಒಳ್ಳೇಯದಲ್ಲ. ಆಂದೋಲದ ರೂಪದಲ್ಲಿ ತೆ–ಗೆದುಕೊಂಡು ಜಿಲ್ಲೆಯಲ್ಲಿ ಹಕ್ಕು ಪರಿವರ್ತನೆಗೆ ಅಧಿಕಾರಿಗಳು ಕ್ರಮವಹಿಸಲು ಸೂಚನೆ ನೀಡಿದರು. ವ ಸ ತಿ ಪ್ರದೇಶದಲ್ಲಿ ವಾಸಮಾಡುತ್ತಿರುವ ಮನೆಗಳಿಗೆ ಹಕ್ಕುಪತ್ರ ನೀಡುವ ಮೂಲಕ ಶಾಶ್ವತ ಪರಿಹಾರ ಕಲ್ಪಿಸಿಕೊಡುವ ಕಾರ್ಯವನ್ನು ಸರಕಾರ ನಿರಂತರವಾಗಿ ಮಾಡುತ್ತಿದೆ. ಮೇ 20 ರಂದು ವಿಜಯನಗರದಲ್ಲಿ ರಾಜ್ಯದ 1 ಲಕ್ಷ ಜನರಿಗೆ ಹಕ್ಕುಪತ್ರ ವಿತರಿಸುವ ಕಾರ್ಯ ಮಾಡಲಾಗುತ್ತಿದೆ. ಇನ್ನು 30 ರಿಂದ 50 ಸಾವಿರ ಜನರಿಗೆ ಹಕ್ಕು ಪತ್ರ ವಿತರಣೆಗೆ ಈ ವರ್ಷ ಗುರಿ ಹೊಂದಲಾಗಿದ್ದು, ತಾಂಡಾ, ಹಟ್ಟಿ, ಊರು, ಗ್ರಾಮಗಳು ಬಿಟ್ಟು ಹೋಗಿದ್ದರೆ ಅಂತವುಗಳನ್ನು ಸೇರಿಸಿ, ಹಕ್ಕು ಪತ್ರ ಕೊಡುವ ಕೆಲಸ ಈ ವರ್ಷದಲ್ಲಿ ಪೂರ್ಣಗೊಳಿಸಲು ತೀರ್ಮಾನಿಸಲಾಗಿದ್ದು, ಅಧಿಕಾರಿಗಳು ತಮ್ಮ ಕಾರ್ಯವೈಕರಿಯ ವೇಗ ಹೆಚ್ಚಿಸಲು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಕಂದಾಯ ಗ್ರಾಮಗಳಾಗಿ ಮಾಡಲು ಗುರುತಿಸಲಾದ 36 ಗ್ರಾಮಗಳ ಪೈಕಿ 28ಕ್ಕೆ ಅಧಿಸೂಚನೆ ಹೊರಡಿಸಲಾಗಿದ್ದು, ಬಾಕಿ ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡಲು ಕ್ರಮವಹಿಸಲು ತಿಳಿಸಿದರು. ಜಿಲ್ಲೆಯಲ್ಲಿ ಒಟ್ಟು 7041 ಪೈಕಿ 4802 ಜನರಿಗೆ ಹಕ್ಕುಪತ್ರ ನೀಡಲು ಅನುಮೋದನೆ ನೀಡಿದ್ದು, 2229 ಅರ್ಜಿಗಳನ್ನು ತಿರಸ್ಕೃತಗೊಂಡಿವೆ. 428 ಮಾತ್ರ ಪೆಂಡಿಂಗ್ ಉಳಿದಿವೆ. ಯಾವುದೇ ಕಾರಣಕ್ಕೂ ತಿರಸ್ಕರಿಸದೇ ಪರಿವರ್ತಿಸಲಾದ ಕಾನೂನನ್ನು ಓದಿಕೊಂಡು ಹಕ್ಕುಪತ್ರ ವಿತರಣೆ ಕ್ರಮವಹಿಸಲು ಸೂಚಿಸಿದರು.

ಪೋಡಿಮುಕ್ತ ಗ್ರಾಮ ಅಭಿಯಾನದಲ್ಲಿ ಮುಳಗಡೆ, ಪುನರ್ವಸತಿ ಹಾಗೂ ಕೆನಾಲ್‌ಗಳನ್ನು ಹೊರತುಪಡಿಸಿ ಆಸ್ಪತ್ರೆ, ಶಾಲೆ, ಆಟದ ಮೈದಾನಗಳನ್ನು ಸೇರಿಸಿಕೊಳ್ಳಲು ತಿಳಿಸಿದರು. ಒಟ್ಟು ಇರುವ ಜಮೀನಿನಲ್ಲಿ ಇರುವ ವಾರಸುದಾರರಿಗೆ ಪ್ರತ್ಯೇಕವಾಗಿ ಪಹಣಿ ನೀಡುವ ಕೆಲಸ ಆಗಬೇಕಿದೆ. ಇದಕ್ಕು ಅಭಿಯಾನ ಹಮ್ಮಿಕೊಂಡಿದ್ದು, ಜನ ಅರ್ಜಿ ಕೊಡುವುದಲ್ಲಿ ಜನರ ಮನೆ ಬಾಗಿಲಿಗೆ ಹೋಗಿ ಮಾಡುವ ಕಾರ್ಯವಾಗಬೇಕು ಎಂದರು.

ಪೌತಿಖಾತೆಯಲ್ಲಿಯೂ ಸಹ ಅದಾಲತ್ ಮಾಡಿ ಪ್ರಗತಿ ಸಾಧಿಸಲು ತಿಳಿಸಿದರ ಅವರು ಭೂಸುರಕ್ಷ ಯೋಜನೆಯಡಿ ದಾಖಲೆಗಳನ್ನು ಗಣಕಿಕೃತ ಮಾಡುವ ಮೂಲಕ ಹಳೆಯ ದಾಖಲೆಗಳನ್ನು ಅತ್ಯಂತ ಸುಲಭವಾಗಿ ಜನರಿಗೆ ಒದಗಿಸಲು ಉತ್ತಮ ಸೇವೆ ನೀಡುವ ನಿಟ್ಟಿನಲ್ಲಿ ಕಂದಾಯ ಇಲಾಖೆಯಲ್ಲಿನ ಭೂಸುರಕ್ಷಾ ಯೋಜನೆಯಡಿ ಮೂಲ ಹಳೆಯ ದಾಖಲೆಗಳ ಗಣೀಕರಣ ಕಾರ್ಯ ಮಾಡಲಾಗಿದೆ. ಬಾಕಿ ಉಳಿದ ದಾಖಲೆಗಳ ಗಣಕೀರಣ ಕಾರ್ಯ–ಕ್ಕೆ ತ್ವರಿತಗತಿ ನೀಡುವಂತೆ ಸೂಚನೆ ನೀಡಿದರು.

ಸಭೆಯಲ್ಲಿ ಬಾದಾಮಿ ಶಾಸಕ ಭೀಮಸೇನ ಚಿಮ್ಮನಕಟ್ಟಿ, ಜಮಖಂಡಿ ಶಾಸಕ ಜಗದೀಶ ಗುಡಗುಂಟಿ, ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಭೂದಾಖಲೆ ಇಲಾಖೆಯ ಜಂಟಿ ನಿರ್ದೇಶಕಿ ಜನಮಾ ಪೀರಜಾದೆ, ಉಪವಿಭಾಗಾಧಿಕಾರಿಗಳಾದ ಸಂತೋಷ ಜಗಲಾಸರ, ಶ್ವೇತಾ ಬೀಡಿಕರ, ಜಿಲ್ಲಾ ಭೂದಾಖಲೆ ಇಲಾಖೆಯ ಉಪನಿರ್ದೇಶಕ ರವಿಕುಮಾರ ಎಂ, ಸೇರಿದಂತೆ ಆಯಾ ತಾಲೂಕಿನ ತಹಶೀಲ್ದಾರರು ಉಪಸ್ಥಿತರಿದ್ದರು.

## "ಅಪರೇಷನ್ ಅಭ್ಯಾಸ್" ಅಣುಕು ಪ್ರದರ್ಶನ ಶೀಘ್ರ:ಅಗತ್ಯ ಸಿದ್ಧತೆಗೆ ಡಿ.ಸಿ. ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.14:"ಅಪರೇಷನ್ ಅಭ್ಯಾಸ್" ನಾಗರಿಕ ರಕ್ಷಣಾ ಕಾರ್ಯಚರಣೆಯ ಅಣುಕು ಪ್ರದರ್ಶನ ಶೀಘ್ರದಲ್ಲಿಯೇ ಕಲಬುರಗಿ ನಗರ ಹಾಗೂ ಜಿಲ್ಲೆಯ ವಿವಿಧ ಕಡೆ ಆಯೋಜಿಸಬೇಕಾಗಿರುವ ಹಿನ್ನೆಲೆಯಲ್ಲಿ ಎಲ್ಲಾ ರೀತಿಯ ಅಗತ್ಯಸಿದ್ಧತೆಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಡಿ.ಸಿ.ಬಿ.ಫೌಜಿಯಾ ತರನ್ನುಮ್ ಅವರು ಸೂಚನೆ ನೀಡಿದರು.ಬುಧವಾರ ತಮ್ಮ ಕಚೇರಿ ಸಭಾಂಗಣದಲ್ಲಿ ಈ ಸಂಬಂಧ ಪೂರ್ವಭಾವಿ ಸಭೆ ನಡೆಸಿದ ಅವರು, ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿಗಳು



ಈ ಅಣುಕು ಪ್ರದರ್ಶನದಲ್ಲಿ ಸಕ್ರಿಯವಾಗಿ ಭಾಗವಹಿಸಿ ತುರ್ತು ಪರಿಸ್ಥಿತಿ ಸಂದರ್ಭದಲ್ಲಿ ರಕ್ಷಣಾ ಕಾರ್ಯಚರಣೆ ಯಾವ ರೀತಿಯಾಗಿ ನಡೆಯುತ್ತದೆ ಎಂಬುದರ ಕುರಿತು ಅಣಕು ಪ್ರದರ್ಶನದ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸುವುದು ಇದರ ಉದ್ದೇಶವಾಗಿದೆ ಎಂದರು. ಶಾಲಾ–ಕಾಲೇಜು, ವಾಣಿಜ್ಯ ಅಂಗಡಿ–ಮುಂಗಟ್ಟುಗಳು ಹಾಗೂ ಕೈಗಾರಿಕೆ ಪ್ರದೇಶದಲ್ಲಿ ನಾಗರಿಕ ರಕ್ಷಣಾ ಕಾರ್ಯಚರಣೆ ಕುರಿತು ಹೆಚ್ಚಿನ ರೀತಿಯಲ್ಲಿ ಜನಜಾಗೃತಿ ಮೂಡಿಸಬೇಕು. ಈ ಕುರಿತು ಎಸ್.ಓ.ಪಿ ಜಾರಿಗೊಳಿಸಬೇಕು ಎಂದು ಪೊಲೀಸ್ ಸೇರಿದಂತೆ ಸಂಬಂಧಪಟ್ಟ ಇಲಾಖೆಗೆ ನಿರ್ದೇಶನ ನೀಡಲಾಯಿತು. ಇನ್ನು ಕಲಬುರಗಿ ನಗರದಲ್ಲಿ 10 ನಿಮಿಷಗಳ ಕಾಲ ಬ್ಲಾಕ್ ಔಟ್ ಮಾಡಲು ನಿರ್ಧರಿಸಿದ್ದು, ಕೂಡಲೆ ಜೆಸ್ಕಾಂ ಮತ್ತು ಕೆ.ಪಿ.ಟಿ.ಸಿ.ಎಲ್ ಅಧಿಕಾರಿಗಳು ಅಗತ್ಯ ಮುಂಜಾಗ್ರತೆ ಕ್ರಮ ಕೈಗೊಂಡು ದಿನಾಂಕ ನಿಗದಿಪಡಿಸಿ ಮೊದಲೆ ಸಾರ್ವಜನಿಕರಿಗೆ ತಿಳಿಸಬೇಕು ಎಂದರು.ಸಭೆಯಲ್ಲಿ ಎಸ್.ಪಿ.ಅಡ್ಡೂರು ಶ್ರೀನಿವಾಸಲು, ಡಿ.ಸಿ.ಪಿ. ಕನಿಕಾ ಸಿಕ್ರಿವಾಲ್, ಡಿ.ಸಿ.ಎಫ್ ಸುಮಿತ್ ಪಾಟೀಲ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಸಹಾಯಕ ಆಯುಕ್ತ ಪ್ರಭುರೆಡ್ಡಿ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳಿದ್ದರು.

# ಸ್ವಚ್ಛತೆ, ಶ್ರಮದಾನದ ಅರಿವು ಮೂಡಿಸಿ : ಕಲಬುರ್ಗಿ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಸ್ವಚ್ಛತೆ-ಯ ಕುರಿತು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವುದರ ಜತೆಗೆ ಶ್ರಮದಾನ ಮಾಡಲು ಅವರನ್ನು ಪ್ರೇರೇಪಿಸುವ ಕಾರ್ಯವನ್ನು ಮಾಡಬೇಕಾಗಿದೆ ಎಂದು ಎಸ್ ಬಿಸಿಎಸ್ ಮತ್ತು ಎಸ್‌ವಿ ಕಾಲೇಜಿನ ಪ್ರಾಧ್ಯಾಪಕ, ರಾಷ್ಟ್ರೀಯ ಸೇವಾ ಯೋಜನೆ ಅಧಿಕಾರಿ ಪ್ರವೀಣಕುಮಾರ ಕಲಬುರ್ಗಿ ಹೇಳಿದರು.

> ವಿಶ್ವದಲ್ಲಿಯೇ ಭಾರತೀಯ ಸಂಸ್ಕೃತಿ, ಪರಂಪರೆಗೆ ವಿಶೇಷ ಸ್ಥಾನಮಾನವಿದೆ. ಈ ಶ್ರೀಮಂತ ಸಂಸ್ಕೃತಿಯ ಮಹತ್ವ ಅರಿತುಕೊಂಡು ಅದರ ಬೆಳವಣಿಗೆಗೆ ಶ್ರಮ ವಹಿಸುವ ಮೂಲಕ ಗುರುಹಿರಿಯರಿಗೆ ಗೌರಿಸುವ ಮನೋಭಾವ ಮೈಗೂಡಿಸಿಕೊಳ್ಳಬೇಕು.
>
> **-ಪ್ರವೀಣಕುಮಾರ ಕಲಬುರ್ಗಿ**
> **ಪ್ರಾಧ್ಯಾಪಕ, ಎನ್ ಎಸ್ ಎಸ್ ಅಧಿಕಾರಿ,**
> **ಎಸ್ ಬಿ ಸಿ ಎಸ್ ಮತ್ತು ಎಸ್ ವಿ ಕಾಲೇಜು ಹುಮನಾಬಾದ್**

ಪಟ್ಟಣದ ಎಸ್‌ಬಿಸಿಎಸ್ ಮತ್ತು ಎಸ್‌ವಿಪದವಿ ಕಾಲೇಜಿನ ಆವರಣದಲ್ಲಿ ಕಾಲೇಜು ವತಿಯಿಂದ ನಡೆದ ರಾಷ್ಟ್ರೀಯ ಸೇವಾ ಯೋಜನೆಯ ಶ್ರಮದಾನ ಶಿಬಿರ ಉದ್ದೇಶಿಸಿ ಮಾತನಾಡಿದರು.

ವಿದ್ಯಾರ್ಥಿಗಳು ವರ್ಗಕೋಣೆಗೆ ಹಾಜರಾಗಿ ಕೇವಲ ಪಠ್ಯದ ಕುರಿತು ಅಭ್ಯಾಸ ನಡೆಸುವ ಮೂಲಕ ಕಲಿಯುವ ಕಲಿಕೆಯಷ್ಟೇ ಶಿಕ್ಷಣವಲ್ಲ. ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಿ, ಅದರಲ್ಲಿ ಸಿಗುವಂತಹ ಶಿಕ್ಷಣ ಹಾಗೂ ಜ್ಞಾನ ವಿದ್ಯಾರ್ಥಿಗಳಿಗೆ ಪ್ರಜ್ಞಾವಂತ ನಾಗರಿಕರನ್ನಾಗಿ ಮಾಡುತ್ತದೆ ಎಂದರು.

ಆರೋಗ್ಯಯುತ ಸಮಾಜ, ಬಲಿಷ್ಠ ರಾಷ್ಟ್ರ ನಿರ್ಮಾಣ ಆಗಬೇಕಾದರೆ, ನಮ್ಮ ಸುತ್ತಮುತ್ತಲಿನ ವಾತಾವರಣ ಸ್ವಚ್ಛತೆಯಿಂದ ಕಾಯ್ದುಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಆದ್ದರಿಂದ ಕಾಲೇಜುಗಳಲ್ಲಿ ರಾಷ್ಟ್ರೀಯ ಸೇವಾ ಯೋಜನೆಯಂತಹ ಕಾರ್ಯಕ್ರಮಗಳ ಮೂಲಕ ಮೂಲಕ ವಿದ್ಯಾರ್ಥಿಗಳಲ್ಲಿ ಸ್ವಚ್ಛತೆ, ರಾಷ್ಟ್ರೀಯತೆಯ ಕುರಿತು ಅರಿವು ಮೂಡಿಸಲಾಗುತ್ತದೆ ಎಂದು ತಿಳಿಸಿದರು.

ಎಸ್‌ಬಿಸಿಎಸ್ ಮತ್ತು ಎಸ್‌ವಿ ಕಾಲೇಜಿನ ಪ್ರಾಂಶುಪಾಲ ರವೀಂದ್ರನಾಥಪ್ಪ ಮಾತನಾಡಿ, ದೈಹಿಕ ಶ್ರಮವನ್ನು ಒಳಗೊಂಡ ಸಮುದಾಯದ ಕಲ್ಯಾಣಕ್ಕಾಗಿ ವ್ಯಕ್ತಿಯಿಂದ ಸ್ವಯಂಪ್ರೇರಿತ ಕೊಡುಗೆ. ಇದು ನಮ್ಮ ಸಮುದಾಯಕ್ಕೆ ಸಹಾಯ ಮಾಡುವ ಒಂದು ಮಾರ್ಗವಾಗಿದೆ ಮತ್ತು ನಮ್ಮ ಸುತ್ತಲಿನ ಪರಿಸರವನ್ನು ಉತ್ತಮಗೊಳಿಸಲು ಸಹಾಯ ಮಾಡಲು ಮತ್ತು ಬದಲಾಯಿಸಲು ಕೊಡುಗೆ ನೀಡುತ್ತದೆ. ಹೀಗಾಗಿ ರಾಷ್ಟ್ರೀಯ ಸೇವಾ ಯೋಜನೆ ಶಿಬಿರದ ಸದುಪಯೋಗ ವಿದ್ಯಾರ್ಥಿಗಳು ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಡಾ. ವಿಕಾಸ ಪೋಸ್ತಾರ್, ಸಂಗ್ರಾಮರೆಡ್ಡಿ, ಮಲ್ಲಪ್ಪ ವಾಡೆ, ದೀಪಕ ಕಲಬುರ್ಗಿ, ಚಂದ್ರಕಾಂತ ಲದ್ದೆ, ಡಾ. ರಮಾದೇವಿ, ಕಿರಣ ಸಾಗರ, ದರ್ಶನ ಬೆನಕಿಪಳ್ಳಿ, ಶಿವಾನಂದ ಪಾಟೀಲ್, ಭಾಗ್ಯಶ್ರೀ, ಅಶ್ವಿನಿ, ಲತಾ ಸೇರಿ ಅನೇಕರಿದ್ದರು.

# ಇಂದು ಸಿಂಧನೂರು-ರಾಯಚೂರು ಹೊಸ ರೈಲ್ವೆ ಮಾರ್ಗಕ್ಕೆ ಶಂಕುಸ್ಥಾಪನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ14-ನೈರುತ್ಯ ರೈಲ್ವೆ ವಿಭಾಗದಿಂದ ಮುನಿರಾಬಾದ್ (ಗಿಣಿಗೇರಾ)-ರಾಯಚೂರ ಹೊಸ ರೈಲು ಮಾರ್ಗದ ಯೋಜನೆಯಡಿ ಸಿಂಧನೂರು- ರಾಯಚೂರು ನಡುವೆ 81 ಕಿ.ಮೀ ನೂತನ ರೈಲು ಮಾರ್ಗ ನಿರ್ಮಾಣದ ಶಂಕುಸ್ಥಾಪನೆ ಕಾರ್ಯಕ್ರಮವು ಮೇ 15 ರಂದು ಮಧ್ಯಾಹ್ನ 2 ಗಂಟೆಗೆ ರಾಯಚೂರ ಜಿಲ್ಲೆಯ ಸಿಂಧನೂರು ರೈಲ್ವೆ ನಿಲ್ದಾಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಭಾರತ ಸರ್ಕಾರದ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವರಾದ ವಿ.ಸೋಮಣ್ಣ ಹಾಗೂ ರಾಜ್ಯ ಸರ್ಕಾರದ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವರಾದ ಡಾ. ಎಂ. ಬಿ. ಪಾಟೀಲ್ ಅವರು ಉದ್ಘಾಟಿಸಲಿದ್ದಾರೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪಪಾಟೀಲ್, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್. ಎಸ್.ಬೋಸರಾಜು,

ಮಾನ್ಯ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸವರಾಜ ರಾಯರೆಡ್ಡಿ, ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರ ವಿಧಾನಸಭಾ ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ ಅವರು ಘನ ಉಪಸ್ಥಿತಿ ವಹಿಸುವರು.

ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಚಂದ್ರಶೇಖರ್ ಬಿ.ಪಾಟೀಲ್, ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ ಅವರು ಗೌರವಾನ್ವಿತ ಅತಿಥಿಗಳಾಗಿ ಉಪಸ್ಥಿತರಿರುವರು ಎಂದು ನೈರುತ್ಯ ರೈಲ್ವೆಯ ಹುಬ್ಬಳ್ಳಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಹುಬ್ಬಳ್ಳಿಯ ವಿಭಾಗೀಯ ರೈಲ್ವೆ ವ್ಯವಸ್ಥಾಪಕರ ದೂರವಾಣಿ ಸಂಖ್ಯೆ : 0836-2360747 ಅಥವಾ 0836-2363494 ಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಮೇ 15 ರಂದು ಬಾಲ ಚೈತನ್ಯ ಮಕ್ಕಳ ಆರೈಕೆ ಕೇಂದ್ರಗಳ ಚಾಲನಾ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 14 ಜಿಲ್ಲೆಯಲ್ಲಿ ಅಂಗನವಾಡಿಗಳಿಗೆ ದಾಖಲಾಗಿರುವ ಮಕ್ಕಳಲ್ಲಿ ಅಪೌಷ್ಟಿಕತೆಯ ನಿಯಂತ್ರಣಕ್ಕಾಗಿ ಬಳ್ಳಾರಿ, ಸಿರಗುಪ್ಪ, ಸಂಡೂರು, ಕುರಗೋಡು ಹಾಗೂ ಕಂಪ್ಲಿ ತಾಲ್ಲೂಕುಗಳಲ್ಲಿನ ಆಯ್ದ ಸರಕಾರಿ ವಸತಿ ನಿಲಯ(ಹಾಸ್ಟೆಲ್) ಗಳಲ್ಲಿ 14 ದಿನಗಳ ಕಾಲ ಮಗುವಿನ ಆರೈಕೆಗಾಗಿ ತಾಯಿಯೊಂದಿಗೆ ಮಗುವಿಗೆ ವಸತಿ ವ್ಯವಸ್ಥೆಯೊಂದಿಗೆ ಅವಕಾಶ ಕಲ್ಪಿಸುವ 'ಬಾಲಚೈತನ್ಯ ಮಕ್ಕಳ ಆರೈಕೆ ಕೇಂದ್ರ' ಗಳನ್ನು ಏಕಕಾಲಕ್ಕೆ ಮೇ 15 ರಂದು ಆರಂಭಿಸಲಾಗುತ್ತಿದೆ.

ಈ ಸಂಬಂಧ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮಾರ್ಗದರ್ಶನದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಸಹಯೋಗದೊಂದಿಗೆ ಮೇ 15 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಡಿ.ದೇವರಾಜ್ ಅರಸು ಬಾಲಕರ ಮೆಟ್ರಿಕ್ ಪೂರ್ವ ವಸತಿ ನಿಲಯ (ಮಯೂರ ಹೋಟೆಲ್ ಹಿಂಭಾಗ)ದಲ್ಲಿ ಚಾಲನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ತಿಳಿಸಿದ್ದಾರೆ.

# ಅನ್ನಭಾಗ್ಯ ಯೋಜನೆ; ಹಣದ ಬದಲಿಗೆ ಅಕ್ಕಿ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ 14- ಇಲ್ಲಿನ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ 2025ರ ಮೇ ಮಾಹೆಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ ಹಾಗೂ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ಜಿಲ್ಲೆಯ ಅಂತ್ಯೋದಯ (ಎಎವೈ) ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಗಳ ಫಲಾನುಭವಿಗಳಿಗೆ ಹಣದ ಬದಲಿಗೆ 2025ರ ಫೆಬ್ರವರಿ ಮಾಹೆಯಿಂದ ಜಾರಿ ಬರುವಂತೆ ಅರ್ಹ ಫಲಾನುಭವಿಗಳಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿ ವಿತರಣೆ ಮಾಡಲಾಗುವುದು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಅವರು ತಿಳಿಸಿದ್ದಾರೆ.

ಜಿಲ್ಲೆಯ ಪ್ರತಿ ಅಂತ್ಯೋದಯ (ಎಎವೈ) ಪಡಿತರ ಚೀಟಿಗೆ 35 ಕೆ.ಜಿ ಸಾರವರ್ಧಿತ, ಹಾಗೂ ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 05 ಕೆ.ಜಿ ಸಾರವರ್ಧಿತ ಅಕ್ಕಿಯೊಂದಿಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ಪ್ರಸ್ತುತ ಜಿಲ್ಲೆಯಲ್ಲಿರುವ ಅಂತ್ಯೋದಯ (ಎಎವೈ) ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಗಳ ಫಲಾನುಭವಿಗಳಿಗೆ ಹಣದ ಬದಲಿಗೆ ಅರ್ಹ ಫಲಾನುಭವಿಗಳಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿ ವಿತರಣೆ ಮಾಡಲಾಗುವುದು.

ಸರ್ಕಾರದ ಮಾರ್ಗಸೂಚಿಯಂತೆ ಏಕ-ಸದಸ್ಯ, ದ್ವಿ-ಸದಸ್ಯ ಮತ್ತು ತ್ರಿ-ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಅಂತ್ಯೋದಯ (ಎಎವೈ) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು.

ಮೇ 2025ರ ಮಾಹೆಯಲ್ಲಿ 01 ರಿಂದ 03 ಸದಸ್ಯರಿರುವ ಅಂತ್ಯೋದಯ (ಎಎವೈ) ಪಡಿತರದಾರರಿಗೆ 35 ಕೆ.ಜಿ ಅಕ್ಕಿ, 04 ಸದಸ್ಯರ ಕಾರ್ಡಿಗೆ 40 ಕೆ.ಜಿ, 05 ಸದಸ್ಯರಿರುವ ಕಾರ್ಡಿಗೆ 50 ಕೆ.ಜಿ ಅಕ್ಕಿ, 06 ಸದಸ್ಯರಿರುವ ಕಾರ್ಡಿಗೆ 60 ಕೆ.ಜಿ ಅಕ್ಕಿ, 07 ಸದಸ್ಯರಿರುವ ಕಾರ್ಡಿಗೆ 70 ಕೆ.ಜಿ ಅಕ್ಕಿ, 08 ಸದಸ್ಯರಿರುವ ಕಾರ್ಡಿಗೆ 80 ಕೆ.ಜಿ ಅಕ್ಕಿ, 09 ಸದಸ್ಯರಿರುವ ಕಾರ್ಡಿಗೆ 90 ಕೆ.ಜಿ ಅಕ್ಕಿ, 10 ಸದಸ್ಯರಿರುವ ಕಾರ್ಡಿಗೆ 100 ಕೆ.ಜಿ ಅಕ್ಕಿ, 11 ಸದಸ್ಯರಿರುವ ಕಾರ್ಡಿಗೆ 110 ಕೆ.ಜಿ ಅಕ್ಕಿ, 12 ಸದಸ್ಯರಿರುವ ಕಾರ್ಡಿಗೆ 120 ಕೆ.ಜಿ ಅಕ್ಕಿ, 13 ಸದಸ್ಯರಿರುವ ಕಾರ್ಡಿಗೆ 130 ಕೆ.ಜಿ ಅಕ್ಕಿ, 14 ಸದಸ್ಯರಿರುವ ಕಾರ್ಡಿಗೆ 140 ಕೆ.ಜಿ ಅಕ್ಕಿ ಮತ್ತು 15 ಸದಸ್ಯರಿರುವ ಕಾರ್ಡಿಗೆ 150 ಕೆ.ಜಿ ಅಕ್ಕಿಯನ್ನು ವಿತರಿಸಲಾಗುವುದು. ಅದೇ ರೀತಿಯಾಗಿ ಪಿ.ಹೆಚ್.ಹೆಚ್(ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿಯೊಬ್ಬ ಸದಸ್ಯರಿಗೆ 10 ಕೆ.ಜಿ ಅಕ್ಕಿಯನ್ನು ಉಚಿತವಾಗಿ ಕೊಡಲಾಗುತ್ತಿದ್ದು, ಅರ್ಹ ಪಡಿತರ ಚೀಟಿದಾರರು ಇದರ ಸದುಪಯೋಗ ಪಡೆದುಕೊಳ್ಳಲು ತಿಳಿಸಿದೆ.

ಒಂದು ರಾಷ್ಟ್ರೀಯ ಒಂದು ಪಡಿತರ ಚೀಟಿ (ಅಂತರ್ ರಾಜ್ಯ/ ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿ-ದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ದೂರವಾಣಿ ಸಂಖ್ಯೆ: 1967ಗೆ ಅಥವಾ ಆಯಾ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಚೇರಿಗೆ ಅಥವಾ ಜಿಲ್ಲೆಯ ಉಪ ನಿರ್ದೇಶಕರ ಕಚೇರಿಗೆ ದೂರನ್ನು ಸಲ್ಲಿಸಬಹುದಾಗಿದೆ.

ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಈ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೇಸಿಗೆ ಶಿಬಿರ ಆಯೋಜನೆ: ಹೆಸರು ನೋಂದಾಯಿಸಿಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಬೀದರ-ಮೇ.14:-ವಿದ್ಯಾರ್ಥಿಗಳಿಗೆ ಸೃಜನಾತ್ಮಕತೆ ಹಾಗೂ ವೈಜ್ಞಾನಿಕ ಚಿಂತನಾಭಿವೃದ್ಧಿಗೆ ಸಹಾಯವಾಗುವ ಉದ್ದೇಶದಿಂದ 7ನೇ ತರಗತಿಯಿಂದ 10ನೇ ತರಗತಿ ವಿದ್ಯಾರ್ತಿಗಳಿಗೆ ದಿನಾಂಕ:15-05-2025 ರಿಂದ 24-05-2025 ರವರೆಗೆ ಬೆಳಿಗ್ಗೆ 9 ರಿಂದ ಮಧ್ಯಾಹ್ನ 1ಗಂಟೆಯವರೆಗೆ ತಾಲ್ಲೂಕಾ ಹಂತದಲ್ಲಿ ಬೇಸಿಗೆ ಶಿಬಿರವನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶಿಬಿರದಲ್ಲಿ ವಿದ್ಯಾರ್ಥಿಗಳಿಗೆ ಸಂಗೀತ, ನೃತ್ಯ, ಚಿತ್ರಕಲೆ, ರಾಕೆಟ್ ತಯ್ಯಾರಿಕೆ ಹಾಗೂ ಖಗೋಳಶಾಸ್ತ್ರದ ಮೇಲೆ ಹ್ಯಾಂಡ್ಸ್ ಆನ್ ತರಬೇತಿಯನ್ನು ಪರಣಿತ ಸಂಪನ್ಮೂಲ ವ್ಯಕ್ತಿಗಳಿಂದ ನೀಡಲಾಗುತ್ತಿದೆ.

ಶಿಬಿರಗಳ ನಡೆಯುವ ಸ್ಥಳಗಳ ಹಾಗೂ ನೋಡಲ್ ಅಧಿಕಾರ ಮೊಬೈಲ್ ವಿವರ: ಔರಾದ (ಬಿ) ಆದರ್ಶ ವಿದ್ಯಾಲಯದಲ್ಲಿ 100 ವಿದ್ಯಾರ್ಥಿಗಳಿಗೆ ನೋಡಲ್ ಅಧಿಕಾರಿ ಜಿ.ಆರ್.ಸಿ.ಔರಾದ.ಬಿ (ಮೊ.7483503360), ಬಸವಕಲ್ಯಾಣ ಸರ್ಕಾರಿ (ಬಾಲಕರ) ಪ್ರೌಢ ಶಾಲೆಯಲ್ಲಿ 100 ವಿದ್ಯಾರ್ಥಿಗಳಿಗೆ ನೋಡಲ್ ಅಧಿಕಾರಿ ಜಿ.ಆರ್.ಸಿ. ಬಸವಕಲ್ಯಾಣ(ಮೊ.9071317625), ಭಾಲ್ಕಿ ಸರ್ಕಾರಿ ಪ್ರೌಢ ಶಾಲೆಯಲ್ಲಿ 100 ವಿದ್ಯಾರ್ಥಿಗಳಿಗೆ ನೋಡಲ್ ಅಧಿಕಾರಿ ಜಿ.ಆರ್.ಸಿ. ಭಾಲ್ಕಿ (ಮೊ.8971687267), ಬೀದರ ಕೋರ ಸೈನ್ಸ್ ಆಕ್ಟಿವಿಟಿ ಸೆಂಟರ್ ಹಮೀಲಾಪುರ ರಸ್ತೆ ಬೀದರ (ಅಗಸ್ತ್ರ ಪೌಂಡೇಶನ)ದಲ್ಲಿ 100 ವಿದ್ಯಾರ್ಥಿಗಳಿಗೆ ನೋಡಲ್ ಅಧಿಕಾರಿ ಬಿ.ಆರ್.ಸಿ. (ಮೊ. 7259254577) ಹಾಗೂ ಹುಮನಾಬಾದ ತಾಲ್ಲೂಕಿನ ಸರ್ಕಾರಿ (ಬಾಲಕರ) ಪ್ರೌಢ ಶಾಲೆಯಲ್ಲಿ 100 ವಿದ್ಯಾರ್ಥಿಗಳಿಗೆ ನೋಡಲ್ ಅಧಿಕಾರಿ ಬಿ.ಆರ್.ಸಿ. ಹುಮನಾಬಾದ(ಮೊ.9986891973) ಅವರುಗಳು ನೀಡಲಿದ್ದಾರೆ.

ಪ್ರಯುಕ್ತ ಜಿಲ್ಲೆಯ ಆಯಾ ತಾಲ್ಲೂಕಿನ ಕೇಂದ್ರಗಳಲ್ಲಿ ರಚಿಸಲಾದ ಬೇಸಿಗೆ ಶಿಬಿರಗಳಿಗೆ 7ನೇ ತರಗತಿಯಿಂದ 10ನೇ ತರಗತಿ ವಿದ್ಯಾರ್ಥಿಗಳು ನೋಂದಾಯಿಸಿಕೊಂಡು ಸದರಿ ಶಿಬಿರ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕೆಂದು ಅವರು ತಿಳಿಸಿದ್ದಾರೆ.

# ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪ್ರವಾಸ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 14-ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೇ 16 ರಂದು ಬಳ್ಳಾರಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವರು.

ಮೇ 16 ರಂದು ಬೆಳಿಗ್ಗೆ 10 ಗಂಟೆಗೆ ಬೆಂಗಳೂರಿನ ಹೆಚ್‌ಎಎಲ್‌ನ ವಿಮಾನ ನಿಲ್ದಾಣದಿಂದ (ವಿಶೇಷ ವಿಮಾನದ ಮೂಲಕ) ಹೊರಟು ಬೆಳಿಗ್ಗೆ 10.50 ಕ್ಕೆ ತೋರಣಗಲ್‌ನ ಜಿಂದಾಲ್‌ನ ಏರ್‌ಸ್ಟ್ರಿಪ್ ಗೆ ಆಗಮಿಸುವರು.

ನಂತರ ಬೆಳಿಗ್ಗೆ 11 ಗಂಟೆಗೆ ತೋರಣಗಲ್‌ನ ಜಿಂದಾಲ್ ಏರ್‌ಸ್ಟ್ರಿಪ್‌ನಿಂದ ರಸ್ತೆಯ ಮೂಲಕ ಹೊರಟು, 11.30 ಗಂಟೆಗೆ ವಿಜಯನಗರ ಜಿಲ್ಲೆಯ ಹೊಸಪೇಟೆಗೆ ತಲುಪಿ ಮೇ 20 ರಂದು ರಾಜ್ಯ ಸರ್ಕಾರವು ಎರಡು ವರ್ಷಗಳು ಪೂರೈಸುತ್ತಿರುವ ಹಿನ್ನೆಲೆಯಲ್ಲಿ ಕಾರ್ಯಕ್ರಮ ಆಯೋಜಿಸಿರುವ ಸ್ಥಳ ಪರಿಶೀಲನೆ ನಡೆಸುವರು.

ಬಳಿಕ ಮಧ್ಯಾಹ್ನ 01.30 ಗಂಟೆಗೆ ಅಲ್ಲಿಂದ ಹೊರಟು, 02 ಗಂಟೆಗೆ ತೋರಣಗಲ್‌ನ ಜಿಂದಾಲ್ ಏರ್‌ಸ್ಟ್ರಿಪ್‌ಗೆ ಆಗಮಿಸಿ, 02.15 ಕ್ಕೆ ವಿಶೇಷ ವಿಮಾನದ ಮೂಲಕ ದಕ್ಷಿಣ ಕನ್ನಡ ಜಿಲ್ಲೆಗೆ ಪ್ರಯಾಣಿಸುವರು ಎಂದು ಮುಖ್ಯಮಂತ್ರಿಯವರ ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ವಿಶೇಷ ಕಾರ್ಯದರ್ಶಿ ಕೆ.ಚಿರಂಜೀವಿ ಅವರು ತಿಳಿಸಿದ್ದಾರೆ.

# ಚೇಗುಂಟ-ಸೈದಾಪೂರ ರೈಲು ನಿಲ್ದಾಣದ ಮಧ್ಯೆ ಗೂಡ್ಸ ರೈಲು ಬಡೆದು ಇಬ್ಬರು ಮೃತ: ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ.14- ಚೇಗುಂಟ ಮತ್ತು ಸೈದಾಪೂರ ರೈಲ್ವೇ ನಿಲ್ದಾಣ ಮಧ್ಯೆ ರೈಲ್ವೆ ಕೀ.ಮೀ ನಂ601/10-14 ನೇದ್ದರ ಡೌನ್ ರೈಲ್ವೆ ಹಳಿಗಳಲ್ಲಿ ಅಂ-ದಾಜು 25 ವಯೋಮಾನದ ಅಪರಿಚಿತ ಗಂಡಸು ಹಾಗೂ 40 ವಯೋಮಾನದ ಹೆಂಗಸು ಇಬ್ಬರು ಚಲಿಸಿಕೊಂಡು ಹೋಗುತ್ತಿರುವಾಗ ಗೂಡ್ಸ್ ರೈಲು ಗಾಡಿಗೆ ಬಡಿದು ಮೃತಪಟ್ಟಿದ್ದು, ಈ ಕುರಿತು ರಾಯಚೂರು ರೈಲ್ವೇ ಪೊಲೀಸ್ ಠಾಣೆಯಲ್ಲಿ ಯುಡಿಆರ್ ನಂ:34/2025 ಕಲಂ 194 ಬಿ.ಎನ್.ಎಸ್.ಎಸ್ ರೀತ್ಯಾ ಪ್ರಕರಣ ದಾಖಲಾಗಿದೆ.

ಗಂಡಸಿನ ಚಹರೆ ಪಟ್ಟಿ:ವಯಸ್ಸು ಸುಮಾರು 25 ವರ್ಷ, ತೆಳ್ಳನೆಯ ಮೈಕಟ್ಟು, ಸಣ್ಣ ಮೂಗು, ಸಣ್ಣ ಕಿವಿಗಳು, ತಲೆಯಲ್ಲಿ ಸುಮಾರು ಎರಡು ಇಂಚು ಕಪ್ಪು ಕೂದಲು, ಸಣ್ಣ ಮೀಸೆ ಹೊಂದಿದ್ದು, ಬಲಗೈಯಲ್ಲಿ ಹಿಂದಿಯಲ್ಲಿ ಅಚ್ಚೆ ಹಾಕಿಸಿದ್ದಾನೆ. ಒಂದು ಹಸಿರು ಬಣ್ಣದ ಟಿ-ಶರ್ಟ್, ಒಂದು ನೀಲಿ ಬಣ್ಣದ ನೈಟ್ ಪ್ಯಾಂಟ್ ಧರಿಸಿದ್ದಾನೆ.

ಹೆಂಗಸಿನ ಚಹರೆ ಪಟ್ಟಿ:ವಯಸ್ಸು ಸುಮಾರು 40 ವರ್ಷ, ಸದೃಢ ಮೈಕಟ್ಟು, ತಲೆಯಲ್ಲಿ ಕಪ್ಪು ಬಿಳಿ ಮಿಶ್ರಿತ ಸುಮಾರು ಹತ್ತು ಇಂಚು ಕೂದಲು, ಮುಖದ ಇತರೆ ಭಾಗಗಳು ಜಜ್ಜಿ ನುಜ್ಜಾಗಿದೆ. ಒಂದು ತಿಳಿ ಹಳದಿ ಬಣ್ಣದ ಪಾಲಿಸ್ಟರ್ ಸೀರೆ, ಒಂದು ಬಿಳಿಯ ಬಣ್ಣದ ಬ್ಲೌಸ್, ಕೊರಳಲ್ಲಿ ಒಂದು ಕಪ್ಪು ದಾರ, ಹಾಗೂ ಒಂದು ಸಣ್ಣ ಪ್ಲಾಸ್ಟಿಕ್ ಗುಂಡುಗಳು ಸರಗಳನ್ನು ಧರಿಸಲಾಗಿದ್ದು, ಈ ಮೃತರ ವಾರಸುದಾರರು ಪತ್ತೆಯಾದಲ್ಲಿ ಅಥವಾ ಈ ಮೃತರ ಹೋಲಿಕೆಯ ಗಂಡಸು ಮತ್ತು ಹೆಂಗಸು ಕಾಣೆಯಾದ ಪ್ರಕರಣ ದಾಖಲಾಗಿದ್ದಲ್ಲಿ ರಾಯಚೂರು ರೈಲ್ವೆ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ: 08532-231716 ಅಥವಾ 9480802111, ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ: 080-22871291ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ರೈಲ್ವೆ ಪೊಲೀಸ್ ಠಾಣೆಯ ತನಿಖಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳ ಕಲ್ಯಾಣ ಸಮಿತಿಗೆ ಸದಸ್ಯರ ಆಯ್ಕೆ: ಆಕ್ಷೇಪಣೆಗೆ ಅರ್ಜಿ ಆಹ್ವಾನ

ರಾಯಚೂರ ಮೇ 14: ಮಕ್ಕಳ ರಕ್ಷಣಾ ಘಟಕದಿಂದ ಮಕ್ಕಳ ಕಲ್ಯಾಣ ಸಮಿತಿಗೆ ರಾಜ್ಯ ಮಟ್ಟದ ಆಯ್ಕೆ ಸಮಿತಿಯು ಹೆಚ್ಚುವರಿ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗಿದ್ದು ಆಕ್ಷೇಪಣೆಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ತಿಳಿಸಿದ್ದಾರೆ.

ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ-2015, ತಿದ್ದುಪಡಿ ಕಾಯ್ದೆ 2021 ಹಾಗೂ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಮಾದರಿ ನಿಯಮಗಳು 2016, ತಿದ್ದುಪಡಿ ಮಾದರಿ ನಿಯಮಗಳು 2022ರನ್ವಯ ಮಕ್ಕಳ ಕಲ್ಯಾಣ ಸಮಿತಿಗಳಿಗೆ ರಾಜ್ಯ ಮಟ್ಟದ ಆಯ್ಕೆ ಸಮಿತಿಯು ಹೆಚ್ಚುವರಿ ಆಯ್ಕೆ ಪಟ್ಟಿಯಲ್ಲಿ ರಾಯಚೂರಿನ ತಾಲೂಕಿನ ಹೊಸೂರು ವಾರ್ಡ್ ನಂ06ರ ನಿವಾಸಿಯಾದ ಕಿರಲಿಂಗಪ್ಪ ತಂದೆ ಮಲ್ಲೇಶ, ರಾಯಚೂರಿನ ಗೋಲ್ ಮಾರ್ಕೇಟ್, ಏರಿಯಾ ಸ್ಟೇಷನ್ ರಸ್ತೆಯ ಮನೆ ನಂ. 1-7-139/39ರ ನಿವಾಸಿಯಾದ ನಾಗರಾಜ್ ತಂದೆ ಸಿದ್ಧಪ್ಪ ರಟಗಲ್ ಹಾಗೂ ರಾಯಚೂರಿನ ಮಂಗಳವಾರ ಪೇಟೆಯ ನಂ. 4-5-128ರ ನಿವಾಸಿಯಾದ ಜಯಸುಧಾರಾಣೀ ಇವರನ್ನು ಸದಸ್ಯರುಗಳನ್ನಾಗಿ 03 ವರ್ಷಗಳ ಅವಧಿಗೆ ನೇಮಿಸಿ ಆದೇಶಿಸಲಾಗಿದೆ.

ಈ ಕುರಿತು ಸಾರ್ವಜನಿಕರು ಏನಾದರೂ ಆಕ್ಷೇಪಣೆಗಳು ಇದ್ದಲ್ಲಿ ತಮ್ಮ ಆಕ್ಷೇಪಣೆಗಳನ್ನು ಪೂರಕ ದಾಖಲೆಗಳೊಂದಿಗೆ ಮೇ.21ರೊಳಗಾಗಿ ಕಚೇರಿಯ ಅವಧಿಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಾರ್ಯಲಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮ.ನಂ. 1-9-138 ಮಾರೆಮ್ಮ ದೇವಸ್ಥಾನದ ಹತ್ತಿರ ಆಜಾದ ನಗರ ರಾಯಚೂರು ಇವರಿಗೆ ಸಲ್ಲಿಸಬಹುದಾಗಿದೆ. ನಿಗದಿತ ದಿನಾಂಕದ ನಂತರ ಬರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ 2015, ಹಾಗೂ ಮಾದರಿ ನಿಯಮಗಳು 2016ರ ನಿಯಮ-15(48) ರನ್ವಯ ೦ ಿಜಢಿಂಟಿ ಛಿಂಛಿಚಿಣಜಜ ತಿಣಾ ಚಿಟಿ ಠಡಿಂಚಿಟುದಚಿ-ಣುಂಟಿ ಡಿಜಛಿಜುತುಟಿರ ಜಿಂಡಿಜುರಿಟಿ ಛಿಂಟಿಣಡುಛಣಾಣುಂಟ್ಞಿ ಚಿಟಟ ಟಿಂಣ ಛಜ ಜಟುರುಛಟಜ ಣಂ ಛಜ ಚಿ ಉಚುಡಿಂಜಢಿಂಟಿ ಠಡಿ ಟಜಟಛಜಡಿ ಠಜಿ ಣುಜ ಅಂಟಟುಣಣಜಜ ಹಾಗೂ ನಿಯಮ 15(4-ಅ) ರನ್ವಯಂಟಿಥಿ ಿಜಢಿಂಟಿ ತಿಠಡಿಇುಟಿರ ಏಟಿ ಣುಜ ಖಟಠಿಟಜಟಜಟಿಣಚಿ-ಣುಂಟಿ ಠಜಿ ಣುಜ ಂಛಿಣ ಏಟಿ ಚಿಟಿಥಿ ಟಿಂಟಿ-ರಠತಜಡಿಟಿಟಜಟಿಣ ಔಡಿಂಚಿಟುದಚಿಣುಂಟಿ ಠಡಿ ಚಿಟಿಥಿ ಠಡಿಂಚಿಟುದಚಿಣುಂಟಿ, ಿಜಡಿಜಿಂಡಿಟುಟಿರ, ಣಾಛಿ ಜಿಣಾಟಿಛಿಣುಂಛಿ ತ್ಛಿಛಿ ಟಚಿಥಿ ಛಿಚಿಣಾಜ ಛಿಂಟಿಜಿಟುಛಿಣ ಠಜಿ ಏಟಿಣಜಡಿಜಣ ಏಟಿ ಘುಛಿಚಿಡಿಠಜ ಠಜಿ ಣುಜುಡಿ ಜಣಾಣುಛ ಛಿ

# ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ: ಶಾಲಾ ಆದ್ಯತೆ ನಮೂದಿಸಲು ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 14-ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ (ಆಂಗ್ಲ ಮಾಧ್ಯಮ) ಶಾಲೆ ಮತ್ತು ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ(ಸಿಬಿಎಸ್‌ಸಿ) ಶಾಲೆಗಳಿಗೆ 2025-26 ನೇ ಸಾಲಿನಲ್ಲಿ 6ನೇ ತರಗತಿ ದಾಖಲಾತಿಗೆ ಸಂಬಂಧಿಸಿದಂತೆ ಈಗಾಗಲೇ ಸಾಮಾನ್ಯ ಪ್ರವೇಶ ಪರೀಕ್ಷೆ ಬರೆದಿರುವ ವಿದ್ಯಾರ್ಥಿಗಳು ತಾವು ಪ್ರವೇಶ ಪಡೆಯಲು ಇಚ್ಛಿಸುವ ಜಿಲ್ಲೆಯಲ್ಲಿನ ಶಾಲೆಗಳ ಆದ್ಯತೆಯನ್ನು ನಮೂದಿಸಲು ಮೇ 17 ರ ವರೆಗೆ ಅವಕಾಶ ಕಲ್ಪಿಸಲಾಗಿದೆ. ವಿದ್ಯಾರ್ಥಿಗಳು ಶಾಲೆಗಳ ಶಾಲೆಗಳ ಆದ್ಯತೆ ನಮೂದಿಸಲು ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧಿಕೃತ ಜಾಲತಾಣ http://dom.karnataka.gov.in ಗೆ ಭೇಟಿ ನೀಡಬೇಕು. ಈಗಾಗಲೇ ವಿದ್ಯಾರ್ಥಿಗಳ ಪೋಷಕರ ಮೊಬೈಲ್ ಸಂಖ್ಯೆಗೆ ಎಸ್‌ಎಂಎಸ್ ಮತ್ತು ವಾಟ್ಸಪ್ ಮೂಲಕ ಮಾಹಿತಿ ರವಾನಿಸಲಾಗಿದೆ.ಹಾಗಾಗಿ ಪ್ರವೇಶ ಪರೀಕ್ಷೆ ಬರೆದ ವಿದ್ಯಾರ್ಥಿಗಳು ತಪ್ಪದೇ ಶಾಲೆಗಳ ಆದ್ಯತೆ ನಮೂದಿಸಬೇಕು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ವಿಠೋಬಾ ಹೊನಕಾಂಡೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏ.16 ರಂದು ಪ್ರಾದೇಶಿಕ ಮಟ್ಟದ ಬೃಹತ್ ಉದ್ಯೋಗ ಮೇಳ: ಹೆಸರು ನೋಂದಾಯಿಸಿಕೊಳ್ಳಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಬೀದರ ಏಪ್ರಿಲ್.14-:ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ ಬೆಂಗಳೂರು ವತಿಯಿಂದ ಕಲ್ಯಾಣ ಕರ್ನಾಟಕ ಭಾಗದಲ್ಲಿರುವ ಯುವಜನತೆಗಾಗಿ ಪ್ರಾದೇಶಿಕ ಮಟ್ಟದ ಬೃಹತ್ ಉದ್ಯೋಗ ಮೇಳವನ್ನು ಏಪ್ರಿಲ್.16 ರಂದು ಕಲಬುರಗಿಯಲ್ಲಿ ಆಯೋಜಿಸಿರುವುದರಿಂದ ಜಿಲ್ಲೆಯ ನಿರುದ್ಯೋಗ ಯುವಕ-ಯುವತಿಯರು, ಉದ್ಯೋಗಾಂಕ್ಷಿಗಳು ಜಾಲತಾಣಃಣಣಠಿ://ಇುಟಟ-ಛಿಂಟಿಟಿಜಛಿಣ.ಇಚಿಞ್ಞ-ಚಿಟಇಚಿಡಿ.ಛಿಂಟ ನಲ್ಲಿ ಹೆಸರು ನೋಂದಾಯಿಸಿಕೊಂಡು ಉದ್ಯೋಗ ಮೇಳದಲ್ಲಿ ಭಾಗವಹಿಸಬೇಕೆಂದು ಬೀದರ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೀದರ ಜಿಲ್ಲೆಯ ಎಲ್ಲಾ ತಾಲ್ಲೂಕಿನ ಯಾವುದೇ ವಿದ್ಯಾರ್ಹತೆ ಹೊಂದಿರುವ ಎಸ್.ಎಸ್.ಎಲ್.ಸಿ., ಪಿಯುಸಿ, ಐಟಿಐ, ಡಿಪ್ಲೋಮಾ, ಪದವಿ, ಸ್ನಾತಕೋತ್ತರ ಪದವಿಗಳನ್ನು ಪೂರ್ಣಗೊಳಿಸಿದ ನಿರುದ್ಯೋಗ ಯುವಕ-ಯುವತಿಯರಿಗೆ ಉದ್ಯೋಗಾಂಕ್ಷಿಗಳಿಗೆ ಪ್ರತಿಷ್ಠಿತ ಕಂಪನಿ/ಸಂಸ್ಥೆಗಳಲ್ಲಿ ಉದ್ಯೋಗ ಪಡೆಯಲು ಇದೊಂದು ಸುವರ್ಣ ಅವಕಾಶವಾಗಿರುವುದರಿಂದ ಆಸಕ್ತ ಅರ್ಹ ಉದ್ಯೋಗಾಂಕ್ಷಿಗಳು ಅಗತ್ಯ ದಾಖಲಾತಿಗಳೊಂದಿಗೆ ಉದ್ಯೋಗ ಮೇಳದಲ್ಲಿ ಭಾಗವಹಿಸಿ ಇದರ ಸದುಪಯೋಗಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ:08022075030 ಅಥವಾ ಇಮೇಲೆ udyogamela.ksdc@kanataka.gov.in ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

ಜಾಹೀರಾತಿಗಾಗಿ ಇಂದೆ
ಸಂಪರ್ಕಿಸಿ:9449732000

# ನವೀನ್ ಪಬ್ಲಿಕ್ ಶಾಲೆ: ಪೌರ ಕಾರ್ಮಿಕರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 14 : ಇಲ್ಲಿಯ ಕುಂಬಾರವಾಡದ ನವೀನ್ ಪಬ್ಲಿಕ್ ಶಾಲೆಯು ಪೌರ ಕಾರ್ಮಿಕರನ್ನು ಸನ್ಮಾನಿಸುವ ಮೂಲಕ ವಿಶ್ವ ಕಾರ್ಮಿಕರ ದಿನವನ್ನು ಮಂಗಳವಾರ ವಿಶಿಷ್ಟವಾಗಿ ಆಚರಿಸಿತು.

ಶಾಲೆಯ ಅಧ್ಯಕ್ಷ ಕಾಮಶೆಟ್ಟಿ ಚಿಕ್ಕಬಸೆ ಅವರು ಪೌರ ಕಾರ್ಮಿಕರಿಗೆ ಶಾಲು ಹೊದಿಸಿ ಸತ್ಕರಿಸಿ, ಸಿಹಿ ತಿನ್ನಿಸಿದರು.

ಸ್ವಚ್ಛ, ಸುಂದರ ಹಾಗೂ ಸದೃಢ ರಾಷ್ಟ್ರನಿರ್ಮಾಣದಲ್ಲಿ ಪೌರ ಕಾರ್ಮಿಕರ ಪಾತ್ರ ಬಹಳ ಮುಖ್ಯವಾಗಿದೆ ಎಂದು ಅವರು ಹೇಳಿದರು.

ದೇಶದ ಪ್ರತಿಯೊಂದು ಕ್ಷೇತ್ರದ ಬೆಳವಣಿಗೆಯಲ್ಲೂ ಕಾರ್ಮಿಕರ ಕೊಡುಗೆ ಅಪಾರವಾಗಿದೆ ಎಂದು ಹೇಳಿದರು.

ಪೌರ ಕಾರ್ಮಿಕರು ಸೇರಿದಂತೆ ಎಲ್ಲ ಕಾರ್ಮಿಕರನ್ನು ಗೌರವದಿಂದ ಕಾಣಬೇಕು. ಅವರನ್ನು ಪ್ರೋತ್ಸಾಹಿಸಬೇಕು ಎಂದು ತಿಳಿಸಿದರು.

ವಿಕಾಸ ಅಕಾಡೆಮಿ ಜಿಲ್ಲಾ ಸಂಚಾಲಕ ರೇವಣಸಿದ್ದಪ್ಪ ಜಲಾದೆ, ಶಾಲೆಯ ಪ್ರಾಚಾರ್ಯ ರಾಜಪ್ಪ ಬಿರಾದಾರ, ಆಡಳಿತಾಧಿಕಾರಿ ಗಣೇಶ, ಸುಧಾರಾಣಿ, ದೀಪಾ, ಪಂಚಶೀಲಾ, ನಗರಸಭೆಯ ವಿಠ್ಠಲ, ಬಾಬುರಾವ್ ಇದ್ದರು.

# ಗುರು ನಾನಕ ದೇವ್ ಪಬ್ಲಿಕ್ ಶಾಲೆಗೆ ಶೇ. 100ಕ್ಕೆ 100 ಫಲಿತಾಂಶ ಅನಿಶಾ ಯಾದವ್ ಜಿಲ್ಲೆಗೆ ಟಾಪರ್



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 14 : 10ನೇ ತರಗತಿ (ಸಿಬಿಎಸ್‌ಇ) ಫಲಿತಾಂಶ ಪ್ರಕಟಗೊಂಡಿದ್ದು, ನಗರದ ಗುರು ನಾನಕ ಕಾಲೋನಿಯಲ್ಲಿರುವ ಗುರು ನಾನಕ ದೇವ್ ಪಬ್ಲಿಕ್ ಶಾಲೆಗೆ ಪ್ರತಿವರ್ಷದಂತೆ ಶೇಕಡಾ 100 ಕ್ಕೆ 100 ರಷ್ಟು ಫಲಿತಾಂಶ ಪಡೆದು ಹೊಸ ವಿಕ್ರಮ ಸಾಧಿಸಿದೆ.

ಪರೀಕ್ಷೆ ಬರೆದ ಎಲ್ಲಾ 89 ವಿದ್ಯಾರ್ಥಿಗಳು ಪಾಸಾಗಿರುವುದು ವಿಶೇಷವಾಗಿದೆ. 36 ಅಗ್ರಶ್ರೇಣಿ, 39 ಪ್ರಥಮ ದರ್ಜೆ, 14 ದ್ವಿತೀಯ ದರ್ಜೆ ಶ್ರೇಣಿಯಲ್ಲಿ ಪಾಸಾಗಿದ್ದಾರೆ. 85% ಕ್ಕಿಂತ ಮೇಲ್ಪಟ್ಟ ವಿದ್ಯಾರ್ಥಿಗಳು :

ಅನಿಶಾ ಯಾದವ್ 97%, ನಾಫೆ ಆಫಜಲ್ ಜಾಫ್ರೀ 95.2%, ವಿನಾಯಕ 92.2%, ವೈಭವ್ ಎಸ್. 91.6%, ಸಾನಿಯಾ ಶೇಖ್ 90.4%, ಕಿರಥ್ ಜಾಧವ್ 89.6%, ಕೃಷ್ಣಬುಯ್ಯಾ 88.6%, ವಿಕ್ಟರ್ ಅಂಥೋನಿ 87.8%, ಓಂ ಪ್ರಸಾದ್ 87.8%, ಮನಿಕಂಠಾ ಮುಲ್ಗೆ 87.6%, ಮಯೂರಿ 86.4% ಮತ್ತು ಅಕ್ಷತಾ 85.4%.

ನಾಫೆ ಆಫಜಲ್ ಜಾಫರಿ ವಿಜ್ಞಾನ ವಿಷಯದಲ್ಲಿ 100/100 ಅಂಕಗಳಿಸಿ ಗಮನ ಸೆಳೆದಿದ್ದಾರೆ.

ಗುರು ನಾನಕ ದೇವ್ ಪಬ್ಲಿಕ್ ಶಾಲೆ ಜಿಲ್ಲೆಯಲ್ಲಿ ಗುಣಮಟ್ಟದ ಶಿಕ್ಷಣಕ್ಕೆ ಹೆಸರಾಗಿದೆ. 10ನೇ ತರಗತಿ (ಸಿಬಿಎಸ್‌ಇ) ಪರೀಕ್ಷೆಯಲ್ಲಿ ಪ್ರತಿ ವರ್ಷವೂ ಅದ್ಭುತ ಫಲಿತಾಂಶ ಪಡೆದು ಗಮನ ಸೆಳೆಯುತ್ತಲೆ ಇದೆ. ಪರೀಕ್ಷೆಗೆ ಕುಳಿತ ಎಲ್ಲಾ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಅಗ್ರ ಶ್ರೇಣಿ ಮತ್ತು ಪ್ರಥಮ ಶ್ರೇಣಿಯಲ್ಲಿಯೇ ಪಾಸಾಗಿರುವುದು ಶಾಲೆಯ ಗುಣಮಟ್ಟಕ್ಕೆ ಹಿಡಿದ ಕೈಗನ್ನಡಿಯಾಗಿದೆ. ಇಂದಿನ





ಸ್ಪರ್ಧಾತ್ಮಕ ಯುಗದಲ್ಲಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವುದೆ ನಮ್ಮ ಸಂಸ್ಥೆಯ ಗುರಿಯಾಗಿದೆ. ಈ ಬಾರಿಯ ಫಲಿತಾಂಶ ಇದರ ಫಲಶ್ರುತಿಯೇ ಆಗಿದೆ ಎಂದು ಗುರು ನಾನಕ ದೇವ್ ಪಬ್ಲಿಕ್ ಶಾಲೆಯ ಅಧ್ಯಕ್ಷೆ ಡಾ॥ ರೇಷ್ಮಾ ಕೌರ್ ಅವರು ತಿಳಿಸಿದ್ದಾರೆ.

ಅತ್ಯುತ್ತಮ ಫಲಿತಾಂಶ ಪಡೆದ ಮಕ್ಕಳಿಗೆ ಅಭಿನಂದಿಸಿರುವ ಅವರು ಶಾಲೆಯ ಪ್ರಾಚಾರ್ಯರಾದ ಶ್ರೀಮತಿ ಶರ್ಲಿ ಶೀಬಾ ಹಾಗೂ ಸಿಬ್ಬಂದಿಯ ಶ್ರಮವನ್ನು ಪ್ರಶಂಶಿಸಿದ್ದಾರೆ.

# ಶಿವಶಂಕರ ಕಾಮಶೆಟ್ಟಿ ಅವರಿಗೆ ಅತ್ಯುತ್ತಮ ಅಧಿಕಾರಿ ಪ್ರಶಸ್ತಿ ನೀಡಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 14 : ಉತ್ತಮ ಸೇವೆಯ ಹಿನ್ನೆಲೆಯಲ್ಲಿ ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಎಂಜಿನಿಯರ್ ಶಿವಶಂಕರ ಕಾಮಶೆಟ್ಟಿ ಅವರಿಗೆ ಅತ್ಯುತ್ತಮ ಸರ್ಕಾರಿ ಅಧಿಕಾರಿ ಪ್ರಶಸ್ತಿ ನೀಡಬೇಕು ಎಂದು ಕನ್ನಡ ಚಳವಳಿ ವಾಟಾಳ್ ಸಂಘಟನೆಯ ಜಿಲ್ಲಾ ಘಟಕದ ಅಧ್ಯಕ್ಷ ಜಾನಸನ್ ಘೋಡೆ ಮನವಿ ಮಾಡಿದ್ದಾರೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಅವರಿಗೆ ಈ ಕುರಿತು ಮನವಿ ಪತ್ರ ಸಲ್ಲಿಸಿದ್ದಾರೆ. ಕಾಮಶೆಟ್ಟಿ ಅವರು ಹುದ್ದೆ ವಹಿಸಿಕೊಂಡ ನಂತರ ಜಿಲ್ಲೆಯಲ್ಲಿ ನನೆಗುದಿಗೆ ಬಿದ್ದಿದ್ದ ಅನೇಕ ಅಭಿವೃದ್ಧಿ ಕಾಮಗಾರಿಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿದ್ದಾರೆ. ಇದರಿಂದ ಸಾರ್ವಜನಿಕರಿಗೆ ತುಂಬಾ ಅನುಕೂಲವಾಗಿದೆ ಎಂದು ತಿಳಿಸಿದ್ದಾರೆ.

ಸರ್ಕಾರದ ಕಾಮಗಾರಿ ಅನುಷ್ಠಾನಕ್ಕೆ ಮುತುವರ್ಜಿ ವಹಿಸಿದ ಅವರಿಗೆ ಪ್ರಶಸ್ತಿ ನೀಡಿ ಪ್ರೋತ್ಸಾಹಿಸಬೇಕು ಎಂದು ಬೇಡಿಕೆ ಮಂಡಿಸಿದ್ದಾರೆ.

# ಪ್ರೌಢಶಾಲಾ ಮಕ್ಕಳಿಗೆ ವಿಶೇಷ ಬೇಸಿಗೆ ಶಿಬಿರ ಇಂದಿನಿಂದ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.14: ಪಟ್ಟಣದ ಬಸವೇಶ್ವರ ವೃತ್ತದ ಹತ್ತಿರದ ಸರ್ಕಾರಿ ಪ್ರೌಢಶಾಲೆಯಲ್ಲಿ ಮೇ 15 ರ ರಿಂದ ಮೇ.25 ರ ವರೆಗೆ ಹತ್ತು ದಿವಸಗಳ ಕಾಲ ವಿಶೇಷ ಬೇಸಿಗೆ ಶಿಬಿರ ಆಯೋಜಿಸಲಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ್ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿದ ಅವರು, ತಾಲೂಕಿನ 8, 9 ಮತ್ತು 10ನೇ ತರಗತಿಯ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಇದೇ ಮೇ.15 ಗುರುವಾರ ರಿಂದ ಮೇ.25ರ ರವಿವಾರದ ವರೆಗೆ ಪಟ್ಟಣದ ಸರ್ಕಾರಿ ಪ್ರೌಢಶಾಲಾ ಆವರಣದಲ್ಲಿ ವಿಶೇಷ ಬೇಸಿಗೆ ಶಿಬಿರ ಆಯೋಜಿಸಲಾಗಿದ್ದು, ಶಿಬಿರದಲ್ಲಿ ಸಂಗೀತ, ಚಿತ್ರಕಲೆ, ಯೋಗ, ಧ್ಯಾನ, ವ್ಯಾಯಾಮ, ಸೇರಿದಂತೆ ಇತರೆ ಪಠ್ಯೇತರ ಚಟುವಟಿಕೆಗಳನ್ನು ನುರಿತ ತಜ್ಞರಿಂದ ನಡೆಸಲಾಗುತ್ತಿದೆ. ತಾಲೂಕಿನ ಪ್ರೌಢ ಹಾಗು ಪ್ರಾಥಮಿಕ ಶಾಲೆಯ 8, 9 ಮತ್ತು 10ನೇ ತರಗತಿಯ ವಿದ್ಯಾರ್ಥಿಗಳು ಇದರ ಲಾಭ ಪಡೆದುಕೊಳ್ಳಬೇಕು ಎಂದು ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ನೋಡಲ್ ಅಧಿಕಾರಿ ಬಿಆರ್‌ಪಿ ಚೇತನಾ ಚನಶೆಟ್ಟಿ ದೂರವಾಣಿ ಸಂಖೆ 9900245879 ಅಥವಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ದೂರವಾಣಿ ಸಂಖೆ 9620663666 ಗೆ ಸಂಪರ್ಕಿಸಲು ಕೋರಲಾಗಿದೆ.

# ಎಸ್.ಎಸ್.ಎಲ್.ಸಿ. ಹಾಗೂ ಪಿ.ಯು.ಸಿ.ಯಲ್ಲಿ ಹೆಚ್ಚಿನ ಅಂಕಪಡೆದ ವಿದ್ಯಾರ್ಥಿ / ವಿದ್ಯಾರ್ಥಿನಿಯರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮೇ.14: ಕರ್ನಾಟಕ ರಾಜ್ಯ ಸರಕಾರಿ ನಿವೃತ್ತ ಅಲ್ಪ ಸಂಖ್ಯಾತರ ನೌಕರರ ಸಂಘದ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವೂ 2024-25ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ಪಿ.ಯು.ಸಿ.ಯಲ್ಲಿ ಹೆಚ್ಚಿನ ಅಂಕಪಡೆದು ಉತ್ತೀರ್ಣರಾದ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಸನ್ಮಾನ ಕಾರ್ಯಕ್ರಮವನ್ನು ನಗರದ ಕನ್ನಡ ಸಾಹಿತ್ಯ ಪರಿಷತ ಕನ್ನಡ ಭವನದಲ್ಲಿ ಮೇ. 29. ರಂದು ಸಾಯಂಕಾಲ 6:00 ಗಂಟೆಗೆ ಹಮ್ಮಿಕೊಳ್ಳಲಾಗಿದೆ. ಎಂದು ಕ ಸಂಘದ ಅಧ್ಯಕ್ಷರಾದ ಸೈಯ್ಯದ ನಜೀರೊದ್ದಿನ ಮುತವಲ್ಲಿ ತಿಳಿಸಿದ್ದಾರೆ.

ಸದರಿ ಕಾರ್ಯಕ್ರಮದಲ್ಲಿ ವಿಶೇಷವಾಗಿ ಸಿ.ಎ.ಪರೀಕ್ಷೆಯಲ್ಲಿ ಉತ್ತಮ ಶ್ರೇಣಿಯಲ್ಲಿ ಪಾಸು ಮಾಡಿದ ವಿದ್ಯಾರ್ಥಿಗಳಿಗೆ ಹಾಗೂ ಯು.ಪಿ.ಎಸ್.ಸಿ.ಯಲ್ಲಿ ನಮ್ಮ ಜಿಲ್ಲೆಯ ಕಮಲಾಪೂರ ತಾಲ್ಲೂಕಿನ ಶ್ರೀ ಮೋಹನ ಪಾಟಿಲ ರವರು ಪಾಸ ಮಾಡಿದ್ದು ಅವರನ್ನು ಕೂಡ ಸನ್ಮಾನಿಸಲಾಗುವುದು.

ಕಲಬುರಗಿ ಜಿಲ್ಲೆಯಲ್ಲಿ ಉರ್ದು ಭಾಷೆಯ ಉನ್ನತಿಗಾಗಿ, ವಿದ್ಯಾರ್ಥಿಗಳ ಪ್ರೋತ್ಸಾಹಕ್ಕಾಗಿ ಸರ್ಕಾರಿ ಉರ್ದು ಪ್ರೌಢ ಶಾಲೆಗಳಿಂದ 80% ಅಂಕ ಪಡೆದು ಪಾಸು ಮಾಡಿದ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೂ ಕೂಡ ಸನ್ಮಾನಿಸಲಾಗುವುದು.

ಪ್ರಸ್ಕೃತ ಸಾಲಿನಲ್ಲಿ ಸರಕಾರಿ ಅಲ್ಪ ಸಂಖ್ಯಾತರ ನೌಕರರ ಮಕ್ಕಳು "ಹಿಫ್ಜ್" (ಖುರ್‌ಆನ್ ಫಠಣ ಬಾಯಿಪಾಟ) ಮುಗಿಸಿರುವ ವಿದ್ಯಾರ್ಥಿಗಳಿಗೂ ಕೂಡ ಸನ್ಮಾನಿಸಲಾಗುವುದು.

ಜಿಲ್ಲೆಯ ಅಲ್ಪ ಸಂಖ್ಯಾತ ಸರಕಾರಿ ನೌಕರರ ಮಕ್ಕಳು ಎಸ್.ಎಲ್.ಸಿ.ಹಾಗೂ ಪಿ.ಯು.ಸಿ. 2ನೇ ರಲ್ಲಿ 90% ಕಿಂತ ಹೆಚ್ಚಿನ ಅಂಕ ಪಡೆದು ಪಾಸಾದವರು ತಮ್ಮ ಅಂಕ ಪಟ್ಟಿ, ಆಧಾರ ಕಾರ್ಡ, ಪಾಸ್‌ಪೋರ್ಟ ಅಳತೆಯ ಫೋಟೋ ಹಾಗೂ ಪಾಲಕರು ಸರ್ಕಾರಿ ನೌಕರರ ಇದ್ದ ಬಗ್ಗೆ ಮಾಹಿತಿ ಪತ್ರ ಇವುಗಳನ್ನು ಮೇ. 25. ರಂದು ಸಾಯಂಕಾಲ 5:00 ಗಂಟೆ-ಯ ಒಳಗಾಗಿ ವಾಟ್ಸ್ ಅಪ ಮುಖಾಂತರ ಈ ಕೆಳಗಿನ ವಿಳಾಸಕ್ಕೆ ಕಳುಹಿಸಬಹುದು. ಸಂಘದ ಅಧ್ಯಕ್ಷ ಸೈಯ್ಯದ ನಜೀರೊದ್ದಿನ ಮುತವಲ್ಲಿ ಮೋ.ನಂ 9845478234, ಕಾರ್ಯದರ್ಶಿ ನವಾಬ ಖಾನ್ ಮೋ.ನಂ 9449933661 ಇವರನ್ನು ಸಂಪರ್ಕಿಸಬೇಕು ಎಂದು ಮುತವಲ್ಲಿ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಹೆಚ್ಚಳಕ್ಕೆ ಆದ್ಯತೆ ಇರಲಿ :ಭಾಲ್ಕಿ ಬಿಇಓ ಸಿ.ಜಿ.ಹಳ್ಳದ್

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.14: ಸರ್ಕಾರಿ ಪ್ರಾಥಮಿಕ, ಪ್ರೌಢ ಮತ್ತು ಪ.ಪೂ ಕಾಲೇಜುಗಳಲ್ಲಿ ದಾಖಲಾತಿ ಹೆಚ್ಚಿಸಲು ಗಮನ ಹರಿಸಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ್ ಹೇಳಿದರು. ಪಟ್ಟಣದ ಸರ್ಕಾರಿ ಪ.ಪೂ ಕಾಲೇಜಿನಲ್ಲಿ ಮಂಗಳವಾರ ನಡೆದ ನಮ್ಮ ಶಾಲೆ ನಮ್ಮ ಜವಾಬ್ದಾರಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. 2025-26ನೇ ಸಾಲಿನಲ್ಲಿ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಮಕ್ಕಳ ದಾಖಲಾತಿ ಹೆಚ್ಚಿಸುವುದು ಅತ್ಯಗತ್ಯವಾಗಿದೆ. ಸರ್ಕಾರಿ ಶಾಲೆಗಳಲ್ಲಿ ಸಾಕಷ್ಟು ಸೌಲಭ್ಯಗಳಿವೆ, ಆದರೆ ಆ ಸೌಲಭ್ಯಗಳ ಮಾಹಿತಿ ಪಾಲಕರಲ್ಲಿ ಮೂಡಿಸುವಲ್ಲಿ ನಾವು ವಿಫಲರಾಗುತ್ತಿದ್ದೇವೆ. ಹೀಗಾಗಿ ಪ್ರಸ್ತುತ ಸಾಲಿನಲ್ಲಿ ಸರ್ಕಾರಿ ಶಾಲೆಗಳಲ್ಲಿ ಅತಿಹೆಚ್ಚು ದಾಖಲಾಗುವಂತೆ ನೋಡಿಕೊಳ್ಳುವುದು, ಶಿಕ್ಷಕರ, ಪಾಲಕರ ಮತ್ತು ಶಾಲಾ




ಮೇಲುಸ್ತುವಾರಿ ಸದಸ್ಯರ ಜವಾಬ್ದಾರಿಯಾಗಿದೆ. ಅಲ್ಲದೇ ದಾಖಲಾದ ಮಕ್ಕಳನ್ನು ಶಾಲೆಗೆ ಪ್ರತಿನಿತ್ಯ ಹಾಜರಾಗುವಂತೆ ಮಾಡುವುದು. ಸರ್ಕಾರದಿಂದ ಕೊಡಲಾಗುವ ಸೌಲಭ್ಯಗಳು. ಕೇಂದ್ರ ಮತ್ತು ರಾಜ್ಯ ಸರ್ಕಾರದ ಅನುದಾನಗಳು ವಿದ್ಯಾರ್ಥಿಗಳಿಗೆ ಸರಿಯಾಗಿ ಮುಟ್ಟುತ್ತಿರುವ ಬಗ್ಗೆ ಮಾಹಿತಿ ಪಡೆದು ಕಾರ್ಯನಿರ್ವಹಿಸಬೇಕಿದೆ. ಇದಕ್ಕಾಗಿ ಶಿಕ್ಷಣ ಇಲಾಖೆಯ ವಿವಿಧ ಸ್ಥರಗಳ ಮೇಲ್ವಿಚಾರಕ ಅಧಿಕಾರಿಳಿಂದ, ಕ್ಷೇತ್ರ ಸಂಪನ್ಮೂಲ ಸಿಬ್ಬಂದಿಗಳಿಂದ, ಅಜೀಂಪ್ರೇಮ್‌ಜಿ ಫೌಂಡೇಶನ್ ಫಾರ್ ಡೆವಲಪ್ಮೆಂಟ್ ಸಂಸ್ಥೆಯ ಶೈಕ್ಷಣಿಕ ಸಂಪನ್ಮೂಲ ತಂಡದ ವ್ಯಕ್ತಿಗಳ ಸಹಭಾಗಿತ್ವದಲ್ಲಿ ಕಾರ್ಯನಿರ್ವಹಿಸಬೇಕಿದೆ. ಸಮುದಾಯದಲ್ಲಿ ಶಿಕ್ಷಣದ ಮಹತ್ವ, ಸರ್ಕಾರಿ ಶಾಲೆಗಳಲ್ಲಿ ನೀಡುತ್ತಿರುವ ಗುಣಮಟ್ಟದ ಶಿಕ್ಷಣ, ಪ್ರೋತ್ಸಾಹದಾಯಕ ಯೋಜನೆಗಳ ಕುರಿತು ಜಾಗೃತಿ ಮೂಡಿಸಬೇಕಿದೆ ಎಂದು ಹೇಳಿದರು.

ಕ್ಷೇತ್ರ ಸಮನ್ವಯಾಧಿಕಾರಿ ಮನೋಹರ ಹೊಳಕರ ಮಾತನಾಡಿ, ನಮ್ಮ ಸಾಲೆ ನಮ್ಮ ಜವಾಬ್ದಾರಿ ಕಾರ್ಯಕ್ರಮವು ರಾಜ್ಯದ 35 ಜಿಲ್ಲೆಗಳ 53810 ಶಾಲೆಗಳಲ್ಲಿ ಅಯೋಇಸಿದು, ಇದರ ಯಶಸ್ಸು ಸಮುದಾಯದ ಪಾಲ್ಗೊಳ್ಳುವಿಕೆಯ ಮುಖಾಂತರ ಸರ್ಕಾರದ ಯೋಜನೆಗಳು ಜನರಿಗೆ ಮುಟ್ಟಿಸುವುದಾಗಿದೆ ಎಂದು ಹೇಳಿದರು. ಅಜೀಮ್ ಪ್ರೇಮಜಿ ಫೌಂಡೇಶನ್ ಮುಖ್ಯಸ್ಥ ಸಿದ್ರಾಮ ತೆ-ಉಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಅಕ್ಷರ ದಾಸೋಹ ಯೋಜನೆಯ ಸಹಾಯಕ ನಿರ್ದೇಶಕ ಮಲ್ಲಿನಾಥ ಸಜ್ಜನ್ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಹಿರಿಯ ವೈದ್ಯೆ ಡಾ। ಸುಪ್ರಿಯಾ ಪಾಟೀಲ ವಿದ್ಯಾರ್ಥಿಗಳಲ್ಲಿ ಆರೋಗ್ಯದ ಅರಿವು ಮೂಡಿಸಿದರು.

ಇದೇವೇಳೆ ಜಿಲ್ಲಾ ಮಟ್ಟದಲ್ಲಿ ಅತಿ ಹೆಚ್ಚು ಅಂಕಗಳಿಸಿ ಉತ್ತೀರ್ಣರಾದ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಪ್ರೇರಣಾದಾಯಕ ಸತ್ಕಾರ ಮಾಡಲಾಯಿತು. ಕಾರ್ಯಕ್ರಮದಲ್ಲಿ ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ದತ್ತು ಕಾಟಕರ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸೂರ್ಯಕಾಂತ ಸುಂಟೆ, ಪ್ರಾಚಾರ್ಯ ಸುಖದೇವ ಬಿರಾದಾರ, ಇಸಿಓ ಸಹದೇವ.ಜಿ, ಗಂಗಾಧರ, ಬಿಆರ್‌ಪಿ ಚೇತನಾ ಚನಶೆಟ್ಟಿ, ಸಿಆರ್‌ಪಿ ಅಂಬ್ರೀಶ ಖಂಡ್ರೆ, ಭುವನೇಶ್ವರ ಬಿರಾದಾರ, ಮಹೇಂದ್ರ ಮಾನಕರಿ, ಸಂದೀಪ, ನೀಲಕಂಠ ಕುರಣಿ, ಮಹಾದೇವ ವಾಂಜರಖೇಡ, ರಾಜಕುಮಾರ ಘಂಟೆ, ಸಂತೋಷ ಸ್ವಾಮಿ, ಚನ್ನಬಸಪ್ಪಾ ತಳವಾಡೆ, ಮಹೇಶ ಕೊರಾಳೆ, ಸಂತೋಷ ಧಬಾಲೆ ಉಪಸ್ಥಿತರಿದ್ದರು.

ಸಹದೇವ ಗೌಡಗಾವೆ ಸ್ವಾಗತಿಸಿದರು. ಚೇತನಾ ಸಂತೋಷ ಕುವಾರ ನಿರೂಪಿಸಿದರು. ಚನ್ನಪ್ಪ ವಂದಿಸಿದರು.

# ಜಿಲ್ಲಾ ಉಸ್ತುವಾರಿ ಸಚಿವರಿಂದ ಕಣ್ಣಿ ತರಕಾರಿ ಮಾರುಕಟ್ಟೆ ಕಟ್ಟಡ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.14: ನಗರದ ಎಂ ಎಸ್ ಕೆ ಮಿಲ್ ಬಳಿ ನಿರ್ಮಾಣವಾಗುತ್ತಿರುವ ಕಣ್ಣಿ ತರಕಾರಿ ಮಾರುಕಟ್ಟೆ ಕಟ್ಟಡವನ್ನು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ತರಕಾರಿ ಮಾರಾಟಗಾರರಿಗೆ ಹಾಗೂ ಗ್ರಾಹಕರಿಗೆ ಅನುಕೂಲವಾಗುವ ರೀತಿ ಸೌಲಭ್ಯಗಳನ್ನು ಅದರಲ್ಲೂ ಮಹಿಳೆಯರಿಗೆ ಹಾಗೂ ಪುರುಷರಿಗೆ ಶೌಚಾಲಯ ನಿರ್ಮಾಣ, ವಾಹನ ನಿಲುಗಡೆಗೆ ಅಗತ್ಯ ಸ್ಥಳಾವಕಾಶ ಕಲ್ಪಿಸಲು ಸಲಹೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಕುಡಾ ಅಧ್ಯಕ್ಷ ಮಜರ್ ಆಲಂ ಖಾನ್, ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್, ಪೊಲೀಸ್ ಕಮೀಷನರ್ ಡಾ ಶರಣಪ್ಪ, ಎಸ್ ಪಿ ಅಡ್ಡೂರು ಶ್ರೀನಿವಾಸಲು, ಮಹಾನಗರ ಪಾಲಿಕೆ ಕಮೀಷನರ್ ಅವಿನಾಶ ಸಿಂಧೆ ಸೇರಿದಂತೆ ಹಲವರಿದ್ದರು.

ಭಾರತ- ಪಾಕಿಸ್ತಾನ ಯುದ್ಧ ಭೀತಿ ಹಿನ್ನೆಲೆ: ಅವಶ್ಯಕ ಮುನ್ನೆಚ್ಚರಿಕಾ

## ಕ್ರಮ ಕೈಗೊಳ್ಳಲು ಹಾಗೂ ಸಿದ್ಧತೆಯಲ್ಲಿರಲು ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮೇ:14:ಭಾರತ–ಪಾಕಿಸ್ತಾನಯುದ್ಧಭೀತಿಹಿನ್ನೆಲೆಯಲ್ಲಿ ಅವಶ್ಯಕ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲು ಹಾಗೂ ಸಕಲ ಸಿದ್ಧತೆ ಮಾಡಿಕೊಳ್ಳಲು ಜಿಲ್ಲಾಧಿಕಾರಿ ಡಾ.ಸುಶೀಲ. ಬಿ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಭಾರತ –ಪಾಕ್ ಯುದ್ಧ ಭೀತಿ ಹಿನ್ನೆಲೆ ಮುನ್ನೆಚ್ಚರಿಕೆಯಾಗಿಕೈಗೊಳ್ಳಬೇಕಾದ ಪೂರ್ವ ಸಿದ್ಧತಾ ಕ್ರಮಗಳ ಕುರಿತ ಸಭೆ ನಡೆಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿನ ಜನನಿಬೀಡ, ಸೂಕ್ಷ್ಮ ಪ್ರದೇಶಗಳಲ್ಲಿ ನಿಗಾ ಇಟ್ಟುಪೊಲೀಸ್ ಇಲಾಖೆಯಿಂದ ತಪಾಸಣೆ ಕಾರ್ಯ ನಡೆಯುತ್ತಿದೆ. ಮುಂಬರುವ ದಿನಗಳಲ್ಲಿ ತುರ್ತು ಸಂದರ್ಭದಲ್ಲಿ ಜಿಲ್ಲೆಯಲ್ಲಿ

ಸರ್ಕಾರಿ,ಖಾಸಗಿ ಆಸ್ಪತ್ರೆಗಳು, ನುರಿತ ವೈದ್ಯರೊಂದಿಗೆ ಸಿದ್ಧತೆಯಲ್ಲಿರಬೇಕು. ಆಶ್ರಯ ತಾಣಗಳಿಗಾಗಿ ಸರ್ಕಾರಿ ಸಂಸ್ಥೆಗಳ ಮ್ಯಾಪಿಂಗ್ ಮಾಡಿಕೊಳ್ಳಬೇಕು. ಎನ್,ಸಿ,ಸಿ ,ಎನ್ ಎಸ್ ಎಸ್ ಮತ್ತು ಇತರೆ ವಾಲಿಯಂಟಿಯರ್ಸ ಸಿದ್ಧತೆಯಲ್ಲಿಡಬೇಕು. ವಿವಿಧ ಸಾಮಗ್ರಿಗಳ ಬೆಲೆ ಏರಿಸಿ ಮಾರಾಟವಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿ ಇದಕ್ಕಾಗಿ ದೂರು ನಿರ್ವಹಣಾ ಸಮಿತಿ ಸಹ ರಚಿಸಲಾಗಿದೆ ಎಂದು ತಿಳಿಸಿದರು.

ಈಗಾಗಲೇ ಕಂಟ್ರೋಲ್ ರೂಮ್ ಆರಂಭಿಸಿದೆ. ಸಾಮಾಜಿಕ ಜಾಲತಾಣಗಳಲ್ಲಿ, ಯುದ್ಧಕ್ಕೆ ಸಂಬಂಧಿಸಿದ ಫೇಕ್ ಸುದ್ದಿ ಹರಡಿಸದಂತೆ ಎಚ್ಚರಿಕೆ ನೀಡಲಾಗಿದೆ. ಜಿಲ್ಲೆಯಲ್ಲಿ ಧಾರ್ಮಿಕ ಸಹಿಷ್ಣುತೆ ಕಾಪಾಡಿಕೊಳ್ಳಲು ಹಾಗೂ ಪರಸ್ಪರ ಸೌಹಾರ್ದಯುತವಾಗಿ ಇರಲು ಕೋರಿದ್ದು,ಕಮ್ಯುನಲ್ ಸಂಘರ್ಷಗಳ ಬಗ್ಗೆ ತೀವ್ರ ಕಟ್ಟೆಚ್ಚರವಹಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿ, ಸಾರ್ವಜನಿಕರ ಸುರಕ್ಷತೆಯ ಹಿತದೃಷ್ಟಿಯಿಂದ ರಾಜ್ಯದ ನಾಲ್ಕು ಜಿಲ್ಲೆಗಳಲ್ಲಿ ಅಣಕು ಪ್ರದರ್ಶನ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯಲ್ಲಿಯೂ ಇಂತಹ ಅಣಕು ಪ್ರದರ್ಶನಕ್ಕೆ ಸಿದ್ದತೆ ಮಾಡಿಕೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚಿಸಿದರು.

ಯುದ್ದದ ಬಗ್ಗೆ ಸುಳ್ಳು ಸುದ್ದಿ ಹಬ್ಬಿಸದಿರಲು ಸೂಚನೆ: ಭಾರತ ಮತ್ತು ಪಾಕಿಸ್ತಾನದ ಮಧ್ಯೆ ಯುದ್ಧ ಭೀತಿ ಉಂಟಾಗಿರುವ ಹಿನ್ನಲೆಯಲ್ಲಿ ಕೇಂದ್ರ ಹಾಗೂ ರಾಜ್ಯಸರ್ಕಾರದ ಸೂಚನೆ ಮೇರೆಗೆ ಜಿಲ್ಲೆಯಲ್ಲಿ ಸಾರ್ವಜನಿಕರು ಸುಳ್ಳು ಸುದ್ದಿಗಳಿಗೆ ಕಿವಿಕೊಡಬಾರದು. ಬದಲಾಗಿ ಜಿಲ್ಲಾಡಳಿತ ನೀಡುವ ಅಧಿಕೃತವಾಗಿ ಮಾಹಿತಿಯನ್ನು ಅವಲಂಬಿಸಬೇಕು. ಅಲ್ಲದೆ ಸಾರ್ವಜನಿಕರಿಗೆ ಬೇಕಾಗುವ ಅಗತ್ಯ ವಸ್ತುಗಳ ಬೆಲೆಯನ್ನು ಅನಗತ್ಯವಾಗಿ ಹೆಚ್ಚಳ ಮಾಡುವ ಪ್ರಯತ್ನಗಳು ಮಾಡಿದ್ದಲ್ಲಿ ಕಾನೂನು ಪ್ರಕಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಜಿಲ್ಲಾಧಿಕಾರಿಗಳಾದ ಡಾ.ಸುಶೀಲಾ ಬಿ. ಅವರು ತಿಳಿಸಿದ್ದಾರೆ.

ಸಾರ್ವಜನಿಕರು ಯಾರು ಅನಾವಶ್ಯಕವಾಗಿ ಸಾಮಾಜಿಕ ಮಾಧ್ಯಮದಲ್ಲಿ ಸುಳ್ಳುಸುದ್ದಿ ಹರಡಕೂಡದು. ಒಂದು ವೇಳೆ ಹರಡಿದಲ್ಲಿ ಅಂತಹವರ ವಿರುದ್ಧ ಕಾನೂನು ಪ್ರಕಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಪ್ರಸ್ತುತ ಇರುವ ಸಂದಿಗ್ಧ ಪರಿಸ್ಥಿತಿಯಲ್ಲಿ ಸಾರ್ವಜನಿಕರಾಗಲಿ, ಸಂಘ–ಸಂಸ್ಥೆಗಳಾಗಲಿ ಈ ಸಂದರ್ಭವನ್ನು ದುರುಪಯೋಗ ಮಾಡಿಕೊಂಡು ಅನಾವಶ್ಯಕವಾಗಿ ಸಾರ್ವಜನಿಕರಿಗೆ ಬೇಕಾಗುವ ವಸ್ತುಗಳ ಬೆಲೆ ಹೆಚ್ಚಿಸತಕ್ಕದಲ್ಲ. ನಾಗರಿಕರ ರಕ್ಷಣೆ–ಯ ಭಾಗವಾಗಿ ಸಾರ್ವಜನಿಕರು ದೊಡ್ಡ ಪ್ರಮಾಣದ ಸಮಾರಂಭ ಮಾಡುವುದಾಗಲಿ, ಸಾರ್ವಜನಿಕ ಸ್ಥಳಗಳಿಗೆ ಹೋಗುವುದನ್ನು ಮಾಡಬಾರದು. ಅಲ್ಲದೆ ಪ್ರಸ್ತುತ ಸಂದಿಗ್ಧ ಪರಿಸ್ಥಿತಿಯಲ್ಲಿ ಸಾರ್ವಜನಿಕರಿಗೆ ತೊಂದರೆಯಾದಲ್ಲಿ 24*7 ತುರ್ತು ಸಹಾಯವಾಣಿ ಸಂಖ್ಯೆ: 08473–253950ಗೆ ಸಂಪರ್ಕಿಸುವಂತೆ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಅವರು ಮಾತನಾಡಿ ಭಾರತದ ಗಡಿಗೆ ಮಾತ್ರ ಈ ಯುದ್ಧ ಸೀಮಿತವಾಗಿಲ್ಲ. ಕಾರಣ ಸುರಕ್ಷತೆಗಾಗಿ ಅವಶ್ಯಕ ಸಿದ್ಧತೆಯಲ್ಲಿ ಇರಬೇಕು. ಸಾರ್ವಜನಿಕರ ಹಿತದೃಷ್ಟಿಯಿಂದ,

ಹೆಚ್ಚಿನ ಜನ ಒಂದು ಕಡೆ ಸೇರುವುದು,ಧರಣಿ,ಸತ್ಯಾಗ್ರಹ,ಧಾರ್ಮಿಕ ಸಾಮೂಹಿಕ ಕಾರ್ಯಕ್ರಮಗಳನ್ನು ಮುನ್ನೆಚ್ಚರಿಕೆಯಾಗಿ ಅವಾಯ್ಡ್ ಮಾಡುವುದು ಸೂಕ್ತ. ಭಯೋತ್ಪಾದನಾ ಚಟುವಟಿಕೆಗಳ ಬಗ್ಗೆ ತೀವ್ರ ನಿಗಾ ಇಡಲಾಗಿದೆ. ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ಜನನಿಬಿಡ ಪ್ರದೇಶದಲ್ಲಿ ಇಲಾಖೆಯಿಂದ ಸೂಕ್ತ ತಪಾಸಣೆ ಹಾಗೂ ಸೂಕ್ತ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ನಾರಾಯಣಪುರ್ ಡ್ಯಾಂ ಗೆ ಹೆಚ್ಚಿನ ಭದ್ರತೆ ಒದಗಿಸಲಾಗಿದೆ. ತೀವ್ರ ನಿಗಾ ಇಡಲಾಗಿದೆ. ಮಾಕ್ ಡ್ರಿಲ್ ಸಹ ಶೀಘ್ರದಲ್ಲೇ ಮಾಡಲಾಗುವುದು ಎಂದ ಅವರು ಎಲ್ಲ ಅಧಿಕಾರಿಗಳ ಮಧ್ಯೆ ಸಮನ್ವಯತೆ ಇರಬೇಕು. ಸಾರ್ವಜನಿಕರು ಸಹ ಸಹಕರಿಸುವಂತೆ ಅವರು ಸಲಹೆ ನೀಡಿದರು.

ಕುಡಿಯುವ ನೀರಿನ ಸಮಸ್ಯೆಯಾಗದಂತೆ ಎಚ್ಚರಿಕೆ ವಹಿಸಿ ತೀವ್ರ ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅವಶ್ಯಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ, ಜಿಲ್ಲಾಧಿಕಾರಿ ಡಾ.ಸುಶೀಲ.ಬಿ ಅವರು ಸೂಚಿಸಿದರು.

ಪ್ರಕೃತಿ ವಿಕೋಪ ನಿರ್ವಹಣಾ ಸಮಿತಿ ಸಭೆ ನಡೆಸಿದ ಅವರು, ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ ಸಮಸ್ಯಾತ್ಮಕ ಗ್ರಾಮಗಳಿಗೆ ತಕ್ಷಣ ಶುದ್ಧ ನೀರು ಪೂರೈಕೆಗೆ ಕ್ರಮ ಕೈಗೊಳ್ಳಬೇಕು. ಸಣ್ಣಪುಟ್ಟ ದುರಸ್ತಿ ಕಾರ್ಯಗಳನ್ನು ಕೈಗೊಂಡು ನೀರು ಪೂರೈಸಬೇಕು. ಆಯಾ ತಾಲೂಕಿನ ತಹಸೀಲ್ದಾರರು, ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ತಾಲೂಕಾ

ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಪಿಡಿಓಗಳು, ಗ್ರಾಮ ಪಂಚಾಯತ್ ಸಿಬ್ಬಂದಿಗಳು, ನಿರ್ಲಕ್ಷ್ಯ ತೋರದೆ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು. ಕುಡಿಯುವ ನೀರಿನ ಕುರಿತು ದೂರು ಬಂದ ಕಡೆ ತಕ್ಷಣ ಸ್ಪಂದಿಸಲು ಸೂಚಿಸಿದರು. ಸದ್ಯ ಜಿಲ್ಲೆಯ 39 ನೀರಿನ ಸಮಸ್ಯಾತ್ಮಕ ಗ್ರಾಮಗಳಿಗೆ ಸಮರ್ಪಕ ನೀರು ಪೂರೈಕೆಗೆ ಸೂಚಿಸಿದರು.

ಅಶುದ್ಧ ನೀರು ಪರೀಕ್ಷಿಸಬೇಕು. ಸಿಡಿಲುದಿಂದ ಮಾನವ ಸಾವಾಗಿ ಹಾನಿಯಾಗದಂತೆ ನೋಡಿಕೊಳ್ಳಲು ಮುನ್ನೆಚ್ಚರಿಕೆಗಳ ಬಗ್ಗೆ ಸೂಕ್ತ ಅರಿವು ಮೂಡಿಸಬೇಕು. ಆರೋಗ್ಯ ಇಲಾಖೆ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ವಿದ್ಯುತ್ ಇಲಾಖೆ ಅಧಿಕಾರಿಗಳು ಅವಶ್ಯಕ ಸಂದರ್ಭದಲ್ಲಿ ತುರ್ತಾಗಿ ಸ್ಪಂದಿಸಲು ಅವರು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಸಹಾಯಕ ಆಯುಕ್ತ ಹಂಪಣ್ಣ ಸಜ್ಜನ್, ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿ ಪ್ರಭಾಕರ್ ಪ್ರೀಯದರ್ಶಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಯಂಪಾಡ, ಕಂದಕೂರ ಗ್ರಾಮಕ್ಕೆ ಸಿಇಓ ಭೇಟಿ ವಿವಿಧ

## ಕಾಮಗಾರಿಗಳು ಪರಿಶೀಲಿಸಿದ : ಸಿಇಓ ಲವೀಶ್ ಒರಡಿಯಾ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 14: ಗುರುಮಠಲ್ ಕುಡಿಯುವ ನೀರಿನ ಸಮಸ್ಯೆ ಆಗದಂತೆ ನೋಡಿಕೊಳ್ಳಿ ಎಂದು ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಯಪಾಡ ಗ್ರಾಮ ಪಂಚಾಯಿತಿಯ ಸಭಾಂಗಣದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸರ್ವ ಸದಸ್ಯರ ಸಭೆಯಲ್ಲಿ ಕುಡಿಯುವ ನೀರಿನ ಸಮಸ್ಯೆ, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ, ಕಾಮಗಾರಿಗಳು, ಸ್ವಚ್ಛ ಭಾರತ್ ಮಿಷನ್, ಕರ ವಸೂಲಿ ಸೇರಿದಂತೆ ಇನ್ನಿತರ ವಿಷಯಗಳು ಕುರಿತು ಚರ್ಚಿಸಿದರು ಅವರು ಮಾತನಾಡಿದರು.

ನಂತರ ಕೂಸಿನ ಮನೆ, ಗ್ರಂಥಾಲಯಕ್ಕೆ ಭೇಟಿ ನೀಡಿ ಮೂಲಸೌಕರ್ಯಗಳ ಕುರಿತು ವೀಕ್ಷಿಸಿದರು. ನಂತರ ಯಂಪಾಡ ಮತ್ತು ಸುಭಾಷ್ ನಗರದಲ್ಲಿ ನಡೆಯುತ್ತಿರುವ ಹಳ್ಳ ಹುಳೆತ್ತುವ ಕಾಮಗಾರಿ ವೀಕ್ಷಿಸಿ ಕೂಲಿಕಾರ ಸಮಸ್ಯೆಗಳು ಆಲಿಸಿದರು. ಕಂದಕೂರ ಗ್ರಾಮ ಪಂಚಾಯತಿಗೆ ತೆರಳಿ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಸ್ವಚ್ಛತೆ, ಮೂಲಸೌಕರ್ಯಗಳು ಸೇರಿದಂತೆ ಇನ್ನಿತರ ಸೌಲಭ್ಯಗಳ ಕುರಿತು ಪರಿಶೀಲಿಸಿದರು. ವೈದ್ಯಾಧಿಕಾರಿಗಳಿಗೆ ಮತ್ತು ಶುಶ್ರೂಕರಿಗೆ ಸಾರ್ವಜನಿಕರಿಗೆ ನೀಡುತ್ತಿರುವ ಚಿಕಿತ್ಸೆ ಬಗ್ಗೆ ಮತ್ತು ಅಂಬುಲೆನ್ಸ್ ಸೇವೆ ಬಗ್ಗೆ ವಿಚಾರಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕರಾದ ಶ್ರೀ ಸಿ.ಬಿ.ದೇವರಮನಿ, ಗುರುಮಠಕಲ್ ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಅಂಬ್ರೇಶ್ ಪಾಟೀಲ್, ತಾಲೂಕು ಸಹಾಯಕ ನಿರ್ದೇಶಕ ರಾಮಚಂದ್ರ ಬಸೂದೆ, ತಾಂತ್ರಿಕ ಸಂಯೋಜಕ ಮುಜಾಮಿಲ್, ತಾಂತ್ರಿಕ ಸಹಾಯಕರು, ಬಿಎಫ್ಟಿಗಳು, ಜಿಕೆಎಮ್ ಮತ್ತು ಕಾಯಕ ಬಂಧುಗಳು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

## ಕುಕನೂರು : ಐಟಿಐ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರು ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಿಂದ 2025–26 ನೇ ಸಾಲಿಗೆ ಮೆರಿಟ್ ಕಂ ರಿಸರ್ವೇಷನ್ ಆಧಾರಿತ ವಿವಿಧ ತಾಂತ್ರಿಕ, ತಾಂತ್ರಿಕೇತರ ಐ.ಟಿ.ಐ. ಪ್ರವೇಶಕ್ಕೆ ಅನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

14 ವರ್ಷ ಮೇಲ್ಪಟ್ಟ ಎಸ್.ಎಸ್.ಎಲ್‌ಯಲ್ಲಿ ಅನುತ್ತೀರ್ಣ ಹಾಗೂ 8ನೇ ತರಗತಿ ಉತ್ತೀರ್ಣರಾದ ಆಸಕ್ತ ಅಭ್ಯರ್ಥಿಗಳು ವಿವಿಧ ವೃತ್ತಿಗಳಾದ ಎಲೆಕ್ಟ್ರೀಷಿಯನ, ಎಲೆಕ್ಟ್ರೊನಿಕ್ ಮೆಕ್ಯಾನಿಕ್, ಫಿಟ–ರ್, ಮೆಕ್ಯಾನಿಸ್ಟ, ಮೆಕಾನಿಕ್ (ಮೋಟಾರ ವೆಹಿಕಲ್), ಟರ್ನರ್, ಕಂಪ್ಯೂಟರ್ ಓಪರೆಟರ್ ಆಂಡ ಪ್ರೋಗ್ರಾಮಿಂಗ್, ಶಿಟ್ ಮೆಟಲ್, ವೆಲ್ಡರ್, ಸಿ.ಎನ್.ಸಿ. ಮಷನಿಂಗ್ ಟೆಕ್ನಿಷಿಯನ್, ಮೆಕ್ಯಾನಿಕ್ ಎಲೆಕ್ಟ್ರೀಕಲ್ ವೆಹಿಕಲ್, ಇಂಡಸ್ಟ್ರೀಯಲ್ ರೋಬೊಟಿಕ್ಸ್ ಮತ್ತು ಡಿಜಿಟಲ್ ಮ್ಯಾನುಫೆಕ್ಚರಿಂಗ್ ಟೆಕ್ನೆಷಿಯನ್, ವರ್ಚುವಲ್ ಅನಲೈಸಸ್ ಮತು ಡಿಸೈನರ್, ಮ್ಯಾನುಫೆಕ್ಚರಿಂಗ್ ಪ್ರೊಸಸ್ ಕಂಟ್ರೋಲ್ ಮತ್ತು ಆಟೋಮೆಷನ್, ಇಂಜನಿಯರಿಂಗ ಡಿಸೈನ್ ಟೆಕ್ನಿಷನ್ ಸೀಟುಗಳು ಲಭ್ಯವಿದ್ದು, ಮೇ 28 ಕೊನೆ ದಿನವಾಗಿದ್ದು, ಆಸಕ್ತರು ತಿತಿತಿ. ಛಿಣಜ.ಏಚಿಡಿಟಿಚಿಣಚಿಞಚಿ.ರಂಶ.ಟಿ ವೆಬ್ಸೈಟ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಮತ್ತು ಅಭ್ಯರ್ಥಿಗಳು ಮೇ 29 ರ ಒಳಗಾಗಿ ಸಮೀಪದ ಸರಕಾರಿ ತರಬೇತಿ ಸಂಸ್ಥೆಯಲ್ಲಿ ದಾಖಲಾತಿ ಪರಿಶೀಲನಾ ಶುಲ್ಕ 50 ರೂ. ಪಾವತಿಸಿ ಮೂಲ ದಾಖಲಾತಿ ಹಾಗೂ ಅಟೆಸ್ಟೆಡ್ ಜೆರಾಕ್ಸ ಹಾಜರಪಡಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಮೊ.ಸಂ. 9481718859, 9164198246, 9945789400, 9964247098ಗೆ ಕುಕನೂರ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ತರಬೇತಿ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

'ಬುದ್ಧ–ಬಸವ–ಅಂಬೇಡ್ಕರ್' ವಿಚಾರೋತ್ಸವ ಕಾರ್ಯಕ್ರಮದಲ್ಲಿ ಡಾ.ಅಪ್ಪಗೆರೆ ಸೋಮಶೇಖರ್ ಅಭಿಮತ

## ಬಹುತ್ವ ಸಂಸ್ಕೃತಿಯು ಭಾರತದ ಬೆನ್ನೆಲುಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 14–ಜಾತ್ಯತೀತ ಹಾಗೂ ಬಹುತ್ವ ಸಂಸ್ಕೃತಿಯು ಭಾರತದ ಬೆನ್ನೆಲುಬಾಗಿದ್ದು, ಬುದ್ಧ–ಬಸವ ಅವರ ತತ್ವಾದರ್ಶ ಹಾಗೂ ಅಂಬೇಡ್ಕರ್ ಅವರು ನೀಡಿರುವ ಸಂವಿಧಾನದಡಿ ನಾವೆಲ್ಲರೂ ಒಗ್ಗಟ್ಟಾಗಿದ್ದೇವೆ ಎಂದು ಕಲಬುರಗಿ ಕೇಂದ್ರೀಯ ವಿಶ್ವವಿದ್ಯಾಲಯದ ಕನ್ನಡ ಪ್ರಾಧ್ಯಾಪಕರಾದ ಡಾ.ಅಪ್ಪಗೆರೆ ಸೋಮಶೇಖರ್ ಹೇಳಿದರು.

ವಿಶ್ವವಿದ್ಯಾಲಯದ ಬಯಲು ರಂಗಮಂದಿರದಲ್ಲಿ ಬುಧವಾರ ಆಯೋಜಿಸಿದ್ದ "ಬುದ್ಧ,ಬಸವ, ಅಂಬೇಡ್ಕರ್ ವಿಚಾರೋತ್ಸವ" ಕಾರ್ಯಕ್ರಮವನ್ನು ಅವರುಗಳ ಭಾವಚಿತ್ರಕ್ಕೆ ಗಣ್ಯರೊಂದಿಗೆ ಪುಷ್ಪಾರ್ಚನೆ ನೆರವೇರಿಸಿ ಅವರು ಮಾತನಾಡಿದರು.

ಬುದ್ಧ,ಬಸವ,ಅಂಬೇಡ್ಕರ್‌ರವರ ತತ್ವಗಳಿಂದ ಭಾರತದ ಸಂವಿಧಾನ ರಚಿತವಾಗಿದೆ. ಸಂವಿಧಾನವು ದೇಶದಲ್ಲಿರುವ ಎಲ್ಲ ವರ್ಗದವರಿಗೆ ಅನ್ವಯಿಸುತ್ತದೆ. ವ್ಯಕ್ತಿ ಮತ್ತು ಸಮುದಾಯ ಪ್ರಗತಿ ಹೊಂದಲು ನಮ್ಮಲ್ಲಿರುವ ಕೀಳರಿಮೆ ಮನಸ್ಥಿತಿಯಿಂದ ಹೊರಬರಬೇಕು. ಈ ಮೂರು ಮಹಾನ್ ವ್ಯಕ್ತಿಗಳ ಆಶಯಗಳು ಭಾರತದ ಸಂವಿಧಾನದ ರೂಪದಲ್ಲಿ ಮೂಡಿ ಬಂದಿವೆ ಎಂದು ಪ್ರತಿಬಿಂಬಿಸಿದರು.

ಬೌದ್ಧ ಸಾಹಿತಿಗಳಾದ ಆಯುಷ್ಮಾನ್ ಬುದ್ಧಘೋಷ್ ದೇವೇಂದ್ರ ಹೆಗ್ಗಡೆ ಅವರು ಮಾತನಾಡಿ, ಬುದ್ಧ ಕಾಲಾತೀತ ಪುರುಷ. ಎಲ್ಲ ಕಾಲಕ್ಕೂ ಸಾಗುವ ಬುದ್ಧನ ವಿಚಾರಗಳು ಅಂದಿನಿಂದ ಇಲ್ಲಿಯವರೆಗೂ ಪ್ರಸ್ತುತವಾಗಿವೆ. ಬುದ್ಧನ ಪಂಚಶೀಲವು ಎಲ್ಲ ಜಾತಿ, ಧರ್ಮ, ಜನಾಂಗಕ್ಕೆ ಬೆಳಕನ್ನು ನೀಡುವುದಾಗಿದೆ. ಪ್ರತಿಯೊಂದು ಸಮಸ್ಯೆಗೂ ಬುದ್ಧನಲ್ಲಿ ಪರಿಹಾರವಿದೆ. ಇಂದಿನ ಯುವ ಪೀಳಿಗೆಗೆ ಬುದ್ಧನ ಪರಿಚಯ ಇಲ್ಲದಂತಾಗಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ಸಾಹಿತಿ ಹಾಗೂ ವಿವಿಯ ಸಿಂಡಿಕೇಟ್ ಸದಸ್ಯರಾದ ಪ್ರೊ. ಅಮರೇಶ್ ನುಗಡೋಣಿ ಅವರು ಮಾತನಾಡಿ, ಬುದ್ಧ, ಬಸವ, ಅಂಬೇಡ್ಕರ್ ಚಿಂತನೆಗಳು ಮನುಷ್ಯ ಜೀವನಕ್ಕೆ ಅವಶ್ಯವಾದ ವಿಚಾರಗಳಾಗಿವೆ. ಬಸವಣ್ಣನ ಚಿಂತನೆಗಳನ್ನು ನಾವೆಲ್ಲರೂ ಅಳವಡಿಸಿಕೊಳ್ಳಬೇಕಾಗಿದೆ. ಕತ್ತಲೆಯಿಂದ ಬೆಳಕಿನಡೆಗೆ ಸಾಗಲು ಇವರ ವಿಚಾರಗಳು ಪ್ರೇರಣೆಯಾಗಿವೆ. ಬಸವಣ್ಣನವರ ವಚನಗಳು ಮತ್ತು ಅವರಲ್ಲಿದ್ದ ಜ್ಞಾನದ ಅರಿವು ಹೊಸತನದೆಡೆಗೆ ಸಾಗುವುದಾಗಿದೆ ಎಂದರು.

ವಿವಿಯ ಕುಲಪತಿಗಳಾದ ಪ್ರೊ.ಎಂ ಮುನಿರಾಜು ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಅನ್ಯಾಯಕ್ಕೆ ಒಳಗಾದ ಪ್ರತಿಯೊಂದು ಜಾತಿಗೆ ನ್ಯಾಯ ದೊರಕಿಸಿದವರು ಅಂಬೇಡ್ಕರ್ ಅವರು. ಬುದ್ಧ, ಬಸವ ಅಂಬೇಡ್ಕರ್‌ರವರ ವೈಚಾರಿಕತೆಗಳನ್ನು ವಿದ್ಯಾರ್ಥಿಗಳಲ್ಲಿ ಮೂಡಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ. ಅವರ ಚಿಂತನೆಗಳನ್ನು ವಿದ್ಯಾರ್ಥಿಗಳು ಅಳವಡಿಸಿಕೊಂಡು ಕುಟುಂಬ, ಸಮಾಜ, ದೇಶಕ್ಕೆ ತಮ್ಮದೇ ಆದ ಕೊಡುಗೆ ನೀಡಬೇಕೆಂದು ಕರೆ ನೀಡಿದರು.

ವಿವಿಯಲ್ಲಿ ಬುದ್ಧ, ಬಸವ ಹಾಗೂ ಅಂಬೇಡ್ಕರ್ ಭಾಷಣ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ನಗದು ಬಹುಮಾನ ಮತ್ತು ಪ್ರಮಾಣ ಪತ್ರಗಳನ್ನು ವಿತರಿಸಲಾಗಿತ್ತು ಎಂದರು.

ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ಎನ್.ಡಿ.ವೆಂಕಮ್ಮ ಅವರು ಬುದ್ಧ ವಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ವಿವಿಯ ಕುಲಸಚಿವರಾದ ಎಸ್.ಎನ್. ರುದ್ರೇಶ್, ಮೌಲ್ಯಮಾಪನ ಕುಲಸಚಿವರಾದ ಪ್ರೊ.ಎನ್.ಎಂ ಸಾಲಿ, ಕಾರ್ಯಕ್ರಮದ ಸಂಚಾಲಕರಾದ ಪ್ರೊ.ಎನ್.ಶಾಂತನಾಯ್ಕ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಕಾರ್ಯಕ್ರಮ ಪ್ರಾರಂಭಕ್ಕೂ ಮೊದಲು ವಿವಿಯ ಕುಲಸಚಿವರಾದ ಎಸ್ ಎನ್ ರುದ್ರೇಶ್ ಇವರ ನೇತೃತ್ವದಲ್ಲಿ ಬುದ್ಧ,ಬಸವ,ಅಂಬೇಡ್ಕರ್‌ರವರ ಭಾವಚಿತ್ರವನ್ನೊಳಗೊಂಡ ತೆರೆದ ವಾಹನ ಹಾಗೂ ಅವರುಗಳ ವೇಷಭೂಷಣ ಧರಿಸಿದ್ದ ವಿದ್ಯಾರ್ಥಿಗಳನ್ನು ಒಳಗೊಂಡ ಭವ್ಯ ಮೆರವಣಿಗೆಯು ವಿಶ್ವವಿದ್ಯಾಲಯದ ಆವರಣದಲ್ಲಿ ನಡೆಯಿತು.

ಕಾರ್ಯಕ್ರಮವನ್ನು ಡಾ.ಸುಷ್ಮಾ ಜೋಗನ್ ಹಾಗೂ ಡಾ.ಶ್ರೀದೇವಿ ಆಲೂರು ನಿರೂಪಿಸಿದರು. ಪ್ರದರ್ಶನ ಕಲೆ ಹಾಗೂ ನಾಟಕ ವಿಭಾಗದ ವತಿಯಿಂದ ಕ್ರಾಂತಿ ಗೀತೆಗಳನ್ನು ಪ್ರಸ್ತುತಪಡಿಸಲಾಯಿತು.

ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು. ಬಳಿಕ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮ ನಡೆದವು.

## ಮೈ ಭಾರತ ಯುವ ಜನರನ್ನು ನಾಗರಿಕ ರಕ್ಷಣಾ ಸ್ವಯಂ ಸೇವಕರಾಗಿ ನೋಂದಾಯಿಸಿಕೊಳ್ಳಲು ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.14–ಯುವ ಮತ್ತು ಕ್ರೀಡಾ ಸಚಿವಾಲಯದ ಮೈ ಭಾರತ ಕಾರ್ಯಕ್ರಮವು ದೇಶದಾದ್ಯಂತ ಯುವಕರನ್ನು ಮೈ ಭಾರತ ನಾಗರಿಕ ರಕ್ಷಣಾ ಸ್ವಯಂಸೇವಕರಾಗಿ ನೊಂದಾಯಿಸಿಕೊಳ್ಳಲು ಸಕ್ರಿಯವಾಗಿ ಪ್ರೇರೇಪಿಸುತ್ತಿದೆ. ಮೈ ಭಾರತ ಯುವ ಜನರನ್ನು ನಾಗರಿಕ ರಕ್ಷಣಾ ಸ್ವಯಂ ಸೇವಕರಾಗಿ ನೋಂದಾಯಿಸಿಕೊಳ್ಳಲು ಆಹ್ವಾನಿಸಲಾಗಿದೆ ಎಂದು ಕಲಬುರಗಿ ನೆಹರು ಯುವ ಕೇಂದ್ರದ ಜಿಲ್ಲಾ ಯುವ ಅಧಿಕಾರಿಗಳು ತಿಳಿಸಿದ್ದಾರೆ.

ಈ ದೇಶವ್ಯಾಪಿ ಆಹ್ವಾನವು ತುರ್ತು ಪರಿಸ್ಥಿಗಳು ಮತ್ತು ಬಿಕ್ಕಟ್ಟಿನ ಸಮಯದಲ್ಲಿ ರಾಷ್ಟ್ರೀಯ ಕಾರಣಕ್ಕಾಗಿ ಮಹತ್ವಪೂರ್ಣ ಪಾತ್ರವಹಿಸಲು ಯುವನಾಗರಿಕರನ್ನು ಸಶಕ್ತಗೊಳಿಸುವ ಉದ್ದೇಶವನ್ನು ಹೊಂದಿದೆ. ಈ ಯೋಜನೆಯು ಉತ್ತಮ ತರಬೇತಿ ಪಡೆದ, ಸ್ಪಂದಿಸುವ ಆತ್ಮಸ್ಥೆರ್ಯದಿಂದಿರುವ ಸ್ವಯಂಸೇವಕರದಳವನ್ನು ನಿರ್ಮಿಸುವ ಉದ್ದೇಶ ಹೊಂದಿದ್ದು, ನೈಸರ್ಗಿಕ ವಿಪತ್ತುಗಳು, ಅಪಘಾತಗಳು, ಸಾರ್ವಜನಿಕ ತುರ್ತು ಪರಿಸ್ಥಿತಿಗಳು ಮತ್ತು ಇತರ ಅನಿರೀಕ್ಷಿತ ಸಂದರ್ಭಗಳಲ್ಲಿ ನಾಗರಿಕ ಆಡಳಿತವನ್ನು ಪೂರಕವಾಗಿದೆ.

ಪ್ರಸ್ತುತ ಪರಿಸ್ಥಿತಿ ಮತ್ತು ಉದಯೋನ್ಮುಖ ಸುರಕ್ಷತಾ ಚಿಂತನೆಗಳನ್ನು ಮನಗಂಡು, ಸಮುದಾಯ ಆಧಾರಿತ ಪ್ರತಿಕ್ರಿಯಾ ವ್ಯವಸ್ಥೆಯನ್ನು ಸ್ಥಾಪಿಸುವ ಅಗತ್ಯತೆಯು ಹೆಚ್ಚಾಗಿದೆ. ನಾಗರಿಕ ರಕ್ಷಣಾ ಸ್ವಯಂ ಸೇವಕರು ಈ ಕ್ಷೇತ್ರದಲ್ಲಿ ಮಹತ್ವದ ಪಾತ್ರವಹಿಸುತ್ತಿದ್ದು, ಸ್ಥಳೀಯ ಅಧಿಕಾರಿಗಳಿಗೆ ವಿವಿಧ ಸೇವೆಗಳ ಮೂಲಕ ಬೆಂಬಲ ನೀಡುತ್ತಾರೆ. ಇದರಲ್ಲಿ ರಕ್ಷಣೆ ಮತ್ತು ಸ್ಥಳಾಂತರ ಕಾರ್ಯಚರಣೆಗಳು, ಪ್ರಾಥಮಿಕ ಚಿಕಿತ್ಸೆ ಮತ್ತು ತುರ್ತು ಆರೈಕೆ, ಸಂಚಾರ ನಿರ್ವಹಣೆ, ಜನಸಮೂಹ ನಿಯಂತ್ರಣ, ಸಾರ್ವಜನಿಕ ಭದ್ರತೆ ಮತ್ತು ವಿಪತ್ತು ಪ್ರತಿಕ್ರಿಯೆ ಮತ್ತು ಪುನ:ಶ್ಚೇತನ ಕಾರ್ಯಗಳಲ್ಲಿ ಸಹಾಯ ಮಾಡುವುದು ಒಳಗೊಂಡಿದೆ. ಸಿದ್ದತೆಯುಳ್ಳ ಮತ್ತು ತರಬೇತಿಯಾದ ನಾಗರಿಕ ಪಡೆ ಇದ್ದು, ಮೈ ಭಾರತ ತನ್ನದಾದ ಕೊಡುಗೆ ನೀಡಲು ಬದ್ಧವಾಗಿದೆ. ಮೈ ಭಾರತ ತನ್ನ ಚುರುಕಾದ ಯುವ ಸ್ವಯಂ ಸೇವಕರ ಜಾಲದೊಂದಿಗೆ ಜೊತೆಗೆ ಎಲ್ಲ ಉತ್ಸಾಹಭರಿತ ಯುವ ನಾಗರಿಕರನ್ನು ಈ ಮಹತ್ವದ ಕಾರ್ಯಕ್ಕಾಗಿ ಮುಂದೆ ಬಂದು ಮೈ ಭಾರತ ನಾಗರಿಕ ರಕ್ಷಣಾ ಸ್ವಯಂ ಸೇವಕರಾಗಿ ನೋಂದಾಯಿಸಿಕೊಳ್ಳಲು ಕರೆ ನೀಡುತ್ತದೆ.

ಈಗಿನ ಮೈ ಭಾರತ ಸ್ವಯಂ ಸೇವಕರು ಮತ್ತು ಜವಾಬ್ದಾರಿ ಮತ್ತು ಶಿಸ್ತನ್ನು ಬೆಳೆಸುವುದರ ಜೊತೆಗೆ ತುರ್ತು ಸಂದರ್ಭಗಳಲ್ಲಿ ತಕ್ಷಣ ಪ್ರತಿಕ್ರಿಯೆ ನೀಡಲು ಅಗತ್ಯವಿರುವ ಜೀವ ಉಳಿಸುವ ಕೌಶಲ್ಯಗಳನ್ನು ಕಲಿಯುವ ಅವಕಾಶವನ್ನು ನೀಡುತ್ತದೆ. ನೋಂದಣಿ ಪ್ರಕ್ರಿಯೆ ಸುಲಭವಾಗಿದ್ದು, ಅಧಿಕೃತ ಮೈ ಭಾರತ ಪೋರ್ಟಲ್‌ದಲ್ಲಿ ῃಣಣಠಿ://ಟಥಿಬ್ಬುಚಿಡಿಚಿಣ. ರಂಶ.ಟಿ ನೋಂದಣಿ ಮಾಡಿಕೊಳ್ಳಬೇಕು. ಮತ್ತಿತರ ಹೆಚ್ಚಿನ ಮಾಹಿತಿಗಾಗಿ 08472–248528 ಅಥವಾ 8105534419 ಗೆ ಸಂಪರ್ಕಿಸಬೇಕೆಂದು ಅವರು ತಿಳಿಸಿದ್ದಾರೆ.

## ನಡುವಲಕೊಪ್ಪ–ನರೇಗಾ ಕಾಮಗಾರಿ ಸ್ಥಳದಲ್ಲಿ ಶೈಕ್ಷಣಿಕ ಜಾಗೃತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಷ್ಟಗಿ ತಾಲೂಕಿನ ಕೇಸೂರು ಗ್ರಾಮ ಪಂಚಾಯತಿ ವ್ಯಾಪ್ತಿಗೆ ಬರುವ ನಡುವಲಕೊಪ್ಪದಲ್ಲಿ ನರೇಗಾ ಕಾಮಗಾರಿ ನಡೆಯುತ್ತಿದ್ದ ಸ್ಥಳದಲ್ಲಿ ಕುಷ್ಟಗಿಯ ಜನಜಾಗೃತಿ ಕಲಾರಂಗ ಸಂಸ್ಥೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ 2023–24ನೇ ಸಾಲಿನ ಸಂಘ–ಸಂಸ್ಥೆಗಳ ಧನಸಹಾಯ ಯೋಜನೆಯ ಅಡಿಯಲ್ಲಿ ವೈವಿಧ್ಯಮಯ ಸಾಂಸ್ಕೃತಿಕ ಅರಿವು ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮವನ್ನು ಕಾಯಕಬಂಧು ಬಾಬುನಾಯಕ ಮೇಟಿ ಅವರು ತಮಟೆ ಬಾರಿಸುವ ಮೂಲಕ ಚಾಲನೆ ನೀಡಿದರು. ನಂತರ ಮಾತನಾಡುತ್ತಾ ಅವರು "ನಾವು ದಿನ ನಿತ್ಯದ ಬದುಕಿನಲ್ಲಿ ಸರಕಾರದ ಯೋಜನೆಗಳ ಕುರಿತು ಮಾಹಿತಿ ಇಲ್ಲದೇ ಪರದಾಡುತ್ತೇವೆ. ಇಂತಹ ಸಂಸ್ಥೆಗಳು ಕಲಾತಂಡದ ಮೂಲಕ ಜಾಗೃತಿ ಮೂಡಿಸುವ ಕಾರ್ಯ ಶ್ಲಾಘನೀಯವಾಗಿದೆ. ಪ್ರತಿಯೊಬ್ಬರೂ ಅರ್ಥ ಮಾಡಿಕೊಂಡು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು" ಎಂದರು.

ಸಂಸ್ಥೆಯ ಅಧ್ಯಕ್ಷ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ



ಶರಣಪ್ಪ ವಡಿಗೇರಿ ಅವರು ನಮ್ಮ ಮೂಲ ಜನಪದ, ಆರೋಗ್ಯ, ಶಿಕ್ಷಣ ಮತ್ತು ರಾಷ್ಟ್ರೀಯ ಯೋಜನೆಗಳ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ನಂತರ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ವೀರಯ್ಯ ಹಿರೇಮಠ ಅವರಿಂದ ಜಾಗೃತಿ ಗೀತೆ, ಬನ್ನಿಗೋಳ ಶರಣಪ್ಪ ಅವರಿಂದ ಬಯಲಾಟದ ಪದ, ದೇವೇಂದ್ರಪ್ಪ ಕಮ್ಮಾರ ಅವರಿಂದ ವಚನ ಗಾಯನ ಕಾರ್ಯಕ್ರಮ ನಡೆಯಿತು. ಶಿವಲಿಂಗಪ್ಪ ಪೂಜಾರ ಸಂಗಡಿಗರಿಂದ 'ಕೂಲಿಯ ಬಿಡಿಸಿ ಶಾಲೆಗೆ ಕಳಿಸಿ' ಶೈಕ್ಷಣಿಕ ಜಾಗೃತಿ ಮೂಡಿಸುವ ಬೀದಿನಾಟಕ ಪ್ರದರ್ಶನ ನಡೆಯಿತು.

ಕಾರ್ಯಕ್ರಮದಲ್ಲಿ ನರಸಪ್ಪ ನಾಯಕ, ದೊಡ್ಡಮ್ಮ ನಾಯಕ, ಮೌನೇಶ ನಾಯಕ, ರಾಚಪ್ಪ ಬಡಿಗೇರ, ಹನಮಪ್ಪ ನಾಯಕ, ರೂಪಲೆಪ್ಪ ನಾಯಕ ಸೇರಿದಂತೆ ನರೇಗ ಕಾರ್ಮಿಕರು ಉಪಸ್ಥಿತರಿದ್ದರು. ಕೊನೆಯಲಿ ಕೇಸೂರು ಗ್ರಾಮ ಪಂಚಾಯತಿ ಸಿಬ್ಬಂದಿ ಮಾಸಪ್ಪ ಅವರು ವಂದನಾರ್ಪಣೆ ಸಲ್ಲಿಸಿದರು.

## ಮೇ 15 ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಕಲಬುರಗಿ,ಮೇ.14–ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ವಿಭಾಗ–1ರ ವಿದ್ಯುತ್ ವಿತರಣಾ ಕೇಂದ್ರದಲ್ಲಿ 33/11ಕೆವ್ಹಿ ಜಂಬಗಾ ಉಪ–ಕೇಂದ್ರದ ಬ್ಯಾಂಕ್–1 ಮತ್ತು ಎಫ್–5 ಸುಲ್ತಾನಪೂರ ಐಪಿ ಫೀಡರ್‌ಗಳ ರೆಟ್ರೊಫಿಟಿಂಗ್ ಹಾಗೂ ಉಪ–ಕೇಂದ್ರದಲ್ಲಿ ನಿರ್ವಹಣಾ ಕಾರ್ಯಕೈಗೊಂಡಿರುವ ಹಿನ್ನೆಲೆಯಲ್ಲಿ ಇದೇ ಮೇ 15ರಂದು ಬೆಳಿಗ್ಗೆ 9 ರಿಂದ ಮಧ್ಯಾಹ್ನ 1ಗಂಟೆಯವರೆಗೆ ಸದರಿ ಫೀಡರ್‌ಗಳ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಇದಕ್ಕೆ ಸಹಕರಿಸಬೇಕೆಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ವಿಭಾಗ–1ರ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

ಹಾಡಿ, ಹಟ್ಟಿ, ತಾಂಡಾ ನಿವಾಸಿಗಳಿಗೆ ಶಾಶ್ವತ ನೆಮ್ಮದಿ ನೀಡಲು ಸರ್ಕಾರ ಬದ್ಧ

## ಕಂದಾಯ ಗ್ರಾಮ ರಚನೆ ಪ್ರಕ್ರಿಯೆ ಪೂರ್ಣಗೊಳಿಸಲು ಜೂನ್ 30ರ ಗಡುವು: ಕಂದಾಯ ಸಚಿವ ಕೃಷ್ಣ ಬೈರೇಗೌಡ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ14–ಜಿಲ್ಲೆಯಲ್ಲಿಹಟ್ಟಿ, ತಾಂಡಾ ನಿವಾಸಿಗಳಿಗೆ ಶಾಶ್ವತ ನೆಮ್ಮದಿ ನೀಡುವ ಸಲುವಾಗಿ ತಾಂಡಾಗಳಿಗೆಕಂದಾಯಗ್ರಾಮದ ಸ್ಥಾನಮಾನ ನೀಡಲು ನಮ್ಮ ಸರ್ಕಾರ ನಿರ್ಧರಿಸಲಾಗಿದ್ದು, ಮುಂಬರುವ ಜೂನ್ 30 ರೊಳಗಾಗಿ ಜಿಲ್ಲೆಯಲ್ಲಿ ಬಾಕಿ ಇರುವ ಕಂದಾಯ ಗ್ರಾಮಗಳ ರಚನೆಗೆಅರ್ಹವಿರುವಗ್ರಾಮಗಳಿಗೆ ಸಂಬಂಧಿಸಿದಂತೆ ಅಂತಿಮ ಅಧಿಸೂಚನೆ ಹೊರಡಿಸಬೇಕು ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು ಹೇಳಿದರು.

ನಗರದಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ ಜಿಲ್ಲೆಯ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಾಡಿ, ಹಟ್ಟಿ, ತಾಂಡಾಗಳು ಸೇರಿದಂತೆ ಜನ ವಸತಿ ಪ್ರದೇಶಗಳು ಕಂದಾಯ ಗ್ರಾಮಗಳಾಗಿ ಅಂಗೀಕರಿಸದ ಕಾರಣ ಅಲ್ಲಿನ ನಿವಾಸಿಗಳು ಅನೇಕ ಸರ್ಕಾರಿ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ. ಹಟ್ಟಿ, ತಾಂಡಾ ನಿವಾಸಿಗಳ ಮನೆಗಳಿಗೆ ಕಾನೂನಿನ ಆಸರೆ ನೀಡಬೇಕು. ಕಳೆದ ಹಲವಾರು ವರ್ಷಗಳಿಂದ ನೆನೆಗುದಿಗೆ ಬಿದ್ದಿರುವ ಹಟ್ಟಿ, ಹಾಡಿ,ತಾಂಡಾಗಳನ್ನುಕಂದಾಯ ಗ್ರಾಮಗಳನ್ನಾಗಿ ಮಾಡುವ ಕಾರ್ಯ ತ್ವರಿತಗತಿಯಲ್ಲಿ ನಡೆಯಬೇಕು ಎಂದು ಸಚಿವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಇದಕ್ಕೆ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾಅವರುಪ್ರತಿಕ್ರಿಯಿಸಿ, ಕಂದಾಯ ಗ್ರಾಮಗಳ ರಚನೆಗೆ ಜಿಲ್ಲೆಯಲ್ಲಿ ಒಟ್ಟು 74 ಗ್ರಾಮಗಳ ಗುರುತಿಸಲಾಗಿದ್ದು, ಈಗಾಗಲೇ 71 ಪ್ರಾಥಮಿಕ ಸೂಚನೆ ಹಾಗೂ ಸರ್ಕಾರದಿಂದ 51 ಗ್ರಾಮಗಳು ಅಂತಿಮಅಧಿಸೂಚನೆಹೊರಡಿಸಿದ್ದು, 1ಗ್ರಾಮವು ಅಂತಿಮ ಅಧಿಸೂಚನೆಗೆ ಸಲ್ಲಿಕೆಯಾಗಿದೆ. ಇನ್ನೂ 19 ಗ್ರಾಮಗಳು ಅಂತಿಮ ಅಧಿಸೂಚನೆಗೆ ಬಾಕಿ ಇರುವ ಗ್ರಾಮಗಳಾಗಿವೆ ಎಂದು ಮಾಹಿತಿ ನೀಡಿದರು.

ಕಂದಾಯ ಗ್ರಾಮಗಳ ರಚನೆ ಕುರಿತಂತೆ ಜೂನ್ 30ರ ಗಡುವನ್ನು ನಿಗದಿಪಡಿಸಲಾಗಿದ್ದು, ಹೊಸ ಕಂದಾಯ ಘಟಕಗಳ ರಚನೆಗೆ ನಿಷೇಧ ಅನ್ವಯ ಆಗಲಿದೆ. ಈ ನಿಷೇಧ ತೆರವಾಗಲು ಎರಡು ವರ್ಷ ಆಗಬಹುದು. ಹೀಗಾಗಿ ಬಾಕಿ ಇರುವ ಎಲ್ಲ ಕಂದಾಯ ಗ್ರಾಮಗಳ ರಚನೆ ಕಾರ್ಯ ಜೂ. 30ರ ಒಳಗಾಗಿ ಪೂರ್ಣಗೊಳ್ಳಬೇಕು ಎಂದು ತಾಕೀತು ಮಾಡಿದರು.

ಗ್ರಾಮ ಪಂಚಾಯಿತಿಯಲ್ಲಿ ವಸತಿ ಪ್ರದೇಶಗಳ ಪಟ್ಟಿ ಇದೆ. ಕಂದಾಯ ಗ್ರಾಮಗಳ ಸಂಖ್ಯೆಗಿಂತ ವಸತಿ ಪ್ರದೇಶಗಳ ಸಂಖ್ಯೆ ಹೆಚ್ಚಿದೆ. ಇಲ್ಲಿ ದಾಖಲೆ ರಹಿತ ವಸತಿ ಪ್ರದೇಶಗಳ ನಮೂದಾಗಿರುತ್ತವೆ. ಕಂದಾಯ ಇಲಾಖೆಯ ಬಳಿ ದಾಖಲೆ ಸಹಿತ ಗ್ರಾಮಗಳ ಮಾಹಿತಿ ಇರುತ್ತದೆ ಎಂದು ತಿಳಿಸಿದ ಅವರು, ದಾಖಲೆ ರಹಿತ ಜನವಸತಿ ಪ್ರದೇಶಗಳನ್ನು ಗಮನಿಸಿ, ಗ್ರಾಮ ರಚನೆ ಮಾಡಬೇಕು. ದಾಖಲೆ ರಹಿತ ಇದ್ದಲ್ಲಿ ಅವರಿಗೆ ಒಂದು ದಾಖಲೆ ಕಲ್ಪಿಸಿ, ಬದುಕು ಕಲ್ಪಿಸಿಕೊಡಬೇಕಿದೆ ಎಂದರು.

ಗ್ರಾಮದ 1 ಕಿ.ಮೀ ವ್ಯಾಪ್ತಿ ಒಳಗೆ ಇದ್ದು, 10 ಮನೆಗಳಿಗಿಂತಲೂ ಹೆಚ್ಚು ಇದ್ದರೆ ಉಪ ಗ್ರಾಮ ರಚನೆ ಮಾಡಲು ಅವಕಾಶ ಇದೆ. ಜನರಿಗೆ ನಾವು ಸ್ಥಿರ ಬದುಕು ನೀಡಬೇಕು. ಬಿಟ್ಟು ಹೋಗಿರುವ ಕಂದಾಯ ಗ್ರಾಮಗಳ ರಚನೆ ಹಾಗೂ ಗುರುತಿಸುವ ಕಾರ್ಯ ಆಗಬೇಕು. ಈ ನಿಟ್ಟಿನಲ್ಲಿ ಯಾದವ ಹಾಗೂ ತಾಂಡಾ ಸಂಘದವರಿಂದ ಮಾಹಿತಿ ಪಡೆದು ಗ್ರಾಮ ಪಂಚಾಯಿತಿಯಿಂದ ಜನವಸತಿ ಪಟ್ಟಿ ಪಡೆಯುವಂತೆ ಸಚಿವರು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಸುಮಾರು 70 ಸಾವಿರ ಜಮೀನುಗಳು ಮೃತ ಹೊಂದಿರುವವರ ಹೆಸರಿನಲ್ಲಿ ಮುಂದುವರೆದಿದ್ದು, ಇಂತಹ ದಾಖಲೆಗಳು ಸಕಾಲದಲ್ಲಿ ಆಪ್‌ಡೇಟ್ ಆಗಬೇಕು. ಇಲ್ಲದಿದ್ದರೆ ವಾರಸುದಾರರಿಗೆ ನಾನಾ ರೀತಿಯ ತೊಂದರೆಗಳಾಗಲಿವೆ. ಹಾಗಾಗಿ ಪೌತಿ ಆಗದೇ ಉಳಿದಿರುವಂತಹ ಜಮೀನುಗಳನ್ನು ತಕ್ಷಣವೇ ಅಭಿಯಾನ ಕೈಗೊಳ್ಳಲಾಗುವುದು. ಈ ಅಭಿಯಾನದಲ್ಲಿ ಅಂತಹ ಕುಟುಂಬಗಳು ಭಾಗವಹಿಸಿದಲ್ಲಿ ಪೌತಿ ಖಾತೆ ಮಾಡಿಕೊಡಲಾಗುವುದು ಎಂದು ಸಚಿವರು ಹೇಳಿದರು.

*ಭೂ ಸುರಕ್ಷಾ ಯೋಜನೆಗೆ ವೇಗ ನೀಡಿ:*

ಭೂ ಸುರಕ್ಷಾ ಯೋಜನೆಯನ್ನು ಭೂ ಕಂದಾಯ ಇಲಾಖೆಯ ಎಲ್ಲಾ ದಾಖಲೆಗಳನ್ನು ಡಿಜಿಟಲೀಕರಣಗೊಳಿಸುವ ಉದ್ದೇಶದಿಂದ ಕೈಗೆತ್ತಿಕೊಳ್ಳಲಾಗಿದ್ದು, ಈ ಯೋಜನೆ ತ್ವರಿತಗತಿಯಲ್ಲಿ ಆಗಬೇಕು. ಜಿಲ್ಲೆಯಲ್ಲಿ ಸರಾಸರಿ 10 ಸಾವಿರ ಪುಟಗಳ ಸ್ಕ್ಯಾನ್ ಹಾಗೂ ಅಪ್‌ಲೋಡ್ ಆಗಬೇಕು ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಹೇಳಿದರು.

**ಸರ್ಕಾರದಿಂದ 1 ಲಕ್ಷ ಕುಟುಂಬಗಳಿಗೆ ಡಿಜಿಟಲ್ ಹಕ್ಕುಪತ್ರ ವಿತರಣೆ:**

ರಾಜ್ಯ ಸರ್ಕಾರವು ಎರಡು ವರ್ಷ ಪೂರೈಸುತ್ತಿರುವ ಹಿನ್ನೆಲೆ ಜನಪರ ಆಡಳಿತಕ್ಕೆ ಸಾಕ್ಷಿಯಾಗಿ ಕಂದಾಯ ಗ್ರಾಮಗಳ 1 ಲಕ್ಷ ಕುಟುಂಬಗಳಿಗೆ ಶಾಶ್ವತ ಡಿಜಿಟಲ್ ಹಕ್ಕುಪತ್ರ ವಿತರಿಸಲು ಉದ್ದೇಶಿಸಲಾಗಿದೆ. ಇದೇ ಮೇ 20ರಂದು ವಿಜಯನಗರ ಜಿಲ್ಲೆಯ ಹೊಸಪೇಟೆಯಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹಕ್ಕುಪತ್ರ ವಿತರಿಸಲಿದ್ದಾರೆ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಹೇಳಿದರು.

ಸಭೆಯಲ್ಲಿ ಸಂಸದ ಈ.ತುಕಾರಾಮ್, ಸಂಡೂರು ಶಾಸಕರಾದ ಈ.ಅನ್ನಪೂರ್ಣ, ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್, ಸಹಾಯಕ ಆಯುಕ್ತ ಪಿ.ಪ್ರಮೋದ್ ಸೇರಿದಂತೆ ಜಿಲ್ಲೆಯ ಐದು ತಾಲ್ಲೂಕುಗಳ ತಹಶೀಲ್ದಾರರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ – 2025

## ಎಲ್ಲಾ ವರ್ಗದವರಿಗೆ ಸಮಾನತೆ ಮತ್ತು ಸಾಮಾಜಿಕ ನ್ಯಾಯ ಒದಗಿಸುವುದು ಸರ್ಕಾರದ ಉದ್ದೇಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ–14 ಎಲ್ಲಾ ಕಾಲದಲ್ಲಿಯೂ ಎಲ್ಲಾ ವರ್ಗದ ಸಮುದಾಯಗಳಿಗೆ ಸಮಾನತೆ ಮತ್ತು ಸಾಮಾಜಿಕ ನ್ಯಾಯ ಸರ್ಕಾರದಪ್ರಮುಖಧ್ಯೇಯವಾಗಿದೆ. ಸಂವಿಧಾನದ 341ನೇ ವಿಧಿಯ ಅಡಿಯಲ್ಲಿ ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿ ಪಟ್ಟಿಯಲ್ಲಿ 101 ಜಾತಿಗಳನ್ನುಗುರುತಿಸಲಾಗಿರುತ್ತದೆ. ಮೀಸಲಾತಿಯ ಪ್ರಯೋಜನವು ಎಲ್ಲಾ ಜಾತಿಗಳಿಗೆ ಸಮಾನವಾಗಿ ತಲುಪುವಂತೆ ಮಾಡಲು ಪರಿಶಿಷ್ಟ ಜಾತಿಗಳ ವರ್ಗೀಕರಣಕ್ಕಾಗಿ ಹಲವಾರು ವರ್ಷಗಳಿಂದ ಬೇಡಿಕೆಯಿರುತ್ತದೆ.

ಸರ್ವೋಚ್ಛನ್ಯಾಯಾಲಯವು ಭಾರತದ ಸಂವಿಧಾನದ ಅನುಚ್ಛೇದ 15(4) ಮತ್ತು 16(4)ರ ಅಡಿಯಲ್ಲಿ ಶಿಕ್ಷಣ ಮತ್ತು ರಾಜ್ಯ ಸರ್ಕಾರದ ಅಧೀನದ ಸೇವೆಗಳಲ್ಲಿ ಪರಿಶಿಷ್ಟ ಜಾತಿಗಳಲ್ಲಿ ಒಳ ಮೀಸಲಾತಿಯನ್ನು ಕಲ್ಪಿಸುವ ಬಗ್ಗೆ ರಾಜ್ಯ ಸರ್ಕಾರಗಳು ಪರಿಶಿಷ್ಟ ಜಾತಿಗಳ ಒಳ ವರ್ಗೀಕರಣ ಮಾಡಬಹುದಾಗಿದೆ ಎಂದು State of Punjab and Others v/s Devinder Singh and Others ಪ್ರಕರಣದಲ್ಲಿ ದಿನಾಂಕ:01–08–2024 ರಂದು ತೀರ್ಪು ನೀಡಿರುತ್ತದೆ.

ಅದರಂತೆ, ಕರ್ನಾಟಕ ರಾಜ್ಯದಲ್ಲಿ ಶಿಕ್ಷಣ ಮತ್ತು ಸರ್ಕಾರಿ ಸೇವೆಗಳಲ್ಲಿ ಪರಿಶಿಷ್ಟ ಜಾತಿಗಳ ವಿವಿಧ ಉಪ ಗುಂಪುಗಳಲ್ಲಿ ಪ್ರಾತಿನಿಧ್ಯತೆ ಕುರಿತು Emperical Data ಪಡೆದು ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿ (ಉಪ ವರ್ಗೀಕರಣ) ಬಗ್ಗೆ ವರದಿ ಸಲ್ಲಿಸಲು ಕರ್ನಾಟಕ ಉಚ್ಚನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿಗಳಾದ ಡಾ.ಹೆಚ್.ಎನ್.ನಾಗಮೋಹನ್ ದಾಸ್ ಇವರ ಅಧ್ಯಕ್ಷತೆಯಲ್ಲಿ ಏಕ ಸದಸ್ಯ ಆಯೋಗವನ್ನು ಸರ್ಕಾರವು ರಚಿಸಿದೆ.

ಈ ನಿಟ್ಟಿನಲ್ಲಿ ಸರ್ಕಾರವು 2024ನೇ ಡಿಸೆಂಬರ್ 13ರಂದು ಸೂಕ್ತ ನಿಯಮ ಹಾಗೂ ಮಾರ್ಗಸೂಚಿಗಳನ್ನು ಸಹ ನಿಗದಿಪಡಿಸಿ ಆದೇಶ ಹೊರಡಿಸಲಾಗಿರುತ್ತದೆ. ಕರ್ನಾಟಕ ರಾಜ್ಯದಲ್ಲಿ ಲಭ್ಯವಿರುವ ದತ್ತಾಂಶ ಮತ್ತು 2011ರ ಜನಗಣತಿಯನ್ನು ಪರಿಗಣಿಸಿ, ವೈಜ್ಞಾನಿಕವಾಗಿ ತರ್ಕಬದ್ಧ ಒಳ ಮೀಸಲಾತಿ (ಉಪ–ವರ್ಗೀಕರಣ) ಮತ್ತು ಪರಿಶಿಷ್ಟ ಜಾತಿಗಳಲ್ಲಿ ಸಮಾನ ಜಾತೀಯ (ಊಂಟಂರಜ–ಟಜಂಣ) ಉಪ–ಜಾತಿಗಳ ಗುಂಪುಗಳನ್ನು ಒಟ್ಟುಗೂಡಿಸುವ ಬಗ್ಗೆ ಪರಿಶೀಲಿಸುವುದು.

ರಾಜ್ಯದ ಸಾರ್ವಜನಿಕ ಸೇವೆಗಳಲ್ಲಿ ಮತ್ತು ಶಿಕ್ಷಣ ಸಂಸ್ಥೆಗಳ ಪ್ರವೇಶಾತಿಗಳಲ್ಲಿ ಪ್ರಾತಿನಿಧ್ಯದ ಅಸಮರ್ಪಕತೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ಕರ್ನಾಟಕ ರಾಜ್ಯದಲ್ಲಿನ ಪರಿಶಿಷ್ಟ ಜಾತಿಗಳ ವಿವಿಧ ಉಪ ಗುಂಪುಗಳಲ್ಲಿ ಅಂತರ್ ಹಿಂದುಳಿದಿರುವಿಕೆಯನ್ನು (Inter-sebackwardness) ಗುರುತಿಸಲು Empiricaldata ಸಂಗ್ರಹಿಸುವುದು.

ಕರ್ನಾಟಕ ರಾಜ್ಯದಲ್ಲಿನ ಪರಿಶಿಷ್ಟ ಜಾತಿಗಳ ವಿವಿಧ ಉಪ ಗುಂಪುಗಳಲ್ಲಿ ಅಂತರ್ ಹಿಂದುಳಿದಿರುವಿಕೆ (Inter-se backwardness) ಹಾಗೂ ಪ್ರಾತಿನಿಧ್ಯತೆಯ ಆಧಾರದ ಮೇಲೆ ಸೂಕ್ತ ಒಳ ಮೀಸಲಾತಿ (ಉಪ–ವರ್ಗೀಕರಣ) ಮಾಡುವ ಬಗ್ಗೆ ಮಾನ್ಯ ಸರ್ವೋಚ್ಛ ನ್ಯಾಯಾಲಯದ ಆದೇಶದಂತೆ ಮೀಸಲಾತಿ ಪ್ರಮಾಣವನ್ನು ನಿಗದಿಪಡಿಸುವ ಬಗ್ಗೆ ಪರಿಶೀಲಿಸುವುದು.

ಆಯೋಗವು ಅಗತ್ಯವಿದ್ದಲ್ಲಿ ತನ್ನ ವಿವೇಚನೆಯಂತೆ ಮತ್ತು ಅಂತರ್ ಹಿಂದುಳಿದಿರುವಿಕೆಯ ಬಗ್ಗೆ ಇನ್ನಿತರ ಸೂಕ್ತ ದತ್ತಾಂಶಗಳು (Empiricaldata) ಲಭ್ಯವಿದ್ದಲ್ಲಿ ಸಂಗ್ರಹಿಸಬಹುದು.

ಪರಿಶಿಷ್ಟಜಾತಿಯೊಳಗಿನ ವಿವಿಧ ಉಪ ಗುಂಪುಗಳ ಸಾಮಾಜಿಕ, ಆರ್ಥಿಕ, ರಾಜಕೀಯ ಮತ್ತು ಶೈಕ್ಷಣಿಕ ಹಿಂದುಳಿದಿರುವಿಕೆಯ ವಿವಿಧ ಸಮಸ್ಯೆಗಳನ್ನು ಪರಿಶೀಲಿಸುವ ಬಗ್ಗೆ ಮತ್ತು ಮಾನ್ಯ ಸರ್ವೋಚ್ಛ ನ್ಯಾಯಾಲಯವು (ಪಂಜಾಬ್ ರಾಜ್ಯ ಮತ್ತು ಇತರರ ವಿರುದ್ಧ ದೇವಿಂದರ್ ಸಿಂಗ್ ಮತ್ತು ಇತರರು ಸಿವಿಲ್ ಮೇಲ್ಮನವಿ ಸಂಖ್ಯೆ: 2317/2011ರ ದಿನಾಂಕ:01–08–2024ರ ಪ್ರಕರಣದಲ್ಲಿ) ನೀಡಿರುವ ತೀರ್ಪಿನ ಅನ್ವಯ ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳ ಒಳ ಮೀಸಲಾತಿಯ (ಉಪ–ವರ್ಗೀಕರಣ) ಬಗ್ಗೆ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ವಿಧಾನ ಬಗ್ಗೆ ಪರಿಶೀಲಿಸುವುದು.

ಮೀಸಲಾತಿ ನೀತಿಗಳ ಪ್ರಯೋಜನವನ್ನು ಪರಿಶಿಷ್ಟ ಜಾತಿಗಳ ವಿವಿಧ ಉಪ ಗುಂಪುಗಳ ನಡುವೆ ಸಮಾನವಾಗಿ ಪಡೆಯಲಾಗುತ್ತಿದೆಯೇ ಎಂಬುದರ ಬಗ್ಗೆ ಪರಿಶೀಲಿಸುವುದು ಮತ್ತು ಮೇಲ್ಕಂಡ ಎಲ್ಲಾ ಅಂಶಗಳ ಬಗ್ಗೆ ಕೈಗೊಳ್ಳಬಹುದಾದ ಇತರ ಕ್ರಮಗಳ ಕುರಿತು ನಿರ್ದಿಷ್ಟ ಶಿಫಾರಸ್ಸುಗಳೊಂದಿಗೆ ವರದಿಯನ್ನು ಸಲ್ಲಿಸುವುದು.

ದಿನಾಂಕ: 04–01–2025 ರಿಂದ 26–03–2025 ರವರೆಗೂ ಒಳಮೀಸಲಾತಿಯ ಬಗ್ಗೆ ಒಟ್ಟು 4034 ಅಹವಾಲುಗಳು/ಮನವಿಗಳ (ಇ–ಮೇಲ್/ಮುದ್ದಾಂ/ಅಂಚೆ ಮೂಲಕ) ಹಾಗೂ ಸಲಹೆಗಳನ್ನು ಆಯೋಗವು ಸ್ವೀಕರಿಸಿದ್ದು, ಸದರಿ ಮನವಿ/ ಅಹವಾಲುಗಳನ್ನು ಹಾಗೂ ದಾಖಲಾತಿಗಳನ್ನು ಪರಿಶೀಲಿಸಿ ಗೌರವಾನ್ವಿತ ನ್ಯಾಯಮೂರ್ತಿ ಡಾ.ಹೆಚ್.ಎನ್.ನಾಗಮೋಹನದಾಸ್ ಏಕ ಸದಸ್ಯ ವಿಚಾರಣಾ ಆಯೋಗವು ದಿನಾಂಕ: 27–03–2025 ರಂದು ಸರ್ಕಾರಕ್ಕೆ ಸಲ್ಲಿಸಿರುವ ಮಧ್ಯಂತರ ವರದಿಯಲ್ಲಿ, ಪರಿಶಿಷ್ಟ ಜಾತಿಯಲ್ಲಿನ 101 ಜಾತಿಗಳ ವೈಜ್ಞಾನಿಕ ವರ್ಗೀಕರಣ ಮಾಡಲು ದತ್ತಾಂಶವನ್ನು (Emperical Data) ಸಂಗ್ರಹಣೆಗೆ ಸಮೀಕ್ಷೆಯನ್ನು ನಡೆಸಲು ಶಿಫಾರಸ್ಸು ಮಾಡಿರುತ್ತದೆ. ಅದರಂತೆ ವೈಜ್ಞಾನಿಕ ದತ್ತಾಂಶ ಸಂಗ್ರಹಣೆಗೆ ಸಮೀಕ್ಷೆ ನಡೆಸಲು ಉದ್ದೇಶಿಸಲಾಗಿರುತ್ತದೆ.

2011ರ ಜನಗಣತಿಯಲ್ಲಿ ಆದಿ ಕರ್ನಾಟಕ, ಆದಿ ದ್ರಾವಿಡ, ಆದಿ ಆಂಧ್ರ ಎಂದು ನಮೂದಿಸಿರುವ ಜಾತಿಗಳ ಮೂಲಜಾತಿಗಳ ಸಂಖ್ಯೆಯ ಮಾಹಿತಿ ಇಲ್ಲದೆ ಇರುವುದರಿಂದ ಮಾದಿಗ ಸಂಬಂಧಿತ ಜಾತಿಗಳ ಸಂಖ್ಯೆ ಮತ್ತು ಹೊಲೆಯ ಸಂಬಂಧಿತ ಜಾತಿಗಳ ಸಂಖ್ಯೆಯನ್ನು ವರ್ಗೀಕರಿಸಲು ಸಾಧ್ಯವಾಗಿರುವುದಿಲ್ಲ.

ಪರಿಶಿಷ್ಟ ಜಾತಿಗಳ ಬಗ್ಗೆ ನಮೂದಿಸಿರುವ ಜನಸಂಖ್ಯೆಯನ್ನು ಒಳಮೀಸಲಾತಿಯ ವರ್ಗೀಕರಣದಲ್ಲಿ ಯಾವ ಗುಂಪಿಗೆ ಸೇರಿಸಬೇಕು ಎಂಬುವದರ ಬಗ್ಗೆ ಯಾವ ವರದಿಯಲ್ಲೂ ಉಲ್ಲೇಖವಿಲ್ಲ ಮತ್ತು ಈ ಸಮುದಾಯವನ್ನು ವರ್ಗೀಕರಣದಲ್ಲಿ ಪರಿಗಣಿಸಿಲ್ಲ. 2011ರ ಜನಗಣತಿಯಲ್ಲಿ ಇವರ ಉಪಜಾತಿಗಳ ವಿವರಗಳು ಲಭ್ಯವಿಲ್ಲ ಆದ್ದರಿಂದ ಹೊಸ ಸಮೀಕ್ಷೆಯನ್ನು ಕೈಗೊಂಡು ಇವರ ಮೂಲಜಾತಿಗಳನ್ನು ದಾಖಲಿಸಿಕೊಂಡು ಒಳಮೀಸಲಾತಿ ವರ್ಗೀಕರಣವನ್ನು ಮಾಡಬೇಕೆಂದು ಆಯೋಗವು ಶಿಫಾರಸ್ಸು ಮಾಡಿರುತ್ತದೆ.

**ಸಮೀಕ್ಷೆಯಲ್ಲಿ ಗಮನಿಸಬೇಕಾದ ಅಂಶ:** ಆದಿ ಕರ್ನಾಟಕ ಆದಿ, ದ್ರಾವಿಡ ಮತ್ತು ಆದಿ ಆಂಧ್ರ ಎಂದು ಸಮೀಕ್ಷಾ ಸಮಯದಲ್ಲಿ ನಮೂದಿಸಿರುವ ಎಲ್ಲರೂ ತಮ್ಮ ತಮ್ಮ ಮೂಲ ಜಾತಿಗಳನ್ನು ನಮೂದಿಸಬೇಕೆಂದು ತಿಳಿಸಬೇಕಾಗಿದೆ. ಇದು ಸಮೀಕ್ಷೆಯ ಒಂದು ಮುಖ್ಯ ಉದ್ದೇಶವಾಗಿರುತ್ತದೆ.

ಮೊಬೈಲ್ ಆಪ್‌ನ್ನು ಬಳಸುತ್ತಿರುವ ಉದ್ದೇಶ ಹಾಗೂ ಇ–ಆಡಳಿತ ಇಲಾಖೆಯು ಅಭಿವೃದ್ಧಿಪಡಿಸಿರುವ ತಂತ್ರಾಂಶದಲ್ಲಿ ಮಾಹಿತಿ ಸಂಗ್ರಹಿಸುತ್ತಿರುವುದರಿಂದ ಇರುವ ಅನುಕೂಲಗಳು:

ಮಾಹಿತಿಯನ್ನು ನಿಖರವಾಗಿ ಸಂಗ್ರಹಿಸಬಹುದು. ಸಂಗ್ರಹಿಸಿರುವ ಮಾಹಿತಿಯನ್ನು ಅಧಿಕೃತವಾಗಿ ಪರಿಶೀಲಿಸಿ ಅಂತಿಮಗೊಳಿಸುವುದು. ವೈಜ್ಞಾನಿಕವಾದ ದತ್ತಾಂಶಗಳನ್ನು ಸಂಗ್ರಹಿಸಬಹುದು. ಈಗಾಗಲೇ ಇರುವ ದತ್ತಾಂಶಗಳನ್ನು ಬಳಸಿಕೊಂಡು ಸಮೀಕ್ಷೆಯನ್ನು ಕೈಗೊಳ್ಳಬಹುದು (ಕುಟುಂಬ, ಆಧಾರ್), ಕಡಿಮೆ ಕಾಲಾವಕಾಶ ತೆಗೆದು ಕೊಂಡು ಸಮಗ್ರ ಮಾಹಿತಿಯನ್ನು ಸಂಗ್ರಹಿಸಲಾಗುವುದು. ಸಂಗ್ರಹಿಸಿದ ಮಾಹಿತಿಯನ್ನು ವಿವಿಧ ಹಂತಗಳಲ್ಲಿ ಪರಿಶೀಲಿಸಿ ಪರೀಕ್ಷಿಸಿ ಅಂತಿಮಗೊಳಿಸಬಹುದು

ಸಂಗ್ರಹಿಸಿರುವ ಮಾಹಿತಿಯ ವರ್ಗೀಕರಣ ಮತ್ತು ವಿಶ್ಲೇಷಣೆ ಸ್ಪಷ್ಟವಾಗಿರುತ್ತದೆ ಮತ್ತು ಕಡಿಮೆ ಕಾಲಾವಧಿಯಲ್ಲಿ ವರ್ಗೀಕರಿಸಲು ಸಾಧ್ಯವಾಗುತ್ತದೆ. ಮುಂದಿನ ದಿನಗಳಲ್ಲಿ ಯೋಜನೆಗಳನ್ನು ರೂಪಿಸಲು ಮತ್ತು ಜನರ ಅಗತ್ಯಗಳನ್ನು ಅರ್ಥ ಮಾಡಿಕೊಳ್ಳಲು ಇದು ಸಹಾಯವಾಗುತ್ತದೆ. ಸಂಗ್ರಹಿಸುವ ಮಾಹಿತಿ ಸಂಕ್ಷಿಪ್ತವಾಗಿರಬೇಕು. ನಿರ್ದಿಷ್ಟವಾಗಿರಬೇಕು. ಅವಶ್ಯಕತೆ ಇರುವ ಮಾಹಿತಿಯನ್ನು ಮಾತ್ರ ಸಂಗ್ರಹಿಸಬೇಕು.

ಏಕಕಾಲದಲ್ಲಿ ಸಮೀಕ್ಷೆಯನ್ನು ಪ್ರಾರಂಭಿಸಿ, ನಿರ್ದಿಷ್ಟ ಕಾಲಮಿತಿಯಲ್ಲಿ ಪೂರ್ಣಗೊಳಿಸಬಹುದು. ಮಾಹಿತಿಯನ್ನು ಸಂಗ್ರಹಿಸಲು ನೇಮಿಸುವ ಮಾಹಿತಿ ಸಮೀಕ್ಷಾದಾರರಿಗೆ ರಾಜ್ಯ ಮಟ್ಟದಲ್ಲಿ, ಜಿಲ್ಲಾ ಮಟ್ಟದಲ್ಲಿ, ತಾಲೂಕು ಮಟ್ಟದಲ್ಲಿ, ಗ್ರಾಮ ಪಂಚಾಯಿತಿ ಮಟ್ಟದಲ್ಲಿ, ವಾರ್ಡ್ ಮಟ್ಟದಲ್ಲಿ ತರಬೇತಿಗಳನ್ನು ಆಯೋಜಿಸಲಾಗುತ್ತದೆ.

ಈ ಸಮೀಕ್ಷೆಯ ಉದ್ದೇಶ, ಹಾಗೂ ಈ ತಂತ್ರಾಂಶವನ್ನು ಬಳಸುವ ವಿಧಾನವನ್ನು ಕುರಿತು ತರಬೇತಿ ನೀಡಿ ಸಮಗ್ರವಾದ ಮಾಹಿತಿಯನ್ನು ಸಂಗ್ರಹಿಸುವಂತೆ ಮತ್ತು ಸಂಗ್ರಹಿಸಬೇಕಾದಂತಹ ಮಾಹಿತಿಯ ಕುರಿತು ಜನರಿಗೆ ಮನವರಿಕೆ ಮಾಡಿಕೊಟ್ಟು ಮಾಹಿತಿಯನ್ನು ಸಂಗ್ರಹಿಸಲು ತರಬೇತಿಯನ್ನು ನೀಡಲಾಗುತ್ತಿದೆ.

**ಸಮೀಕ್ಷಾ ಪ್ರಕ್ರಿಯಾ ವಿಧಾನ:**

ಪ್ರಶ್ನಾವಳಿಗಳನ್ನು ಗೌರವಾನ್ವಿತ ನ್ಯಾಯಮೂರ್ತಿ ಡಾ.ಹೆಚ್.ಎನ್.ನಾಗಮೋಹನದಾಸ್ ಏಕ ಸದಸ್ಯ ವಿಚಾರಣಾ ಆಯೋಗವು ಸಿದ್ಧಪಡಿಸಿದ್ದು ಈ ಪ್ರಶ್ನಾವಳಿಯನ್ನು EDCS ಇ–ಗವರ್ನೆನ್ಸ್ ಇಲಾಖೆಯವರು ಆಂಡ್ರಾಯ್ಡ್ ಮೊಬೈಲ್ ಆಪ್ ಮೂಲಕ ಮಾಹಿತಿಯನ್ನು ಸಂಗ್ರಹಿಸಲು ತಂತ್ರಜ್ಞಾನವನ್ನು ಅಭಿವೃದ್ಧಿಗೊಳಿಸಿರುತ್ತಾರೆ.

ಸಮೀಕ್ಷೆಯನ್ನು ಃಐಔಒಜಜಟನಂತೆ ಜಿಲ್ಲೆಗಳ ಜಿಲ್ಲಾಧಿಕಾರಿಗಳು 58932 ಪ್ರಮುಖವಾಗಿ ಶಿಕ್ಷಕರನ್ನು ಸಮೀಕ್ಷಾದಾರರಾಗಿ (Enumerators) ನೇಮಿಸಿ ಆದೇಶ ಹೊರಡಿಸಿರುತ್ತಾರೆ. ಪ್ರತಿ 10–12 ಸಮೀಕ್ಷೆದಾರರಿಗೆ (ಇಟಿಣಟಜಡಿಚಿಣಠಿ) ಒಬ್ಬರು ಮೇಲ್ವಿಚಾರಕರನ್ನು ನೇಮಿಸಲಾಗಿದೆ. ಸದರಿ ಸಮೀಕ್ಷೆದಾರರು (Enumerators) ಮನೆ–ಮನೆಗೆ ತೆರಳಿ AndroidMobileApp ನಲ್ಲಿ ಅಳವಡಿಸಿರುವ ತಂತ್ರಜ್ಞಾನದ ಮೂಲಕ ಸಮೀಕ್ಷೆಯನ್ನು ನಡೆಸುವ ಸಂದರ್ಭದಲ್ಲಿ ಸಮೀಕ್ಷಾದಾರರಿಗೆ, ಪ.ಜಾತಿ ಜನಾಂಗದವರು ತಮ್ಮ ಜಾತಿ/ ಮೂಲ ಜಾತಿ/ಶಿಕ್ಷಣ/ಉದ್ಯೋಗ/ ರಾಜಕೀಯ/ಸಾಮಾಜಿಕ ಹಾಗೂ ಆರ್ಥಿಕ ಇತ್ಯಾದಿ ಮಾಹಿತಿಯನ್ನು ನೀಡಿ ಸಮೀಕ್ಷೆಗೆ ಸಹಕರಿಸುವುದು ಬಹಳ ಮುಖ್ಯವಾಗಿರುತ್ತದೆ. ಇದರಿಂದ ಅವರಿಗೆ ಮುಂದೆ ಒಳ ಮೀಸಲಾತಿ ಪ್ರಯೋಜನೆಯನ್ನು ಪಡೆಯುವಲ್ಲಿ ಸಹಾಯಕವಾಗುತ್ತದೆ.

2025ನೇ ಏಪ್ರಿಲ್ 9ರ ಸರ್ಕಾರದ ಆದೇಶದಲ್ಲಿ ರಾಜ್ಯ/ಜಿಲ್ಲಾ/ತಾಲ್ಲೂಕು ಮಟ್ಟದ ಹಾಗೂ ಬಿಬಿಎಂಪಿ ವ್ಯಾಪ್ತಿಯಲ್ಲಿ ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಕುರಿತು ಸಮೀಕ್ಷೆ ಕೈಗೊಳ್ಳುವ ಸಂಬಂಧ ಸಮನ್ವಯ ಸಮಿತಿಗಳನ್ನು ರಚಿಸಿ ಇವುಗಳ ಮೇಲುಸ್ತುವಾರಿಯಲ್ಲಿ ಈ ಕೆಳಕಂಡ ಮೂರು ಹಂತಗಳಲ್ಲಿ ಸಮೀಕ್ಷೆಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ.

ಮೊದಲನೇ ಹಂತ:

ದಿನಾಂಕ:05.05.2025 ರಿಂದ 17.05.2025 ರವರೆಗೆ ಮನೆ–ಮನೆ ಸಮೀಕ್ಷೆ ಕೈಗೊಳ್ಳಲಾಗುತ್ತಿದೆ.

ಎರಡನೇ ಹಂತ:

ದಿನಾಂಕ: 19.05.2025 ರಿಂದ 21.05.2025 ರವರೆಗೆ ವಿಶೇಷ ಶಿಬಿರಗಳಲ್ಲಿ ಸಮೀಕ್ಷೆ ಹಮ್ಮಿಕೊಳ್ಳಲಾಗಿದೆ.

ಮೂರನೇ ಹಂತ:

ದಿನಾಂಕ:19.05.2025 ರಿಂದ 23.05.2025 ರವರೆಗೆ ಆನ್‌ಲೈನ್ ಮೂಲಕ ಸ್ವಯಂ ಘೋಷಣೆಗೆ ಅವಕಾಶ ಕಲ್ಪಿಸಲಾಗಿರುತ್ತದೆ. ಸಮೀಕ್ಷೆಗೆ ಸುಮಾರು 25 ಲಕ್ಷ ಪರಿಶಿಷ್ಟ ಜಾತಿ ಕುಟುಂಬಗಳು ಇರಬಹುದೆಂದು ಅಂದಾಜಿಸಲಾಗಿದೆ.

ಸಮೀಕ್ಷೆಯ ಉದ್ದೇಶಕ್ಕಾಗಿ ಈಗಾಗಲೇ ಜಿಲ್ಲಾ ಮಟ್ಟದ ಮಾಸ್ಟರ್ ಟ್ರೈನರ್‌ಗಳನ್ನು ಗುರುತಿಸಿ ದಿನಾಂಕ: 25.04.2025 ರಂದು ರಾಜ್ಯ ಮಟ್ಟದಿಂದ ತರಬೇತಿ ನೀಡಲಾಗಿರುತ್ತದೆ. ಹಾಗೂ ತಾಲ್ಲೂಕು ಮಟ್ಟದ ಮಾಸ್ಟರ್ ಟ್ರೈನರ್‌ಗಳಿಗೆ ಜಿಲ್ಲಾ ಮಟ್ಟದಲ್ಲಿ ದಿನಾಂಕ: 28.04.2025 ರಂದು ತರಬೇತಿ ನೀಡಲಾಗಿರುತ್ತದೆ.

ಸಮೀಕ್ಷೆಗೆ ನೇಮಕವಾಗಿರುವ ಸುಮಾರು 65,000 ಗಣತಿದಾರರು ಮತ್ತು ಮೇಲ್ವಿಚಾರಕರಿಗೆ ಸಮೀಕ್ಷೆಯ ಕುರಿತು ದಿನಾಂಕ: 02.05.2025 ಮತ್ತು 03.05.2025 ರಂದು ತಾಲ್ಲೂಕು ಮಟ್ಟದಲ್ಲಿ ತರಬೇತಿಯನ್ನು ನೀಡಲಾಗಿರುತ್ತದೆ. ಮತ್ತು ಎಲ್ಲಾ ಸಮೀಕ್ಷಾದಾರರಿಗೆ ಸಮೀಕ್ಷಾ ಕೈಪಿಡಿ ಮತ್ತು ಸಮೀಕ್ಷಾ ಕಿಟ್ ಗಳನ್ನು ಒದಗಿಸಲು ಕ್ರಮವಹಿಸಲಾಗುತ್ತಿದೆ.

ಮಾಹಿತಿಯನ್ನು ವೈಜ್ಞಾನಿಕವಾಗಿ ಕಡಿಮೆ ಅವಧಿಯಲ್ಲಿ ಪಡೆಯುವ ಉದ್ದೇಶದಿಂದ ಇ–ಆಡಳಿತ ಇಲಾಖೆಯು ಅಭಿವೃದ್ಧಿ ಪಡಿಸಿರುವ ಅಂಡ್ರಾಯಿಡ್ ಆಧಾರಿತ ಮೊಬೈಲ್ ಆಪ್ ಮೂಲಕ ಸಮೀಕ್ಷೆಯನ್ನು ಕೈಗೊಳ್ಳಲಾಗುತ್ತಿದೆ.

ಸಮೀಕ್ಷೆ ನಡೆಸುವ ಎಲ್ಲಾ ಗಣತಿದಾರರ ಮೊಬೈಲ್ ಸಂಖ್ಯೆಗಳನ್ನು ಅಂಡ್ರಾಯಿಡ್ ಆಧಾರಿತ ಮೊಬೈಲ್ ಆಪ್ ಮುಖಾಂತರ ವೈಟ್ ಲಿಸ್ಟಿಂಗ್ ಮಾಡಲಾಗಿದ್ದು, ಈ ಮೊಬೈಲ್ ನಂಬರ್‌ಗಳನ್ನು ಹೊರತುಪಡಿಸಿ ಇತರೆ ಮೊಬೈಲ್ ನಂಬರ್ ಮುಖೇನ ಸಮೀಕ್ಷೆಯನ್ನು ಕೈಗೊಳ್ಳಲು ಸಾಧ್ಯವಾಗುವುದಿಲ್ಲ, ಇದರಿಂದಾಗಿ ಸಮೀಕ್ಷೆಯನ್ನು ಪಾರದರ್ಶಕವಾಗಿ ಹಮ್ಮಿಕೊಳ್ಳಲು ಸಾಧ್ಯವಾಗುತ್ತದೆ.

ಸಮೀಕ್ಷೆಯಲ್ಲಿ ಕುಟುಂಬ ತಂತ್ರಾಂಶದಿಂದ ಡಾಟಾಬೇಸ್ (ಪಡಿತರ ಚೀಟಿ) ನಲ್ಲಿರುವ ದತ್ತಾಂಶಗಳನ್ನು ಬಳಸಿಕೊಂಡು ಮಾಹಿತಿ ಸಂಗ್ರಹಿಸುತ್ತಿರುವುದರಿಂದ, ವೈಜ್ಞಾನಿಕವಾದ ದತ್ತಾಂಶಗಳನ್ನು ಪಡೆಯಲು ಸಹಕಾರಿಯಾಗಿದೆ.

ಮೊಬೈಲ್ ಆಪ್ ನಲ್ಲಿರುವ ಸಮೀಕ್ಷಾ ಪ್ರಶ್ನಾವಳಿಯಲ್ಲಿ 42 ಪ್ರಶ್ನೆಗಳಿದ್ದು, ಇದರಲ್ಲಿ ಕೌಟುಂಬಿಕ, ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಮತ್ತು ಔದ್ಯೋಗಿಕ ವಿಷಯಗಳನ್ನೊಳಗೊಂಡಂತೆ ಸಮಗ್ರವಾದ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ. ಈ ಮಾಹಿತಿಯು ಪರಿಶಿಷ್ಟ ಜಾತಿ ಪಟ್ಟಿಯಲ್ಲಿನ ವಿವಿಧ ಜಾತಿಗಳ ಸ್ಥಿತಿಗತಿ ಮತ್ತು ವಿವಿಧ ಕ್ಷೇತ್ರಗಳಲ್ಲಿನ ಪ್ರಾತಿನಿಧ್ಯತೆ ಬಗ್ಗೆ ದತ್ತಾಂಶವನ್ನು ನೀಡುತ್ತದೆ. ಇದರಿಂದಾಗಿ ವೈಜ್ಞಾನಿಕವಾಗಿ ಪರಿಶಿಷ್ಟ ಜಾತಿಗಳ ಒಳ ಮೀಸಲಾತಿಯ ವರ್ಗೀಕರಣಕ್ಕಾಗಿ ಅನುಕೂಲಕರವಾಗಲಿದೆ.

ಸಮೀಕ್ಷೆಯನ್ನು ಕೈಗೊಳ್ಳಲು ಮೈಬೈಲ್ ಆಪ್ ಬೆಳಿಗ್ಗೆ 6:30 ರಿಂದ ಸಂಜೆ 6:30 ರವರೆಗೆ ಎನೇಬಲ್ ಮಾಡಲಾಗಿರುತ್ತದೆ. ಸದರಿ ಅವಧಿಯಲ್ಲಿ ಗಣತಿದಾರರು ಮನೆಗಳಿಗೆ ಭೇಟಿ ನೀಡಲಿದ್ದು, ಸಾರ್ವಜನಿಕರು/ ಕುಟುಂಬದವರು ತಮ್ಮ ಜಾತಿಯ ಕುರಿತು ಮಾಹಿತಿಯನ್ನು ನೀಡಲು ಸಹಕರಿಸಿ ಸಮೀಕ್ಷೆ ಕಾರ್ಯವನ್ನು ಯಶಸ್ವಿಗೊಳಿಸಲು ಹಾಗೂ ಮನೆ–ಮನೆ ಸಮೀಕ್ಷೆ ಕೈಗೊಂಡ ಸಂದರ್ಭದಲ್ಲಿ ಮಾಹಿತಿ ಒದಗಿಸಲು ಸಾಧ್ಯವಾಗದೇ ಇರುವ ಪರಿಶಿಷ್ಟ ಜಾತಿಯ ಕುಟುಂಬದವರು ಸ್ವಯಂಪ್ರೇರಿತವಾಗಿ ವಿಶೇಷ ಶಿಬಿರಗಳಲ್ಲಿ ಭಾಗವಹಿಸಿ ಮಾಹಿತಿಯನ್ನು ಒದಗಿಸಬಹುದಾಗಿದೆ.

**ಸಹಾಯವಾಣಿ:**

ಜಿಲ್ಲಾ ಮಟ್ಟದ ಸಹಾಯವಾಣಿ ಸ್ಥಾಪಿಸತಕ್ಕದ್ದು, ನಗರ ಪ್ರದೇಶದಲ್ಲಿ ಇ–ಆಡಳಿತ ಇಲಾಖೆಯ ಡಿ.ಪಿ.ಎಂ ಗಳ ಸಹಾಯವಾಣಿಯನ್ನು ಸ್ಥಾಪಿಸಬೇಕು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಆರ್.ಡಿ.ಪಿ.ಆರ್. ಸಹಾಯವಾಣಿಯನ್ನು ಬಳಸಬಹುದು. ಇದರಲ್ಲಿ ಎಫ್.ಎ.ಕ್ಯೂ ಗಳನ್ನು ತಯಾರಿಸಲಾಗುವುದು ಹಾಗೂ ಎಫ್.ಎ.ಕ್ಯೂಗಳಲ್ಲಿರುವ ಪ್ರಶ್ನೆಗಳಿಗೆ ಮಾತ್ರ ಉತ್ತರ ನೀಡಲಾಗುವುದು.

ರಾಜ್ಯಮಟ್ಟದ ಸಹಾಯವಾಣಿ ಸಂಖ್ಯೆ: 9481359000 ಈ ಸಹಾಯವಾಣಿ ಈಗಾಗಲೇ ಚಾಲ್ತಿಯಲ್ಲಿರುತ್ತದೆ. ಇದಲ್ಲದೆ ಇತರೆ ಯಾವುದೇ ಸಂದೇಹಗಳಿದ್ದಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಅಥವಾ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ರವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಮುಚ್ಚು ಹರಾಜು ಕಟ್ಟೆ ಕಾಮಗಾರಿಗೆ ಭೂಮಿ ಪೂಜೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 14–ಯಾದಗಿರಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ರೈತರ ಹಾಗೂ ವರ್ತಕರ ಉತ್ಪನ್ನಗಳು ಮಳೆಯಿಂದ ಬಿಸಿಲಿನಿಂದ ಹಾಳಾಗದಂತೆ ರಕ್ಷಣೆ ಮಾಡಲು ಆರ್ ಐ ಡಿ ಎಫ್ ಯೋಜನೆ 29 ಅಡಿಯಲ್ಲಿ ಮುಚ್ಚು ಹರಾಜು ಕಟ್ಟೆ ಕಾಮಗಾರಿಯನ್ನು 2.5 ಕೋಟಿ ವೆಚ್ಚದಲ್ಲಿ ಕೈಗೆತ್ತಿಕೊಂಡು ಭೂಮಿಪೂಜೆ ಕಾರ್ಯಕ್ರಮವನ್ನು ಯಾದಗಿರಿ ಮತಕ್ಷೇತ್ರದ ಮಾನ್ಯ ಶಾಸಕರಾದ ಶ್ರೀ ಚೆನ್ನಾರೆಡ್ಡಿ ಗೌಡ, ತುನ್ನೂರ ಅವರು 25ರ ಮೇ 13ರ ಮಂಗಳವಾರ ರಂದು ಎ ಬ್ಲಾಕ್ ರಸ್ತೆಯಲ್ಲಿ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ಯಾದಗಿರಿ ಕೃಷಿ ಉತ್ಪನ್ನ ಮಾರುಕಟ್ಟೆಯ ಪ್ರಾಂಗಣದಲ್ಲಿ ರೈತರೂ ಬೆಳೆದಂತ ಕೃಷಿ ಉತ್ಪನ್ನಗಳಿಗೆ ಉತ್ತಮ ಸ್ಪರ್ಧಾತ್ಮಕ ದರ ದೊರಕಿಸಿಕೊಡಲು ಎಪಿಎಂಸಿ ವತಿಯಿಂದ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸಿಸಿ ರಸ್ತೆ, ಚರಂಡಿ, ದಾರಿದೀಪ ಕುಡಿಯುವ ನೀರು ವಿದ್ಯುತ್ ಕಂಬ ಇನ್ನು ಹತ್ತು ಹಲವು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಕ್ರಿಯಾಯೋಜನೆಯನ್ನು ತಯಾರಿಸಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.

ಎಪಿಎಂಸಿ ವರ್ತಕರ ಮತ್ತು ರೈತರ ಉಪಯೋಗಕ್ಕಾಗಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಯಾವುದೇ ತರಹದ ಸೌಲತ್ತುಗಳನ್ನು ಬೇಕಾದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಒದಗಿಸಿಕೊಡಲಾಗುವುದೆಂದು ತಿಳಿಸಿದರು ಹಾಗೂ ವರ್ತಕರ ಯಾವುದೇ ಕುಂದುಕೊರತೆಗಳಿಗೆ ಸದಾ ನಾನು ಸ್ಪಂದಿಸುತ್ತೇನೆ ಯಾವುದೇ ಸಮಸ್ಯೆಗಳಿದ್ದರೂ ನನ್ನನ್ನು ನೇರವಾಗಿ ಸಂಪರ್ಕಿಸಬಹುದು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಸಮಿತಿಯ ಕಾರ್ಯದರ್ಶಿ ಶಿವಕುಮಾರ ದೇಸಾಯಿ ಕಾರ್ಯನಿರ್ವಾಹಕ ಅಭಿಯಂತರರು ಶ್ರೀ ಎಸ್ ಎಸ್ ಜಾಗೀರ್ದಾರ್ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ವಾಗ್ಮೊರೆ ಕಿರಿಯ ಅಭಿಯಂತರರು ರಾಕೇಶ್ ಸಹಾಯಕ ಕಾರ್ಯದರ್ಶಿ ರಿಯಾಜುದ್ದೀನ್ ಅನ್ಸಾರಿ ವರ್ತಕರ ಸಂಘದ ಅಧ್ಯಕ್ಷರಾದ ಶ್ರೀ ಸೋಮನಾಥ ಜೈನ ಬಾಬು ಸೇಟ್ ದೋಖಾ, ದಿನೇಶ್ ಕುಮಾರ್ ಧೋಖಾ, ವಿಶ್ವನಾಥರೆಡ್ಡಿ ಜೋಳದಡಗಿ, ವಿನೋದಕುಮಾರ್ ಭಂಡಾರಿ, ಮಲ್ಲಣ್ಣಗೌಡ ಬಿಲ್ಹಾರ್ ವೆಂಕಟ್ ರೆಡ್ಡಿ ತಂಗಡಗಿ, ಮಲ್ಲಣ್ಣ ಮುಂಡರಗಿ, ರವಿಶಂಕರ್ ಕಂದಕೂರ, ಬಸವಂತರಾಯಗೌಡ ಮಲ್ಹಾರ ಗುತ್ತಿಗೆದಾರರಾದ ಮೈನುದ್ದೀನ್ ಇನ್ನಿತರರು ಉಪಸ್ಥಿತರಿದ್ದರು.

## ಮೇ 17 ರಂದು ಪ್ರತಿಷ್ಠಿತ ಶಾಲೆಗಳ 6ನೇ ತರಗತಿ ಪರೀಕ್ಷೆ: ಪ್ರವೇಶ ಪತ್ರ ಪಡೆಯಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳ ಪ್ರತಿಷ್ಠಿತ ಶಾಲೆ ಶಾಲೆಗಳಲ್ಲಿ 6ನೇ ತರಗತಿಯ ಪ್ರವೇಶ ಪರೀಕ್ಷೆ ಮೇ 17 ರಂದು ನಡೆಯಲಿದ್ದು, ಪ್ರವೇಶ ಪತ್ರ ಪಡೆದುಕೊಳ್ಳುವಂತೆ ಸಮಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಕೊಪ್ಪಳ ಸಮಾಜ ಕಲ್ಯಾಣ ಇಲಾಖೆಯಿಂದ ನಿರ್ವಹಣೆಯಾಗುತ್ತಿರುವ ಜಿಲ್ಲೆಯ ಪ್ರತಿಷ್ಠಿತ ಶಾಲೆಗಳಲ್ಲಿ 6ನೇ ತರಗತಿಯ ಪ್ರವೇಶ ಪರೀಕ್ಷೆಯನ್ನು ಮೇ 17 ರಂದು ಪ್ರವೇಶ ಪರೀಕ್ಷೆಯನ್ನು ನಿಗದಿಪಡಿಸಲಾಗಿದೆ. ಪ್ರವೇಶಕ್ಕಾಗಿ ಅರ್ಜಿ ಸಲ್ಲಿಸಿದ ಅರ್ಹ ವಿದ್ಯಾರ್ಥಿಗಳು ಆಯಾ ತಾಲೂಕಿನ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಮತ್ತು ಪರಿಶಿಷ್ಟ ವರ್ಗಳ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಛೇರಿಯ ಸಮಯದಲ್ಲಿ ಪ್ರವೇಶ ಪತ್ರ ಪಡೆಯಬಹುದು. ಅಥವಾ https://swdservices.karnataka.gov.in (ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಮಾತ್ರ) ಲಿಂಕ್‌ನಲ್ಲಿ ಡೌನ್‌ಲೋಡ್ ಮಾಡಿಕೊಳ್ಳಬಹುದು ಎಂದು ಕೊಪ್ಪಳ ಜಿಲ್ಲೆಯ ಸಮಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರ ಪ್ರಕಟಣೆಯು ತಿಳಿಸಿದೆ.

# ಭಾರತ ಸೈನ್ಯದ ಶಕ್ತಿ ಜಗತ್ತಿನ ಮುಂದೆ ಅನಾವರಣ



ಒಂದೇ ಒಂದು ಪಹಲ್ಗಾಮಂ ದಾಳಿ ಮಾಡಿ ಪಾಕಿಸ್ತಾನ ಭಾರತದ ಮುಂದೆ ಪದರುಗುಟ್ಟುವಂತೆ ಮಾಡಿತು ಎನ್ನುವುದು ಜಗತ್ತು ನೋಡಿದೆ ಭಾರತೀಯ ಸೈನ್ಯದ ಶಕ್ತಿಯ ಅನಾವರಣ ಮಾಡಲು ಪಾಕಿಸ್ತಾನವೇ ಉಗ್ರರ ಮೂಲಕ ಕಾಲು ಕೆದರಿ ಜಗಳಕ್ಕೆ ಬಂದಂತೆ ಪಹಲ್ಗಾಮಂ ದಾಳಿಯ ಮೂಲಕ ಅವಕಾಶ ಮಾಡಿಕೊಟ್ಟಂತಾಯಿತು ಪಾಕಿಸ್ತಾನಕ್ಕೆ ಭಾರತ ಎಷ್ಟೇ ಬುದ್ಧಿವಾದ ಕಿವಿ ಮಾತು ಹೇಳಿದರು ತನ್ನ ಹಳೆಯ ಚಾಳಿ ಬಿಡದ ಪಾಕಿಸ್ತಾನ ಉಗ್ರರ ಮೂಲಕ ಕಾಶ್ಮೀರದ ಪಾಹಲ್ಗಾಮಂದಲ್ಲಿ ಭಾರತೀಯ ನಾಗರಿಕರ ಹತ್ಯೆ ಮಾಡಿದ ಪ್ರತ್ಯುತ್ತರವಾಗಿ ಅನುಭವಿಸಬಾರದನ್ನು ಅನುಭವಿಸಿದ ಪಾಕಿಸ್ತಾನಕ್ಕೆ ಬುದ್ಧಿ ಯಾವತ್ತು ಬರಲೇ ಇಲ್ಲ. ಭಾರತಕ್ಕೆ ಮಾತ್ರ ಭಾರತದ ಮಿಲಿಟರಿ ಪಡೆಯ ಶಕ್ತಿ ಎಂಥಾದ್ದು ಎನ್ನುವುದು ಸ್ವದೇಶಿ ಕ್ಷಿಪಣಿಗಳ ಮೂಲಕ ಭಾರತ ಯುದ್ಧದ ಮೂಲಕ ಏನೆಲ್ಲ ಮಾಡಬಹುದು ಎನ್ನುವುದನ್ನು ಜಗತ್ತಿಗೆ ತೋರಿಸಿಕೊಡಲು ಅವಕಾಶ ಮಾಡಿಕೊಟ್ಟಂತಾಯಿತು.

ಭಾರತೀಯ ಮಿಲಟರಿಯ ಈ ಗುರಿ ಸಾಧನೆಯನ್ನು ಆತ್ಮನಿರ್ಬಾಯರ ಶಕ್ತಿ ಅನಾವರಣ ಎಂದು ಬಣ್ಣಿಸಲಾಗಿದೆ ಆಪರೇಷನ್ ಸಿಂಧೂರದ ಮೂಲಕ ಪಾಕಿಸ್ತಾನಕ್ಕೆ ತಕ್ಕ ಉತ್ತರ ನೀಡುವಲ್ಲಿ ಭಾರತೀಯ ಮಿಲಿಟರಿ ಪಡೆ ಯಶಸ್ವಿ ಯಾಗಿದ್ದು ಹೆಚ್ಚು ಸ್ವದೇಶಿ ಕ್ಷಿಪಣಿಗಳನ್ನು ಬಳಸಿ ಪಾಕಿಸ್ತಾನ ಉಡೀಸ್ ಮಾಡಿದ ಸ್ವದೇಶಿ ಶಸ್ತ್ರಾಸ್ತ್ರಗಳಿಗೆ ಜಗತ್ತಿನಲ್ಲಿ ಭಾರಿ ಬೇಡಿಕೆ ಬಂದಿದೆ ಭಾರತವನ್ನು ಜಗತ್ತಿನ ತುತ್ತ ತುದಿಯಲ್ಲಿ ನಿಲ್ಲುವಂತೆ ಮಾಡಿದೆ ನಮ್ಮಲ್ಲೇ ತಯಾರಾದ ಶಸ್ತ್ರಾಸ್ತ್ರಗಳ ಕ್ಷಿಪಣಿ ಚೀನಾದ ಕ್ಷಿಪಣಿಗಳನ್ನು ಹೊಡೆದು ಉರುಳಿಸಿದ್ದು ಭಾರತ ಜಗತ್ತಿನ ಮುಂದೆ ಸೈ ಎನಿಸಿಕೊಂಡು ಚೀನಾ ನಿರ್ಮಿತ ಕ್ಷಿಪಣಿಗಳಿಗೆ ಟೀಕೆಗಳ ಸುರಿಮಳೆ ಗೈದಿದೆ ಪಾಕಿಸ್ತಾನ ಜಗತ್ತಿನ ಮುಂದೆ ಬೆತ್ತಲಾಗಿ ಚೀನಾ ಟರ್ಕಿ ರೆಪನ್ ಗಳಿಗಿಂತ ಭಾರತದ ರೆಪನ್ ಗಳು ತುಂಬಾ ಸ್ಟ್ರಾಂಗ್ ಎಂದು ಸಾಬೀತಾಗಿದ್ದು ಭಾರತದ ಶಸ್ತ್ರಾಸ್ತ್ರಗಳಿಗೆ ಫುಲ್ ಡಿಮ್ಯಾಂಡ್ ಬಂದಿದೆ ಭಾರತ ಮೊದಲಿನಂತೆ ಇಲ್ಲ ಎನ್ನುವುದು ಮಿಲಿಟರಿ ಮೂಲಕವೇ ಇಡೀ ಜಗತ್ತಿಗೆ ಸಾರಿದೆ

ಪಹಲ್ಗಾಮಂ ದಾಳಿಯ ನಂತರ ಪಾಪಿ ಪಾಕಿಸ್ತಾನದ ಮೇಲೆ ಅತ್ಯಂತ ನಿಖರವಾಗಿ ದಾಳಿ ನಡೆಸಿದ ಭಾರತೀಯ ಸೇನೆಕ್ಕೆ ಸ್ವದೇಶಿ ನಿರ್ಮಿತ ನಾವಿಕ ದಿಕ್ಸೂಚಿ ವ್ಯವಸ್ಥೆ ಬೆನ್ನೆಲುಬಾಗಿ ನಿಂತಿದೆ..

ಈವರೆಗೂ ಅಮೆರಿಕ ರಷ್ಯಾ ಇಸ್ರೇಲ್ ಚೀನಾದ ಕ್ಷಿಪಣಿ ರೆಫೆಲ್ ಗಳನ್ನು ಖರೀದಿ ಮಾಡುತ್ತಿದ್ದ ವಿದೇಶಗಳು ಪಾಕಿಸ್ತಾನದ ಮೇಲೆ ನಡೆಸಿದ ಆಪರೇಷನ್ ಸಿಂಧೂರ ದಾಳಿಯ ನಂತರ ಎಲ್ಲ ರಾಷ್ಟ್ರಗಳು ಭಾರತೀಯ ಕ್ಷಿಪಣಿಗಳತ್ತ ಮುಖ ಮಾಡುತ್ತಿವೆ ಈ ಮೂಲಕ ಭಾರತ ರಕ್ಷಣಾ ವಲಯದಲ್ಲಿ ಮಹತ್ವದ ಸಾಧನೆ ಮಾಡಿದೆ ಎನ್ನುವುದನ್ನು ಜಗತ್ತಿಗೆ ತೋರಿಸಿಕೊಟ್ಟಿದೆ...

ಸ್ವದೇಶಿ ಕ್ಷಿಪಣಿ ಶಸ್ತ್ರಾಸ್ತ್ರಗಳನ್ನು ಬಳಸಿ ಪಾಕಿಸ್ತಾನದ ದೇಶದೊಳಗೆ ನುಗ್ಗಿ ತನ್ನೆಲ್ಲ ಅಸ್ತ್ರಗಳ ಮೂಲಕ ಪಾಕಿಸ್ತಾನವನ್ನು ಜಗತ್ತಿನ ಮುಂದೆ ಬೆತ್ತಲಾಗಿ ನಿಲ್ಲುವಂತೆ ಮಾಡಿದ್ದರ ಪರಿಣಾಮವಾಗಿ ಇವತ್ತು ಭಾರತ ದೇಶ ಮಿಲಿಟರಿ ಕಾರ್ಯಾಚರಣೆಯಲ್ಲಿ ಜಗತ್ತಿನಲ್ಲಿಯೇ ಬಲಶಾಲಿ ಸೈನ್ಯ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ..

ಪಾಕಿಸ್ತಾನದಿಂದ ಹಾರಿಬಂದ ಚೀನಾ ಟರ್ಕಿಯ ಹಲವು ದ್ರೋಣ ಕ್ಯಾಮರಾ ಗಳನ್ನು ಇದ್ದಲ್ಲಿಗೆ ಹೋಗಿ ಫಿನಿಷ್ ಮಾಡಿದ್ದರ ಪರಿಣಾಮವಾಗಿ ಇವತ್ತು ಭಾರತೀಯ ಸೈನ್ಯ ಬಲಾಢ್ಯವಾಗಿದೆ ಮತ್ತು ವಿರೋಧಿಗಳನ್ನು ಗುರುತಿಸಿ ಹೊಡೆಯುವ ಶಕ್ತಿ ಸಾಮರ್ಥ್ಯ ಭಾರತೀಯ ಮಿಲಿಟರಿ ಪಡೆಗೆ ಇದೆ ಎನ್ನುವುದನ್ನು ತೋರಿಸಿಕೊಟ್ಟಿದೆ.

ಇದರಿಂದ ಆತಂಕಗೊಂಡ ಪಾಕಿಸ್ತಾನ ಭಾರತ–ಕ್ಕೆ ಶರಣಾಯಿತು ತನ್ನ ಕುಚೇಷ್ಟೆ ಬುದ್ಧಿಯನ್ನು ಬುಡಲಿಲ್ಲ ಎನ್ನುವುದು ಮತ್ತೊಮ್ಮೆ ಜಗತ್ತಿಗೆ ಸಾಬೀತು ಮಾಡಿದೆ.

ಪಾಕಿಸ್ತಾನವನ್ನು ಉಡಿಸ್ ಮಾಡುವ ಪ್ರಾರಂಭದಲ್ಲಿಯೇ ಭಾರತದ ಮುಂದೆ ಮಂಡಿ ಊರಿ ಕುಂತ ಪಾಕಿಸ್ತಾನಕ್ಕೆ ಬುದ್ಧಿ ಕಲಿಸಿದ್ದು ಮಾತ್ರ ಸ್ವದೇಶಿ ನಿರ್ಮಿತ ಕ್ಷಿಪಣಿ ಮತ್ತು ಶಸ್ತ್ರಾಸ್ತ್ರಗಳು ಎನ್ನುವುದು ಜಗತ್ತಿಗೆ ಸಾಬೀತಾಯಿತು.

ಭಾರತದ ಮಿಲಿಟರಿ ಸೇನೆಯನ್ನು ಜಗತ್ತಿನ ಮುಂದೆ ತಲೆಯೆತ್ತಿ ಮುನ್ನಡೆಯುವಂತ ಮಾಡಿದ ಕ್ಷಿಪಣಿಗಳೆಂದರೆ.

*ಕೈಸ್ಟೈಕರ್ ಆತ್ಮಹುತಿ ದ್ರೋಣ–*ಇದು ಐದರಿಂದ ಹತ್ತು ಕೆಜಿ ಬಾಂಬುಗಳನ್ನು ಹೊತ್ತುಯ್ಯುವ ಸ್ವದೇಶಿ ನಿರ್ಮಿತ ಕ್ಷಿಪಣಿಯಾಗಿದ್ದು ಉಗ್ರರ ನೆಲೆಗಳನ್ನು ಹುಡುಕಿ ಹುಡುಕಿ ಅಟ್ಯಾಕ್ ಮಾಡುವ ಶಕ್ತಿ ಹೊಂದಿದೆ ಇದು ತಯಾರಾಗಿದ್ದು ಬೆಂಗಳೂರಿನಲ್ಲಿ ಎನ್ನುವುದು ಮತ್ತೊಂದು ವಿಶೇಷ.

*ಡಿ 4 ???ಂಟಿ ಡ್ರೋನ್ ಸಿಸ್ಟಮ್* – ಡಿಯರ್ ಡಿಯೋ ಸಂಸ್ಥೆ ತಯಾರಿಸಿದ ಈ ಕ್ಷಿಪಣಿಯನ್ನು ಭಾರತದ ಐರನ್ ದ್ರೋಣ ಎಂದು ಕರೆಯಲ್ಪಡುತ್ತದೆ ವಿರೋಧಿಗಳಿಂದ ಬರುವ ದ್ರೋಣಗಳನ್ನ ಪತ್ತೆ ಹಚ್ಚಿ ಅವುಗಳನ್ನು ಅಲ್ಲಿಯೇ ಮಟಾಶ್ ಮಾಡುವ ಶಕ್ತಿ ಹೊಂದಿರುವ ವಿಶೇಷವಾದಂತಹ ಕ್ಷಿಪಣಿ ಭಾರತದ್ದು ಎನ್ನುವುದು ನಮಗೆ ಹೆಮ್ಮೆಪಡುವಂತದ್ದು.

*ಆಕಾಶ ವಾಯು ರಕ್ಷಣೆ ವ್ಯವಸ್ಥೆ* – ಈ ಕ್ಷಿಪಣಿಯು ಭಾರತದ ಎಲೆಕ್ಟ್ರಾನಿಕ್ ವ್ಯವಸ್ಥೆಯಿಂದ ತಯಾರಾದಂತಹ ಅತ್ಯಾಧುನಿಕ ಕ್ಷಿಪಣಿಯಾಗಿದ್ದು ವಿರೋಧಿಗಳು ಎಷ್ಟೇ ದೂರದ ಅಂತರದಲ್ಲಿದ್ದರೂ ಅವರ ಮೇಲೆ ಹೋಗಿ ಬಾಂಬುಗಳನ್ನು ಹಾಕುವ ವಿಶೇಷವಾದಂತಹ ಶಕ್ತಿಯನ್ನು ಹೊಂದಿದೆ.

*ಬರಾಕ್ 8 ಎಂ ಆರ್ ಎಸ್ ಎ ಎಂ* – ಇದು ಭಾರತದಲ್ಲಿ ಲಭ್ಯವಿರುವ ಅತ್ಯಂತ ಶಕ್ತಿಶಾಲಿ ಕ್ಷಿಪಣಿಯಾಗಿದ್ದು ಪ್ರಾರಂಭದಲ್ಲಿ ಇದನ್ನು ಡಿಆರ್‌ಡಿಓ ಮತ್ತು ಇಸ್ರೇಲ್ ಜಂಟಿ–ಯಾಗಿ ತಯಾರಿಸಿದ್ದವು ನಂತರ ಭಾರತೀಯ ಡಿ ಆರ್ ಡಿ ಓ ತನ್ನ ಹೊಸ ತಂತ್ರಜ್ಞಾನದ ಮೂಲಕ ವಿಶೇಷವಾದಂತಹ ಮತ್ತು ಅತ್ಯಾಧುನಿಕ ಶೈಲಿಯ ಕ್ಷಿಪಣಿ ಇದಾಗಿದ್ದು ವೇಗದಲ್ಲಿ ತನ್ನ ಕಾರ್ಯಾಚರಣೆಯನ್ನು ಮಾಡುವ ಶಕ್ತಿ ಹೊಂದಿದೆ.

*ಬ್ರ ಹೊಸ ಕ್ಷಿಪಣಿ* – ದೇಸಿ ನಿರ್ಮಿತ ಈ ಕ್ಷಿಪಣಿಯೂ ರಷ್ಯಾ ಭಾರತ ಜಂಟಿಯಾಗಿ ತಯಾರಿಸಿದ್ದು ಭಾರತೀಯ ವಿಶೇಷ ಕ್ಷಿಪಣಿ ಇದಾಗಿದೆ.

*ಎಲ್ 70 ???ಂಟಿ ಏರ್ ಕ್ರಾಫ್ಟಗನ್* – ಯುದ್ಧ ಭೂಮಿಯಲ್ಲಿ ಎಂತೆ ಶಕ್ತಿಶಾಲಿ ಇದ್ದ ಬಾಂಬುಗಳನ್ನು ಹೊಡೆದುರುಳಿಸುವ ರೆಡಾರ್ ಇದಾಗಿದ್ದು ಸ್ವೀಡನ್ ಮತ್ತು ಭಾರತದ ನಡುವಿನ ಒಂದು ಅತ್ತಾಧುನಿಕ ಕ್ಷಿಪಣಿ ಇದಾಗಿದ್ದು ಆಗಸದಲ್ಲಿ ಬರುವ ದ್ರೋಣ ಕ್ಯಾಮರಗಳನ್ನು ಪತ್ತೆ ಹಚ್ಚಿ ಹುಡುಕಿ ಪೈಂಟ್ ಔಟ್ ಮಾಡಿ ಹೊಡೆಯುವಂತೆ ಶಕ್ತಿ ಹೊಂದಿದೆ.

*ಪ್ರಿಸಿಷನ್ ಸ್ಟ್ರೈಕ್ ವೇಫನ್ ಸಿಸ್ಟಮ್* – ಪಿ ಎಸ್ ಡಬ್ಲ್ಯೂ ಎಸ್ ಮತ್ತು ಜಿಪಿಎಸ್ ಹೊಂದಿರುವ ವೆಪನ್ ರೆಡಾರ ಜಿಪಿಎಸ್ ಮೂಲಕ ಪತ್ತೆ ಹಚ್ಚಿ ವಿರೋಧಿಗಳು ಬಿಡುವ ದ್ರೋಣ ಕ್ಯಾಮರಗಳನ್ನು ಮತ್ತು ಕ್ಷಿಪಣಿಗಳನ್ನು ಹೊಡೆದುರುಳಿಸುವ ಸಾಮರ್ಥ್ಯ ಹೊಂದಿದೆ.

*ಖಿಂಂಘ ಕ್ಷಿಪಣಿ ವ್ಯವಸ್ಥೆ* – ಇದು ಕೂಡ ಭಾರತೀಯ ಬಿ ಆರ್ ಡಿ ಓ ಸಂಸ್ಥೆ ತಯಾರಿಕೆಯ ಅತ್ಯಾಧುನಿಕ ಅಸ್ತ್ರವಾಗಿದ್ದು ವಿರೋಧಿಗಳನ್ನು ಬಗ್ಗು ಬಡೆಯಲು ತನ್ನದೇ ಅತ್ತಾಧುನಿಕ ಸೌಲಭ್ಯಗಳು ಉಪಯೋಗಿಸಿಕೊಂಡು ವಿರೋಧಿಗಳಿಗೆ ಸಿಂಹ ಸ್ವಪ್ನವಾಗುತ್ತದೆ.

ಇಂಥ ವಿಶೇಷ ಹೊಂದಿದ ಸ್ವದೇಶಿ ಕ್ಷಿಪಣಿಗಳ ಜೊತೆಗೆ ರಷ್ಯಾ ಮತ್ತು ಭಾರತದ ಜಂಟಿಯಾಗಿ ತಯಾರಾಗಿರುವ ಎಸ್ 400 ಕ್ಷಿಪಣಿಯು ಇಡೀ ಯುದ್ಧ ಭೂಮಿಯನ್ನೇ ಗೆಲ್ಲುವಂತ ಎಲ್ಲೇ ಬಾಂಬುಗಳು ರೇಡರ್ಗಳು ದ್ರೋಣ ಕ್ಯಾಮೆರಾ ಗಳನ್ನು ಪತ್ತೆ ಹಚ್ಚಿ ಹುಡುಕಿ ಹುಡುಕಿ ಇದ್ದಲ್ಲಿಗೆ ಹೋಗಿ ಒಡೆಯುವ ಹತ್ತಾಧುನಿಕ ತಂತ್ರಜ್ಞಾನ ಇದಾಗಿದ್ದು ಭಾರತ ಸರ್ಕಾರವು ರಷ್ಯಾದಿಂದ ಸುಮಾರು 48000 ಕೋಟಿ ರೂಪಾಯಿಗಳನ್ನು ಖರ್ಚು ಮಾಡಿ ಕ್ಷಿಪಣಿಯನ್ನು ಭಾರತ ಖರೀದಿ ಮಾಡಿದ್ದು ಇನ್ನೇನು ಕೆಲವೇ ಕೆಲವು ದಿನಗಳಲ್ಲಿ ಮೋದಿ ಮತ್ತು ರಷ್ಯಾದ ಅಧ್ಯಕ್ಷ ಪುಟಿನ್ ಅವರ ಮಧ್ಯೆ ಆಗಿರುವ ಒಡಂಬಕೆಯ ಪ್ರಕಾರ ಎಸ್ 500 ಕ್ಷಿಪಣಿಯು ಕೆಲವೇ ದಿನಗಳಲ್ಲಿ ಭಾರತದ ಯುದ್ಧಭೂಮಿಗೆ ಆಗಮಿಸಲಿದ್ದು ಎಂಥ ವಿರೋಧಿ ದೇಶಗಳನ್ನು ಬಲಿಷ್ಠದೇಶವನ್ನು ಬಗ್ಗು ಬಡೆಯುವ ಸಾಮರ್ಥ್ಯ ಎಸ್ ಫೈವ್ ಹಂಡ್ರೆಡ್ ಕ್ಷಿಪಣಿಗೆ ಇರುವುದರಿಂದ ಭಾರತ ಮುಂದೆಂದು ಎಷ್ಟೇ ವಿರೋಧಿಗಳಿಂದ ದಾಳಿಯನ್ನು ಮಾಡಿದರು ಎದುರಿಸುವ ಸಾಮರ್ಥ್ಯವನ್ನು ಹೊಂದಿದೆ ಎನ್ನುವುದು ಭಾರತೀಯರಿಗೆ ಹೆಮ್ಮೆ ಪಡುವ ವಿಷಯವಾಗಿದ್ದು ಎಸ್ 500 ಇದ್ದ ಸ್ಥಳದಿಂದ 600 ಕಿಲೋಮೀಟರ್ ವರೆಗೆ ಬರುವ ಎಲ್ಲಾ ಕ್ಷಿಪಣಿ ಬಾಂಬುಗಳನ್ನು ಮತ್ತು ದ್ರೋಣ ಕ್ಯಾಮೆರಾ ಗಳನ್ನು ಸಾಮರ್ಥ್ಯ ಹೊಂದಿರುವುದರಿಂದ ಭಾರತೀಯ ಸೈನ್ಯದ ಮೇಲೆ ದಾಳಿ ಮಾಡುವ ವಿರೋಧಿಗಳು ಈಗಾಗಲೇ ಪತರು ಹುಟ್ಟಿದಂತೆ ಮುಂದಿನ ದಿನಮಾನದಲ್ಲಿ ಭಾರತವನ್ನು ಯಾರಿಂದಲೂ ಏನು ಮಾಡಲಿಕ್ಕೆ ಸಾಧ್ಯವಿಲ್ಲ ಎನ್ನುವ ಸಂದೇಶವನ್ನು ಕ್ಷಿಪಣಿ ಮೂಲಕ ಈಗಾಗಲೇ ಭಾರತೀಯ ಸೇನೆ ವಿರೋಧಿಗಳಿಗೆ ವಾರ್ನಿಂಗ್ ಬೆಲ್ ಬಾರಿಸಿದೆ

ಇಷ್ಟೆಲ್ಲ ಭಾರತದ ಕ್ಷಿಪಣಿಗಳು ಮೂಲಕ ಪಾಕಿಸ್ತಾನವನ್ನು ಚೀನಾ ಟರ್ಕಿ ನಿರ್ಮಿತ ಭಾರತೀಯರ ಮೇಲೆ ದಾಳಿ ಮಾಡಲು ಬಂದ ದ್ರೋಣ ಕ್ಯಾಮರಾ ತನ್ನ ನಿರ್ದಿಷ್ಟಗುರಿ ಮುಟ್ಟುವಕ್ಕಿಂತ ಮುಂಚೇನೆ ಹೊಡೆದು ಉರುಳಿಸಿದ ಭಾರತೀಯ ಅತ್ಯಾಧುನಿಕ ಕ್ಷಿಪಣಿ ಮತ್ತು ವೇಪನ್ ಗಳಿಂದ ಇಡೀ ಜಗತ್ತು ದಂಗಾಗಿದೆ.

ಸತತ ಮೂರು ದಿನ ಭಾರತೀಯ ದಾಳಿಯನ್ನು ಕಂಡ ಜಗತ್ತು ಬೆರಗಾಗಿದ್ದು ವಿರೋಧಿ ಪಾಕಿಸ್ತಾನ ಎಷ್ಟೇ ಕುತಂತ್ರಿ ಬುದ್ಧಿಯನ್ನು ತೋರಿಸಿದರು ಭಾರತೀಯ ಸೇನೆ ಮಾತ್ರ ಪಾಕಿಸ್ತಾನದ ನಾಗರಿಕರಿಗೂ ಹಾಗೂ ಸಾರ್ವಜನಿಕರಿಗೂ ತೊಂದರೆಯಾಗದ ರೀತಿಯಲ್ಲಿ ಉಗ್ರರು ಅಡಗಿರುವ ನೆಲೆಗಳನ್ನು ಮತ್ತು ಉಗ್ರರು ತಯಾರಿಸಿ ಇಟ್ಟಿದ್ದ ಕ್ಷಿಪಣಿಗಳು ಬಾಂಬುಗಳ ಗುಡನಗಳನ್ನು ಹುಡುಕಿ ಹುಡುಕಿ ಹೊಡೆದಿರುವುದನ್ನು ಕಂಡ ಹಲವು ವಿದೇಶಗಳು ಭಾರತದ ಕಾರ್ಯವೈಖರಿಯನ್ನು ಮೆಚ್ಚಿ ಹೊಗಳುತ್ತಿವೆ ಪಾಕಿಸ್ತಾನ ಭಾರತೀಯರ ನಾಗರಿಕರ ಕೊಲ್ಲುವ ಉದ್ದೇಶ ಇಟ್ಟುಕೊಂಡು ದಾಳಿ ಮಾಡಿದಾಗಲೂ ಭಾರತೀಯ ಸೇನೆ ಮಾತ್ರ ಉಗ್ರರನ್ನೆ ಟಾರ್ಗೆಟ್ ಮಾಡಿ ಹುಡುಕಿ ಹುಡುಕಿ ಹೊಡೆದಿರುವುದು ಸ್ವತಃ ಪಾಕಿಸ್ತಾನಕ್ಕೆ ಉಗ್ರರಿಗೆ ನಾವು ಯಾವತ್ತೂ ನೆಲೆ ಕೊಡಬಾರದು ಮತ್ತು ಉಗ್ರರನ್ನು ನಾವು ಯಾವತ್ತು ಪೋಷಿಸಬಾರದು ಎನ್ನುವ ಪಾಠವನ್ನು ಕಲಿತಿದ್ದಾರೆ ಆದರೂ ಪಾಕಿಸ್ತಾನ ಯಾವತ್ತೂ ತನ್ನ ಕುತಂತ್ರ ಬುದ್ಧಿಯನ್ನು ಬಿಡುವುದಿಲ್ಲ ಎನ್ನುವುದು ಜಗತ್ತಿಗೆ ಅರುವಾಗಿದೆ ಆದರೆ ಭಾರತೀಯ ಉದ್ದೇಶ ಮಾತ್ರ ಭಯೋತ್ಪಾದನೆಯನ್ನು ಒಟ್ಟಡಗಿಸುವ ನಿಟ್ಟಿನಲ್ಲಿ ಭಯೋತ್ಪಾದಕರ ನೆಲೆಗಳನ್ನೇ ಹುಡುಕಿ ಹುಡುಕಿ ಹೊಡೆದಿರುವುದಕ್ಕೆ ಭಾರತೀಯ ಮಿಲಿಟರಿಪಡೆಯ ಬಗ್ಗೆ ಜಗತ್ತಿನಾದ್ಯಂತ ಪ್ರಶಂಸೆ ವ್ಯಕ್ತವಾಗಿದೆ..

ಇಷ್ಟೆಲ್ಲ ಭಾರತದ ಶಕ್ತಿ ಅನಾವರಣಗೊಳ್ಳಲು ಉಮ್ಮಸ್ಸು ತುಂಬಿರುವದೇ ಅಜಿತ್ ದೋಬಲ್ ಎನ್ನುವ ಮಾಂತ್ರಿಕ ಶಕ್ತಿಯಿಂದ ಎನ್ನುವುದು ಈಗಾಗಲೇ ಜಗತ್ತಿಗೆ ಸಾಬೀತಾಗಿದ್ದು ಎಲ್ಲ ಅತ್ಯಾಧುನಿಕ ಕ್ಷಿಪಣಿಗಳನ್ನು ಮತ್ತು ತಂತ್ರಜ್ಞಾನವನ್ನು ಮತ್ತು ರೆಡಾರ್ ಬಾಂಬುಗಳನ್ನು ಮತ್ತು ದ್ರೋಣ ಕ್ಯಾಮೆರಾಗಳ ಮೂಲಕ ವಿರೋಧಿ ಗಳ ದೇಶಕ್ಕೆ ನುಗ್ಗಿ ಹೊಡೆಯುವಂತ ಸಾಮರ್ಥ್ಯ ಹೊಂದಿರುವ ಭಾರತೀಯ ಕ್ಷಿಪಣಿಗಳನ್ನು ಹಾಗೂ ಭಾರತೀಯ ಸೈನ್ಯವನ್ನು ನಾವು ಮೆಚ್ಚಲೇಬೇಕು ಇಷ್ಟೆಲ್ಲ ಪ್ರಯತ್ನ ಮಾಡಿ ಜಗತ್ತಿನಲ್ಲಿಯೇ ಅತ್ಯಾಧುನಿಕ ಯುದ್ಧದ ಶಸ್ತ್ರಾಸ್ತ್ರಗಳನ್ನು ತಯಾರಿಸಿದ ಭಾರತೀಯ ಮಿಲಿಟರಿ ಪಡೆಗೆ ನಮ್ಮದೊಂದು ಸಲಾಂ ಇರಲಿ

ವಿದೇಶಗಳಿಂದ ಖರೀದಿಸಿದ ಕ್ಷಿಪಣಿಗಳು ಶಕ್ತಿ ಒಂದೆಡೆಯಾದರೆ ಸ್ವದೇಶಿ ತಯಾರಿತ ಕ್ಷಿಪಣಿಗಳು ಮತ್ತು ವೇಪನಗಳು ಎಂತಹ ಬಲಿಷ್ಠ ವಿರೋಧಿ ಬಾಂಬ್ ಗಳನ್ನು ತಡೆಯುವ ಮತ್ತು ಹೊಡೆದುರುಳಿಸುವ ಶಕ್ತಿ ಸಾಮರ್ಥ್ಯ ಹೊಂದಿರುವುದರಿಂದ ಭಾರತದ ಮಿಲಿಟರಿ ಸೈನ್ಯವನ್ನು ಯಾವತ್ತು ಯಾರಿಂದಲೂ ಏನು ಮಾಡಲಿಕ್ಕೆ ಸಾಧ್ಯ ಇಲ್ಲ ಎನ್ನುವುದನ್ನು ಆಪರೇಷನ್‌ಸಿಂಧೂರದ ಮೂಲಕ ಈಗಾಗಲೇ ಭಾರತ ಜಗತ್ತಿಗೆ ಸಾಬೀತು ಮಾಡಿದೆ.



ಜಗದೀಶ.ಎಸ್.ಗಿರಡ್ಡಿ.
ಲೇಖಕರು. ಗೊರಬಾಳ

## ಗುಡುಗು–ಸಿಡಿಲಿನಿಂದಾಗುವ ಅನಾಹುತ ತಪ್ಪಿಸಲು ಮುನ್ನೆಚ್ಚರಿಕೆ ಸೂಚನೆ ಪಾಲಿಸಿ: ಡಿಹೆಚ್‌ಒ ಡಾ.ಯಲ್ಲಾ ರಮೇಶ್ ಬಾಬು

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ14:ಸಾಮಾನ್ಯವಾಗಿ ಆರಂಭದ ಮುಂಗಾರು ಪೂರ್ವದಲ್ಲಿಹಾಗೂಮುಂಗಾರಿನ ಮಳೆಗಾಲದಲ್ಲಿ ಕಂಡುಬರುವ ಗುಡುಗು–ಸಿಡಿಲಿನಿಂದಾಗುವ ಅಪಾಯಗಳನ್ನು ತಪ್ಪಿಸಲು ಸಾರ್ವಜನಿಕರು ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ತಿಳಿಸಿದ್ದಾರೆ.ಮೇ ತಿಂಗಳಿನಲ್ಲಿ ಕಂಡುಬರುವ ಮಳೆಗಾಲದ ಆರಂಭದ ಹಂತದಲ್ಲಿ ತೀವ್ರತರದ ಗುಡುಗು–ಸಿಡಿಲು ಕಂಡುಬರುವುದು ಸಾಮಾನ್ಯವಾಗಿದ್ದು, ಜೊತೆಗೆ ಬಿರುಸಾಗಿ ಗಾಳಿ ಸಹಿತ ಮಳೆ ಕಂಡುಬರುವುದುವಾಡಿಕೆಯಾಗಿದೆ. ಈ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ ಕಳೆದ ಕೆಲವು ದಿನಗಳಿಂದ ಗುಡುಗು ಸಿಡಿಲು ಸಹಿತ ಮಳೆ ಕಂಡುಬರುತ್ತಿದ್ದು,ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ಕ್ರಮ ವಹಿಸಬೇಕು ಎಂದು ಅವರು ತಿಳಿಸಿದ್ದಾರೆ.ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ಹೊರಡಿಸುವ ಮಾರ್ಗಸೂಚನೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆರೋಗ್ಯದ ದೃಷ್ಟಿಯಿಂದ ನೀಡುವ ಸಲಹೆಗಳನ್ನು ಅನುಸರಿಸಬೇಕು ಎಂದು ಹೇಳಿದ್ದಾರೆ.*ಅನುಸರಿಸಬೇಕಾದ ಕ್ರಮ:*ಬಯಲು ಪ್ರದೇಶಗಳಲ್ಲಿ, ಗಿಡಗಳಕೆಳಗೆಅಥವಾಕಬ್ಬಿಣದಿಂದ ಕೂಡಿರುವ ಕಟ್ಟಡ ಅಥವಾ ಶೆಡ್‌ಗಳಲ್ಲಿ ಆಶ್ರಯ ಪಡೆ–ಯದೇ ಸೂಕ್ತ ಸ್ಥಳದಲ್ಲಿ ಆಶ್ರಯ ಪಡೆಯಬೇಕು. ಇದರಿಂದ ಜೀವ ಹಾನಿ ತಪ್ಪಿಸಲು ಸಾಧ್ಯವಾಗುತ್ತದೆ. ಗುಡುಗು–ಮಿಂಚು ಬರಲಿದೆ ಎಂದು ಗೊತ್ತಾದಾಗ ಬಯಲಿನಲ್ಲಿದ್ದರೆ. ತಕ್ಷಣ ಇರುವುದರಲ್ಲಿ ತಗ್ಗು ಪ್ರದೇಶಕ್ಕೆ ಹೋಗಿ ಕುಳಿತುಕೊಳ್ಳಬೇಕು.ತಗ್ಗು ಪ್ರದೇಶ ಇಲ್ಲದೇ ಬಯಲಿನಲ್ಲಿಯೇ ಇರಬೇಕಾದರೆ ನಿಮ್ಮ ತಲೆಯನ್ನು ಮೊಣಕಾಲುಗಳ ನಡುವೆ ಹುದುಗಿಸಿಕೊಳ್ಳಬೇಕು. ಇದು



ಮಿಂಚಿನಿಂದ ಮೆದುಳಿಗೂ, ಹೃದಯಕ್ಕೂ ಆಗುವ ಹಾನಿಯನ್ನು ತಪ್ಪಿಸುತ್ತದೆ. ಮರಗಳಿದ್ದ ಪ್ರದೇಶದಲ್ಲಿದ್ದರೆ ಅಲ್ಲಿಂದ ಬೇಗನೆ ಹೊರಬರುವುದು ಒಳ್ಳೆಯದು. ಏಕೆಂದರೆ ಸಿಡಿಲು ಮೋಡದಿಂದ ಭೂಮಿಗೆ ಹರಿಯಲು ಮರದಂತಹ ಹಸಿ, ಒದ್ದೆ ವಸ್ತುವನ್ನೇ ಆರಿಸಿಕೊಳ್ಳುತ್ತದೆ.ಎತ್ತರದಗುಡ್ಡದ ಮೇಲಿದ್ದರೆ ತಗ್ಗು ಪ್ರದೇಶಲ್ಲೆ ಹೋಗಬೇಕು. ಕುರಿಮಂದೆ ಅಥವಾ ಜಾನುವಾರುಗಳ ಮಧ್ಯ ನಿಂತಿದ್ದರೆ ಅವುಗಳ ಮಧ್ಯದಲ್ಲಿ ಬಗ್ಗಿ ಕುಳಿತುಕೊಳ್ಳಿ, ಏಕೆ–ಂದರೆ ಮಿಂಚು ಪ್ರಾಣಿಗಳಿಗಿಂತ ಎತ್ತರವಿರುವ ಮನುಷ್ಯನನ್ನೇ ಆರಿಸಿಕೊಳ್ಳುತ್ತದೆ.ಕೆರೆಯಲ್ಲಿ ಈಜುವುದು,ಸ್ನಾನಮಾಡುವುದು ಬೇಡ, ನೀರಿನಲ್ಲಿದ್ದರೆ ತಕ್ಷಣ ಹೊರಬೇಕು. ವಿದ್ಯುತ್ ಕಂಬ, ಎಲೆಕ್ಟ್ರಿಕಲ್ ಟವರ್, ಮೊಬೈಲ್ ಟವರ್ ಟ್ರಾನ್ಸ್‌ಫಾರ್ಮರ್ ಮುಂತಾದವುಗಳ ಹತ್ತಿರವೂ ಇರಬಾರದು. ಮಳೆ ಬರುವ ಸಮಯದಲ್ಲಿ ಮನೆಯ ಮೇಲ್ಛಾವಣಿ ಸ್ವಚ್ಛ ಮಾಡುವ ಸಾಹಸ ಬೇಡ, ಮನೆಯ ಕಿಟಕಿಯ ಬಳಿ ನಿಲ್ಲುವುದಕ್ಕಿಂತಲೂ ಮನೆಯ ಮಧ್ಯದಲ್ಲಿರುವುದು ಸುರಕ್ಷಿತ.ಗುಡುಗು–ಸಿಡಿಲಿನ ಸಂದರ್ಭದಲ್ಲಿ ಮೊಬೈಲ್ ನಲ್ಲಿ ಮಾತನಾಡಬಾರದು. ಚಾರ್ಜ್ ಮಾಡುವ ಸಾಹಸವೂ ಬೇಡ. ಕಾರಿನಲ್ಲಿ ಪ್ರಯಾಣಿಸುತ್ತಿದ್ದರೆ ಗಾಜನ್ನು ಮುಚ್ಚಿಕೊಳ್ಳಿ, ಕಾರಿನ ಬಾಡಿಯನ್ನು ಸಾಧ್ಯವಾದಷ್ಟು ಸ್ಪರ್ಶಿಸದೇ ಮಧ್ಯದಲ್ಲಿ ಕುಳಿತುಕೊಳ್ಳುವುದು ಒಳ್ಳೆಯದು.

ಕಂಪ್ಯೂಟರ್,ಲ್ಯಾಪ್‌ಟ್ಯಾಪ್‌ಗಳಿಂದ ದೂರವಿರಿ,ಮನೆಯ ಕಾಂಕ್ರೀಟ್ ಗೋಡೆಗಳನ್ನು ಸ್ಪರ್ಶಿಸದೇ ಕೋಣೆಯ ಮಧ್ಯದಲ್ಲಿದ್ದರೆ ಹೆಚ್ಚು ಸುರಕ್ಷಿತ ಎಂದು ರಾಜ್ಯ ವಿಪತ್ತು ನಿರ್ವಹಣಾ ಕೇಂದ್ರವು ತಿಳಿಸಿದೆ.ಜಿಲ್ಲೆಯ ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಸಿಡಿಲು ಬಾಧಿತ ವ್ಯಕ್ತಿಗಳು ಆಗಮಿಸಿದಾಗ ತಕ್ಷಣ ಚಿಕಿತ್ಸೆ ಕ್ರಮ ಕೈಗೊಳ್ಳುವ ಕುರಿತು ವೈದ್ಯಾಧಿಕಾರಿಗಳಿಗೆ ಮಾಹಿತಿ ನೀಡಲಾಗಿದ್ದು, ಅಗತ್ಯ ಔಷಧಿ ದಾಸ್ತಾನು ಸಹ ಇಟ್ಟುಕೊಳ್ಳಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ 15 ರಂದು ಗೃಹರಕ್ಷಕರ ಆಯ್ಕೆ ಪ್ರಕ್ರಿಯೆ

ಬಳ್ಳಾರಿ,ಮೇ 14:

ಜಿಲ್ಲೆಯ ಸಂಡೂರು,ಕುಡುತಿನಿ, ತೆಕ್ಕಲಕೋಟೆ,ತೋರಣಗಲ್ಲು, ಸಿರುಗುಪ್ಪ ಮತ್ತು ಕುರುಗೋಡು ಘಟಕದಲ್ಲಿ ಖಾಲಿ ಇರುವ ಗೃಹರಕ್ಷಕರ ಸ್ವಯಂಸೇವಕ ಸ್ಥಾನಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಮೇ 15 ರಂದು ಬೆಳಿಗ್ಗೆ 06 ಗಂಟೆಗೆ ಬಳ್ಳಾರಿ ಜಿಲ್ಲಾ ಸಶಸ್ತ್ರ ಮೀಸಲು ಪಡೆ (ಡಿಎಆರ್) ಮೈದಾನದಲ್ಲಿ ಆಯ್ಕೆ ಪ್ರಕ್ರಿಯೆ ನಡೆಯಲಿದ್ದು, ಅಭ್ಯರ್ಥಿಗಳಿಗೆ ದೈಹಿಕ ಪರೀಕ್ಷೆ ಮತ್ತು ಸಂದರ್ಶನ ಕೈಗೊಳ್ಳಲಾಗುವುದು.

*ದೈಹಿಕ ಪರೀಕ್ಷೆ ಮತ್ತು ದೈಹಿಕ ಸಹಿಷ್ಣುತೆ ಪರೀಕ್ಷೆ:* ಪುರುಷ ಅಭ್ಯರ್ಥಿಗಳು 168 ಸೆಂ.ಮೀ ಎತ್ತರ ಇರಬೇಕು. ಎದೆ ಸುತ್ತಳತೆ 86 ಸೆಂ.ಮೀ. ಹೊಂದಿರಬೇಕು. ತೂಕ 50 ಕೆ.ಜಿ. ಹೊಂದಿರಬೇಕು. 400 ಮೀಟರ್ ಓಟವನ್ನು 02 ನಿಮಿಷಗಳ ಒಳಗೆ ಓಡಬೇಕು. ಗುಂಡು ಎಸೆತ (4 ಕೆ.ಜಿ) 3.75 ಮೀಟರ್ ಎಸೆಯಬೇಕು.

*ಸೂಚನೆ:*ಅಭ್ಯರ್ಥಿಗಳುದೈಹಿಕ ಪರೀಕ್ಷೆ ಮತ್ತು ಸಂದರ್ಶನಕ್ಕೆ ಹಾಜರಾಗುವಾಗ ವಿದ್ಯಾರ್ಹತೆಗೆ ಸಂಬಂಧಿಸಿದಂತೆ ಕೆಳಕಂಡ ದಾಖಲೆಗಳನ್ನು ತರಬೇಕು.

ಎಸ್.ಎಸ್.ಎಲ್.ಸಿ. ಮೂಲ ಅಂಕಪಟ್ಟಿ, ವರ್ಗಾವಣೆ ಪ್ರಮಾಣ ಪತ್ರ ಜೆರಾಕ್ಸ್ ಪ್ರತಿ, ಆಧಾರ್ ಕಾರ್ಡ್, ಚುನಾವಣಾ ಗುರುತಿನ ಚೀಟಿ, ಕುಟುಂಬ ಪಡಿತರ ಚೀಟಿ ಮೂಲ ಪ್ರತಿ. ಸಂದರ್ಶನಾ ಪತ್ರ ಮೂಲ ಪ್ರತಿ. ಜೆರಾಕ್ಸ್ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

ದೈಹಿಕ ಪರೀಕ್ಷೆ ಮತ್ತು ಸಂದರ್ಶನಾ ಹಾಜರಾಗುವ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಆಗಮಿಸುವುದು (ಯಾವುದೇ ರೀತಿಯ ಭತ್ಯೆ ನೀಡಲಾಗುವುದಿಲ್ಲ ಎಂದು ಜಿಲ್ಲಾ ಗೃಹರಕ್ಷಕದಳದ ಸಮಾದೇಷ್ಟರು ಹಾಗೂ ಗೃಹರಕ್ಷಕರ ಆಯ್ಕೆ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ತಿಳಿಸಿದ್ದಾರೆ.


## ಮೀನುಗಾರಿಕೆ ಇಲಾಖೆ: ಮನೆ ನಿರ್ಮಾಣಕ್ಕೆ ಸಹಾಯಧನ ಪಡೆಯಲು ಅರ್ಜಿ ಆಹ್ವಾನ

ಬಳ್ಳಾರಿ,ಮೇ14:ಮೀನುಗಾರಿಕೆ ಇಲಾಖೆವತಿಯಿಂದಪ್ರಸಕ್ತಸಾಲಿನ ವಸತಿರಹಿತ ಮೀನುಗಾರರಿಗೆ ಸರ್ಕಾರದ ಮತ್ಸ್ಯಾಶ್ರಯ ಯೋಜನೆಯಡಿಮನೆಗಳನ್ನುನಿರ್ಮಿಸಲು ಸಹಾಯಧನನೀಡಲಾಗುತ್ತಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.ಬಳ್ಳಾರಿ ಜಿಲ್ಲೆಯ ಕಂಪ್ಲಿ ವಿಧಾನಸಭಾ ಕ್ಷೇತ್ರಕ್ಕೆ 25ಮನೆ, ಸಿರುಗುಪ್ಪ ವಿಧಾನಸಭಾ ಕ್ಷೇತಕ್ಕೆ 25 ಮನೆ, ಬಳ್ಳಾರಿಗ್ರಾಮಾಂತರ ವಿಧಾನಸಭಾಕ್ಷೇತ್ರಕ್ಕೆ 25 ಮನೆ,ಬಳ್ಳಾರಿನಗರ ವಿಧಾನಸಭಾ ಕ್ಷೇತ್ರಕ್ಕೆ25 ಮನೆ ಮತ್ತು ಸಂಡೂರು ವಿಧಾನಸಭಾ ಕ್ಷೇತ್ರಕ್ಕೆ 25 ಮನೆಗಳು ಸೇರಿ ಒಟ್ಟು ಜಿಲ್ಲೆಗೆ 125 ಮನೆಗಳನ್ನು ಹಂಚಿಕೆ ಮಾಡಲಾಗಿದೆ. ಅರ್ಜಿಗಳನ್ನು ಆಯಾ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿ (ಬಳ್ಳಾರಿ, ಸಿರುಗುಪ್ಪ,ಕಂಪ್ಲಿ ವಿಧಾನಸಭಾ ಕ್ಷೇತ್ರ) ಮತ್ತು ಸಂಡೂರು ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗಳಲ್ಲಿ ಪಡೆದುಕೊಳ್ಳಬಹುದು.

# ಸ್ವಯಂಚಾಲಿತ ಚಾಲನಾ ಪರೀಕ್ಷಾ ಪಥದ ಕಾಮಗಾರಿ ಪರಿಶೀಲಿಸಿದ ಸಾರಿಗೆ ಸಚಿವ ಏಜೆಂಟರ ಹಾವಳಿ ತಪ್ಪಿಸಲು ಆನ್‌ಲೈನ್ ಸೇವೆ : ರಾಮಲಿಂಗಾರೆಡ್ಡಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ, ಮೇ 14 : ಏಜೆಂಟರುಗಳ ಹಾವಳಿ ತಪ್ಪಿಸುವ ಸಲುವಾಗಿ ಸಾರಿಗೆ ಇಲಾಖೆಯಲ್ಲಿ ಆನ್‌ಲೈನ್‌ಸೇವೆಗಳನ್ನುಪ್ರಾರಂಭಿಸಲಾಗಿದೆ ಎಂದು ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಹೇಳಿದರು.



ಬಾಗಲಕೋಟೆ ಸೀಮಿಕೇರಿ ಕ್ರಾಸ್ ಬಳಿ ನಿರ್ಮಾಣವಾಗುತ್ತಿರುವ ನೂತನ ಸ್ವಯಂ ಚಾಲಿತ ಚಾಲನಾ ಪರೀಕ್ಷಾಪಥ ಕಾಮಗಾರಿ ಪರಿಶೀಲಿಸಿ ಮಾತನಾಡಿದ ಅವರು ಪ್ರಾದೇಶಿಕ ಸಾರಿಗೆ ಇಲಾಖೆಯಲ್ಲಿನ ಸೇವೆಗಳನ್ನು ಪಡೆಯುವಲ್ಲಿ ಏಜೆಂಟರ ಹಾವಳಿ ಇದ್ದ ಬಗ್ಗೆ ಸಾಕಷ್ಟು ದೂರುಗಳು ಬರುತ್ತಿರುವ ಹಿನ್ನಲೆಯಲ್ಲಿ ಈ ಹಾವಳಿ ತಪ್ಪಿಸಲು 34 ಸೇವೆಗಳನ್ನು ಆನ್‌ಲೈನ್ ಮೂಲಕ ನೀಡಲಾಗುತ್ತಿದೆ. ಹಂತ ಹಂತವಾಗಿ ಎಲ್ಲ ಸೇವೆಗಳನ್ನು ಆನ್‌ಲೈನ್ ಮೂಲಕ ಮಾಡಲಾಗುತ್ತಿದ್ದು, ಅಧಿಕೃತವಾಗಿ ದೂರುಗಳು ಬಂದಲ್ಲಿ ಆ ಭಾಗದ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಮೇಲೆಯೇ ಶಿಸ್ತುಕ್ರಮಕ್ಕೆ ಮುಂದಾಗುವುದಾಗಿ ತಿಳಿಸಿದರು.

ಬಾಗಲಕೋಟೆ ಸೀಮಿಕೇರಿ ಬಳಿ 12 ಎಕರೆ ಜಮೀನಿನಲ್ಲಿ 6 ಎಕರೆ ಜಮೀನು ಬಳಸಿಕೊಂಡು ನೂತನ ಸ್ವಯಂ ಚಾಲಿತ ಚಾಲನಾ ಪರೀಕ್ಷಾಪಥ ನಿರ್ಮಿಸಲಾಗುತ್ತಿದೆ. ಕಟ್ಟಡ ಕಾಮಗಾರಿ ಪೂರ್ಣಗೊಂಡಿದ್ದು, ಸೆನ್ಸಾರ್ ಕೆಲಸಕ್ಕೆ ನೀಡಲಾದ ಟೆಂಡರ್‌ರನ್ನು ರದ್ದುಪಡಿಸಲಾಗಿದೆ. ಕಾರಣ ಇತ್ತೀಚಿನ ನೂತನ ಮಾದರಿಯ ಸೆನ್ಸಾರ್ ಬಂದಿದ್ದು, ಅದಕ್ಕಾಗಿ ಹೊಸ ಟೆಂಡರ್‌ರನ್ನು ಕರೆಯಾಗಿದೆ. ಪರೀಕ್ಷಾಪಥದ ರಸ್ತೆ ನಿರ್ಮಾಣ ಹಾಗೂ ಪಾದಚಾರಿ ರಸ್ತೆ ಕಾಮಗಾರಿ ಆಗಬೇಕಿದೆ. ಸೆನ್ಸಾರ್ ಹೊರತುಪಡಿಸಿ ಇದಕ್ಕಾಗಿ 9 ಕೋಟಿ ರೂ.ಗಳ ವೆಚ್ಚ ಮಾಡಲಾಗುತ್ತಿದೆ. ಇನ್ನು 3 ರಿಂದ 4 ತಿಂಗಳಲ್ಲಿ ಪೂರ್ಣಗೊಳ್ಳಲಿದ್ದು, ಶೀಘ್ರದಲ್ಲಿಯೇ ಲೋಕಾರ್ಪಣೆಗೊಳಿಸಲಾಗುತ್ತಿದೆ ಎಂದು ತಿಳಿಸಿದರು. ನಂತರ ನವನಗರದ ಪ್ರಾದೇಶಿಕ ಸಾರಿಗೆ ಕಚೇರಿಗೆ ಭೇಟಿ ನೀಡಿದ ಸಚಿವರು ಕಡತಗಳನ್ನು ಪರಿಶೀಲನೆ ಮಾಡಿದರು. ಈ ಬಗ್ಗೆ ಪ್ರಾದೇಶಿಕ ಸಾರಿಗೆ ಅಧಿಕಾರಿ ಆರ್.ಎಲ್.ಹೊಸಮನಿ ವಿವರಣೆ ನೀಡುತ್ತಾ, ಕಳೆದ 2023-24ನೇ ಸಾಲಿಗೆ ರಾಜಸ್ವ ಸಂಗ್ರಹಣೆ ಶೇ.91.70 ರಷ್ಟು ಆದರೆ 2024-25ನೇ ಸಾಲಿಗೆ ಶೇ.91.66 ಹಾಗೂ ಪ್ರಸಕ್ತ 2025-26ನೇ ಸಾಲಿನ ಎಪ್ರೀಲ್ ಮಾಹೆಯವರೆಗೆ ಶೇ.85.75 ರಷ್ಟು ಆಗಿದೆ. ಮಾರ್ಚ 2024ರ ಅಂತ್ಯಕ್ಕೆ 8390 ವಾಹನಗಳನ್ನು ತಪಾಸಣೆ ಮಾಡಲಾಗಿದ್ದು, ಅದರಲ್ಲಿ 2783 ಪ್ರಕರಣಗಳನ್ನು ದಾಖಲಿಸಲಾಗಿದೆ. ತೆರಿಗೆ ಮತ್ತು ದಂಡ ಸೇರಿ ಒಟ್ಟು 2.22 ಕೋಟಿ ರೂ ಆಷ್ಟಾಗಿದೆ ಎಂದರು. 2024-25ನೇ ಸಾಲಿಗೆ ರಸ್ತೆ ಸುರಕ್ಷತಾಗೆ ನೀಡಿದ ಗುರಿಗೆ ಶೇ.100.17 ರಷ್ಟು ಪ್ರಗತಿ ಸಾಧಿಸಲಾಗಿದೆ. ಮಾರ್ಚ 2025ರ ಅಂತ್ಯಕ್ಕೆ 44 ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ. ಅದರಲ್ಲಿ 9 ವಾಹನಗಳನ್ನು ಬಹಿರಂಗ ಹರಾಜಿನಲ್ಲಿ ವಿಲೇವಾರಿ ಮಾಡಲಾಗಿದೆ. ಎಪ್ರೀಲ್ ಅಂತ್ಯಕ್ಕೆ 35 ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ. ಈ ಕಚೇರಿಯ ವ್ಯಾಪ್ತಿಯಲ್ಲಿ 20 ವಾಹನ ತರಬೇತಿ ಶಾಲೆಗಳು ನೋಂದಣಿಯಾಗಿದ್ದು, 15 ವಾಯು ಮಾಲಿನ್ಯ ತಪಾಸಣಾ ಕೇಂದ್ರಗಳು ಇರುವುದಾಗಿ ತಿಳಿಸಿದರು.

ಸಚಿವರ ಭೇಟಿ ಸಮಯದಲ್ಲಿ ಅಪರ ಸಾರಿಗೆ ಆಯುಕ್ತ ಕೆ.ಟಿ.ಹಾಲಸ್ವಾಮಿ, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ಸಾರಿಗೆ ಇನ್ಸಪೆಕ್ಟರಗಳಾದ ವಾಗೀಶ ಹಿರೇಮಠ, ಅಶ್ವಿನಿ ಬಡಿಗೇರ, ರೇಖಾ ಭಜಂತ್ರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮಾಜಿ ಕೇಂದ್ರ ಸಚಿವ ಭಗವಂತ ಖೂಬಾಗೆ ನೀಡಲಾದ ಭದ್ರತೆ ನಿಯಮಾನುಸಾರ ಹಿಂದಕ್ಕೆ:ಎಸ್‌ಪಿ ಪ್ರದೀಪ ಗುಂಟಿ

ಮಲ್ಲಮ್ಮ ನುಡಿ ವಾರ್ತೆ ಬೀದರ: ಮೇ.14:ಮಾಜಿ ಕೇಂದ್ರ ಸಚಿವರಾದ ಭಗವಂತ ಖೂಬಾ ಅವರಿಗೆ ತಮ್ಮ ಗೃಹ ಕಚೇರಿ ಹತ್ತಿರ ಭದ್ರತೆ ಗೋಸ್ಕರ ನಿಯೋಜಿಸಲಾಗಿದ್ದ 3 ಜನ ಸೆಂಟ್ರಿ ಅವರನ್ನು ನಿಯಮ ಅನುಸಾರವಾಗಿ ಹಿಂಪಡೆಯಲಾಗಿದೆ. ಹಾಗೂ ಸರ್ಕಾರದ ನಿಯಮ ಅನುಸಾರವಾಗಿ ಅವರಿಗೆ ಗನ್ ಮ್ಯಾನ್ ಮುಂದುವರಿಸಲಾಗಿದೆ ಎಂದು ಬೀದರ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪ್ರದೀಪ್ ಗುಂಟಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ಬೀದರ್ ಜಿಲ್ಲೆಯಲ್ಲಿ ಅಬ್ಬರಿಸಿದ ಮಳೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 14 : ನಗರ ಸೇರಿದಂತೆ ಜಿಲ್ಲೆಯ ಹಲವೆಡೆ ಮಂಗಳವಾರ ಸಂಜೆ ಸುರಿದ ಗುಡುಗು ಸಹಿತ ಮಳೆಗೆ ಜನಜೀವನ ಅಸ್ತವ್ಯಸ್ತಗೊಂಡಿತು.

ಸಂಜೆ ಆರು ಗಂಟೆ ಸುಮಾರಿಗೆ ಆರಂಭಗೊಂಡ ಮಳೆ ರಾತ್ರಿ 9ಗಂಟೆ ನಂತರವೂ ಜಿಟಿಜಿಟಿಯಾಗಿ ಮುಂದುವರೆದಿತ್ತು. ಮಂಗಳವಾರ ನಸುಕಿನ ಜಾವ ಗಂಟೆಗೂ ಹೆಚ್ಚು ಕಾಲ ಗುಡುಗು ಸಹಿತ ಸಾಧಾರಣ ಮಳೆಯಾಗಿತ್ತು.

ಮಧ್ಯಾಹ್ನ 12ರ ವರೆಗೆ ಮೋಡ ಕವಿದ ವಾತಾವರಣ ಇತ್ತು. ಬಳಿಕ ಸಂಜೆ ತನಕ ಪ್ರಖರವಾದ ಬಿಸಿಲು ಇತ್ತು. ಸಂಜೆ ಆರು ಗಂಟೆಗೆ ಭಾರಿ ಗಾಳಿಯೊಂದಿಗೆ ಮಳೆ ಆರಂಭಗೊಂಡಿತು. ಜೋರು ಮಳೆಗೆ ವಾಹನ ಚಾಲಕರಿಗೆ ರಸ್ತೆ ಕಾಣದೇ ರಸ್ತೆಯ ಬದಿಯಲ್ಲಿ ವಾಹನ ನಿಲ್ಲಿಸಿದರು. ಬಹುತೇಕರು ಇಂಡಿಕೇಟರ್‌ಗಳನ್ನು ಆನ್ ಮಾಡಿ ನಿಧಾನವಾಗಿ ವಾಹನಗಳನ್ನು ಚಲಾಯಿಸಿದರು.

ಪಾದಚಾರಿಗಳು, ಬೈಕ್ ಸವಾರರು ಕಟ್ಟಡಗಳ ಅಡಿ ಆಶ್ರಯ ಪಡೆದಿದ್ದರು. ವಿದ್ಯಾನಗರ, ಹಾರೂರಗೇರಿ, ಬೊಮ್ಮಗೊಂಡೇಶ್ವರ ವೃತ್ತದಲ್ಲಿ ಅಪಾರ ಪ್ರಮಾಣದ ನೀರು ಸಂಗ್ರಹಗೊಂಡಿದ್ದರಿಂದ ವಾಹನ ಸಂಚಾರಕ್ಕೆ ತೊಡಕಾಯಿತು.

ಜೋರು ಗಾಳಿಗೆ ವಿದ್ಯುತ್ ತಂತಿಗಳು ಸ್ಪರ್ಶಿಸಿ ವಿದ್ಯುತ್ ಕೈಕೊಟ್ಟಿತು. ಸುಮಾರು ಎರಡು ಗಂಟೆಗೂ ಹೆಚ್ಚು ಸಮಯ ವಿದ್ಯುತ್ ಪೂರೈಕೆ ಇರಲಿಲ್ಲ. ಬಿಟ್ಟೂ ಬಿಡದೇ ಮಳೆ ಸುರಿಯಿತು. ಇದರಿಂದ ಜನಜೀವನ ಸಂಪೂರ್ಣ ಅಸ್ತವ್ಯಸ್ತಗೊಂಡಿತು. ಬಿರುಸಿನ ಮಳೆಗೆ ವಾತಾವರಣ ಸಂಪೂರ್ಣ ತಂಪಾಯಿತು. ಬಿಸಿಲಿನಿಂದ ಕಂಗೆಟ್ಟಿದ್ದ ಜನ ನೆಮ್ಮದಿಯ ನಿಟ್ಟುಸಿರು ಬಿಟ್ಟರು.

ಬೀದರ್ ತಾಲ್ಲೂಕಿನ ಮರಕಲ್, ಜನವಾಡ, ಚಿಕ್ಕಪೇಟೆ, ಮಾಮನಕೇರಿ, ಬೆನಕನಳ್ಳಿ, ಚಿಟ್ಟಾ, ಘೋಡಂಪಳ್ಳಿಯಲ್ಲಿ ಭಾರಿ ಮಳೆಯಾಗಿದೆ. ಜಿಲ್ಲೆಯ ಔರಾದ್, ಹುಮನಾಬಾದ್, ಚಿಟಗುಪ್ಪ, ಕಮಲನಗರ ಹಾಗೂ ಭಾಲ್ಕಿಯಲ್ಲೂ ಮಳೆಯಾಗಿರುವುದು ವರದಿಯಾಗಿದೆ.

# ಮೌನೇಶ ಪಾಟೀಲ್ ಬೆಳಗೇರಾ ಗೆ " ದ ಮದರ್ ಆಫ್ ಸೋಶಿಯಲ್ ವರ್ಕ್ ಜೇನ್ ಆಡಮ್ಸ್ "ರಾಜ್ಯ ಪ್ರಶಸ್ತಿ ಪ್ರದಾನ

ಯಾದಗಿರಿ:ಮೇ.14: ಎಚ್‌ಐವಿ ಸಿ ಎಸ್ ಸಿ ನ ಜಿಲ್ಲಾ ಸಂಯೋಜಕರು ಹಾಗೂ ಕರ್ನಾಟಕ ರಾಜ್ಯ ಪ್ರೊಫೆಷನಲ್ ಸೋಶಿಯಲ್ ವರ್ಕರ್ಸ್ ವೆಲ್ಫೇರ್ ಅಸೋಸಿಯೇಷನ್(ರಿ) ಜಿಲ್ಲಾ ಘಟಕದ ಯಾದಗಿರಿಯ ಜಿಲ್ಲಾಧ್ಯಕ್ಷರಾದ ಮೌನೇಶ ಪಾಟೀಲ್ ಬೆಳಗೇರಾ ಅವರ ಸಂಘಟನೆ ಕೌಶಲ್ಯ ಮತ್ತು ವಿವಿಧ ಕ್ಷೇತ್ರದಲ್ಲಿನ ಸೇವೆ ಹಾಗೂ ಸಾಮಾಜಿಕ ಸೇವೆಯನ್ನು ಗುರುತಿಸಿ" ದ ಮದರ್ ಆಫ್ ಸೋಶಿಯಲ್ ವರ್ಕ್ ಜೇನ್ ಆಡಮ್ಸ್ " ರಾಜ್ಯ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ಕರ್ನಾಟಕ ರಾಜ್ಯ ಪ್ರೊಫೆಷನಲ್ ಸೋಶಿಯಲ್ ವರ್ಕರ್ಸ್ ವೆಲ್ಫೇರ್ ಅಸೋಸಿಯೇಷನ್ (ರಿ)ರಾಜ್ಯ ಸಮಿತಿ ವತಿಯಿಂದ ದಾವಣಗೆರೆಯ ರೋಟರಿ ಕ್ಲಬ್ ನಲ್ಲಿ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ವೃತ್ತಿಪರ ಸಾಮಾಜಿಕ ಕಾರ್ಯಕರ್ತರ ಸಮಾವೇಶ



ಕುರಿತು ಪೂರ್ವಬಾವಿ ಸಭೆಯನ್ನು ಮತ್ತು ವಿವಿಧ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವವರಿಗೆ ಮತ್ತು ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ವೃತ್ತಿಪರ ಸಾಮಾಜಿಕ ಕಾರ್ಯಕರ್ತರಿಗೆ ಸನ್ಮಾನ ಕಾರ್ಯಕ್ರಮ ದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಯಿತು. ಈ ವೇಳೆ ರಿಯಾಲಿಟಿ ಬುಕ್ ಆಫ್ ವರ್ಲ್ಡ್ ರೆಕಾರ್ಡ್ ವಿಶ್ವದಾಖಲೆ ಪ್ರಶಸ್ತಿ ಪುರಸ್ಕೃತರಾದ ಅಸೋಸಿಯೇಷನ್ ರಾಜ್ಯಾಧ್ಯಕ್ಷರಾದ ಸಂತೋಷಕುಮಾರ ಎಂ ಅವರನ್ನು ನಮ್ಮ ಯಾದಗಿರಿ ಜಿಲ್ಲಾ ಘಟಕದ ವತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ರಾಜ್ಯಾಧ್ಯಕ್ಷರಾದ ಸಂತೋಷ್ ಕುಮಾರ್, ದಾವಣಗೆರೆ ವಿಶ್ವವಿದ್ಯಾನಿಲಯದ ಸಮಾಜ ಕಾರ್ಯ ವಿಭಾಗದ ಮುಖ್ಯಸ್ಥರಾದ ಡಾ.ಲೋಕೇಶ್ ಎಂ ಯು, ರಾಜೇಂದ್ರಕುಮಾರ್, ಮಹಾಲಿಂಗಪ್ಪ, ಡಾ.ಮಹೇಶ್ ಡಾ.ಪಾಂಡುರಂಗ ಇವರು ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ವೃತ್ತಿಪರ ಸಾಮಾಜಿಕ ಕಾರ್ಯಕರ್ತರು, ಯಾದಗಿರಿ ಜಿಲ್ಲಾ ಸಮಿತಿಯ ಸದಸ್ಯರಾದ ಮಹೇಶಕುಮಾರ್ ಎಸ್, ಸೈಯದ್ ಪಾಷ, ಶ್ವೇತಾ ನಾಯಕ, ಬೇಬಿ ರಾಠೋಡ್, ಮಂಜುನಾಥ ಇವರಿಗೂ ಕೂಡ ಪ್ರಶಸ್ತಿ ನೀಡಿ ಗೌರವಿಸಿದರು. ಮತ್ತು ಎಲ್ಲಾ ಜಿಲ್ಲೆಯ ಜಿಲ್ಲಾಧ್ಯಕ್ಷರು ಮತ್ತು ಸದಸ್ಯರು ವಿದ್ಯಾರ್ಥಿಗಳು ನೌಕರರು ಪದವಿಧರರು,

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳಾದ ನಾಗರಾಜ್ ಜಿ.ಬಿ, ಆರೋಗ್ಯ ಇಲಾಖೆಯ ನೌಕರರು, ವೃತ್ತಿಪರ ಸಮಾಜ ಕಾರ್ಯಕರ್ತರು ಇದ್ದರು.

# ಸರಕಾರಿ ಪ್ರೌಢಶಾಲೆಯಲ್ಲಿ ಹೆಚ್ಚಿನ ಸಂಖ್ಯೆ ಯಲ್ಲಿ ಪ್ರವೇಶ ಪಡೆಯಿರಿ:ರಂಗೇಶ ಬಿ.ಜೆ.

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮೇ.14:ಕಮಲನಗರನಲ್ಲಿ ನೂತನ ಕರ್ನಾಟಕ ಪಬ್ಲಿಕ್ ಶಾಲೆ ಆರಂಭವಾಗಲಿದ್ದು, ಸುತ್ತಲಿನ ಮಕ್ಕಳು ಸರ್ಕಾರಿ ಪ್ರೌಢಶಾಲೆಯಲ್ಲಿ ಹೆಚ್ಚಿನ ಸಂಖ್ಯೆ ಯಲ್ಲಿ ಪ್ರವೇಶ ಪಡೆಯರಿ ಎಂದು ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ರಂಗೇಶ ಬಿ.ಜೆ. ಹೇಳಿದರು.

ಪಟ್ಟಣದ ಎಂಪಿಎಸ್ ಶಾಲೆಯಲ್ಲಿ ಮುಖ್ಯ ಗುರುಗಳು ಮತ್ತು ವಿವಿಧ ಅಧಿಕಾರಿ ಸೇರಿ ವಿಶೇಷ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ಪ್ರಸ್ತುತ ಸಾಲಿನಲ್ಲಿ ಕರ್ನಾಟಕ ಸಕಾರದ ಆದೇಶ ಮೇರಿಗೆ ಪಟ್ಟಣದಲ್ಲಿ ಸರ್ಕಾರಿ ಪ್ರೌಢಶಾಲೆ ಕೆಪಿಎಸ್ ಆರಂಭವಾಗಲಿದೆ.

ಪಟ್ಟಣದ ಸೇರಿದಂತೆ ಸುತ್ತಲಿನ ಗ್ರಾಮದ ಪಾಲಕರು ಸರ್ಕಾರಿ ಶಾಲೆಯಲ್ಲಿ ತಮ್ಮ ಮಕ್ಕಳನ್ನು ದಾಖಲು ಮಾಡಬೇಕು ಎಂದು ಹೇಳಿದರು.20 ರಂದು



ಮಂಗಳವಾರ ಪಟ್ಟಣದ ಗ್ರಾಮ ಪಂಚಾಯತಿ ಸಂಭಾಗಣದಲ್ಲಿ 10 ಗಂಟೆಗೆ ವಿಶೇಷ ಸಭೆ ನಡೆಯಲಿದೆ. ಸಭೆಯಲ್ಲಿ ಮಾಜಿ ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು, ಮಾಜಿ ಜಿಪಂ ಸದಸ್ಯರು, ಗ್ರಾಮ ಪಂಚಾಯತ ಸದಸ್ಯರು ಸೇರಿದಂತೆ ಗ್ರಾಮದ ಮುಖಂಡರು ಸೇರಿ ಸಭೆಯಲ್ಲಿ ಪಾಲ್ಗೊಂಡು ಕೆಪಿಎಸ್ ಶಾಲೆ ಕುರುತು ಪ್ರಚಾರ ಮತ್ತು ಪ್ರಸಾರ ಸಭೆ ಆಯೋಜನೆ ಮಾಡಲಾಗುತ್ತಿದೆ. ಸಭೆಗೆ ಜನಪ್ರತಿನಿಧಿಗಳು, ಸಮಾಜ ಸೇವಕರು, ಶಿಕ್ಷಣ ಪ್ರೇಮಿಗಳು ಮತ್ತು ಗ್ರಾಮದ ಮುಖಂಡರು ಭಾಗ ವಹಿಸಲು ಮನವಿ ಮಾಡಿದ್ದಾರೆ. ಶಾಲೆಯ ಕುರಿತು ಪ್ರಚಾರ ಮತ್ತು ಪ್ರಸಾರಕ್ಕೆ ಪಟ್ಟಣದ ವಿವಿಧ ವೃತ ಬಳಿ ಬ್ಯಾನರ ತಯಾರಿಸಿ ವ್ಯಾಪಕ ಪ್ರಚಾರ ಮಾಡಲು ಗ್ರಾಮದ ಹಿರಿಯರು ಮಾರ್ಗದರ್ಶಕರು ಸಹಕಾರ ನೀಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ

ಬಿಆರಪಿ ಶಶಿಕಾಂತ ಬಿಡವೆ, ಮಹಮೂದ ಮತ್ತಿನ, ಶಿಕ್ಷಕರ ದಯಾನಂದ ರಾಜೋಳೆ ಸೇರಿದಂತೆ ಇನ್ನಿತರ ಇದ್ದರು.

# ಇಂದು ಗದಗ(ತಳಕಲ್ಲ)-ಕುಷ್ಟಗಿ ಹೊಸ ರೈಲು ಮಾರ್ಗದ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಮೇ.14: ನೈಋತ್ಯ ರೈಲ್ವೆ ವಿಭಾಗದ ಗದಗ (ತಳಕಲ್ಲ) ಕುಷ್ಟಗಿ ಹೊಸ ರೈಲು ಮಾರ್ಗದ ಉದ್ಘಾಟನೆ ಹಾಗೂ ರೈಲು ಸಂಖ್ಯೆ. 17323 ಕುಷ್ಟಗಿ-ಎಸ್.ಎಸ್.ಎಸ್. ಹುಬ್ಬಳ್ಳಿ ಪ್ಯಾಸೆಂಜರ್ ರೈಲಿಗೆ ಹಸಿರು ನಿಶಾನೆ ಕಾರ್ಯಕ್ರಮ ಮೇ. 15ರಂದು ಬೆಳಿಗ್ಗೆ 10.30 ಗಂಟೆಗೆ ಕುಷ್ಟಗಿ ರೈಲು ನಿಲ್ದಾಣದಲ್ಲಿ ಆಯೋಜಿಸಲಾಗಿದೆ. ಕೇಂದ್ರ ಜಲ ಶಕ್ತಿ ಮತ್ತು ರೈಲ್ವೆ ಖಾತೆಯ ರಾಜ್ಯ ಸಚಿವರಾದ ವಿ.ಸೋಮಣ್ಣ ಹಾಗೂ ಕರ್ನಾಟಕ ರಾಜ್ಯ ಸರ್ಕಾರದ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಇಲಾಖೆ ಸಚಿವರಾದ ಡಾ. ಎಂ.ಬಿ.ಪಾಟೀಲ್ ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡುವರು.


ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ತಂಗಡಗಿ ಶಿವರಾಜ ಸಂಗಪ್ಪ, ಕರ್ನಾಟಕ ವಿಧಾನಸಭೆಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಕುಷ್ಟಗಿ ಶಾಸಕರಾದ ದೊಡ್ಡನಗೌಡ ಹನುಮಗೌಡ ಪಾಟೀಲ ಮತ್ತು ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ಶಾಸಕರಾದ ಬಸವರಾಜ ರಾಯರಡ್ಡಿ ಅವರು ಘನ ಉಪಸ್ಥಿತಿ ವಹಿಸುವರು.

ಗೌರವಾನ್ವಿತ ಅತಿಥಿಗಳಾಗಿ ಕೊಪ್ಪಳ ಸಂಸದರಾದ ಕೆ.

ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಸದಸ್ಯರಾದ ಶಶೀಲ್ ಜಿ.ನಮೋಶಿ, ಡಾ.ಚಂದ್ರಶೇಖರ ಬಿ.ಪಾಟೀಲ, ಶರಣಗೌಡ ಅನ್ನದಾನಗೌಡ ಪಾಟೀಲ ಬಯ್ಯಾಪೂರ ಹಾಗೂ ಹೇಮಲತಾ ನಾಯಕ ಅವರು ಭಾಗವಹಿಸುವರು.

# ಕರ್ನಲ್ ಸೋಫಿಯಾ ಖುರೇಷಿ ಬಗ್ಗೆ ಹೇಳಿಕೆ ಎಂಪಿ ಸಚಿವನ ವಿರುದ್ಧ ಎಫ್‌ಐಆರ್ ಗೆ ಹೈಕೋರ್ಟ ಸೂಚನೆ

ಭೋಪಾಲ್:ಮೇ.14: ಕರ್ನಲ್ ಸೋಫಿಯಾ ಖುರೇಷಿ ಅವರನ್ನು "ಭಯೋತ್ಪಾದಕರ ಸಹೋದರಿ" ಎಂದು ಕರೆದ ಬಿಜೆಪಿ ಸಚಿವ ವಿಜಯ್ ಶಾ ಅವರ ವಿರುದ್ಧ ಮಧ್ಯಪ್ರದೇಶ ಹೈಕೋರ್ಟ್ ಸ್ವಯಂ ಪ್ರೇರಿತವಾಗಿ ಎಫ್‌ಐಆರ್ ದಾಖಲಿಸುವಂತೆ ನಿರ್ದೇಶಿಸಿದೆ.



ಬಿಎನ್ ಎಸ್ ಅಡಿಯಲ್ಲಿ ಪ್ರಾಥಮಿಕವಾಗಿ ಅಪರಾಧಗಳನ್ನು ಮಾಡಲಾಗಿದೆ ಎಂದು ಹೈಕೋರ್ಟ್ ಹೇಳಿದೆ. ಶಾ ಮಂಗಳವಾರ ಕರ್ನಲ್ ಖುರೇಷಿ ಅವರನ್ನು ಉದ್ದೇಶಿಸಿ ಆಕ್ಷೇಪಾರ್ಹ ಹೇಳಿಕೆ ನೀಡುವ ಮೂಲಕ ದೊಡ್ಡ ವಿವಾದವನ್ನು ಹುಟ್ಟುಹಾಕಿದ್ದಾರೆ. ತೀವ್ರ ಟೀಕೆಗೆ ಗುರಿಯಾದ ಮಧ್ಯಪ್ರದೇಶದ ಸಚಿವರು, ತಮ್ಮ ಹೇಳಿಕೆಯಿಂದ ಯಾರಿಗಾದರೂ ನೋವಾಗಿದ್ದರೆ, ಹತ್ತು ಬಾರಿ ಕ್ಷಮೆಯಾಚಿಸಲು ಸಿದ್ಧರಿರುವುದಾಗಿ ಹೇಳಿದರು, ಕರ್ನಲ್ ಖುರೇಷಿಯನ್ನು ತಮ್ಮ ಸಹೋದರಿಗಿಂತ ಹೆಚ್ಚಾಗಿ ಗೌರವಿಸುವುದಾಗಿ ಹೇಳಿದರು. ಪಹಲ್ಗಾಮ್ ಉಗ್ರದಾಳಿ ಬಳಿಕ ಭಾರತೀಯ ಸೇನೆ ನಡೆಸಿದ್ದ ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆಯ ಬ್ರೀಫಿಂಗ್ ನೀಡಿದ್ದ ಕರ್ನಲ್ ಸೋಫಿಯಾ ಖುರೇಷಿ ಭಯೋತ್ಪಾದಕರ ಸಹೋದರಿ ಎಂದು ಮಧ್ಯಪ್ರದೇಶ ಬಿಜೆಪಿ ನಾಯಕ ಹಾಗೂ ಸಚಿವ ವಿಜಯ್ ಶಾ ವಿವಾದಾತ್ಮಕ ಹೇಳಿಕೆ ನೀಡಿದ್ದರು. ಭಾರತೀಯ ಸೇನೆಯ ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ಬಳಿಕ ಮಧ್ಯಪ್ರದೇಶದಲ್ಲಿ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ್ದ ಬಿಜೆಪಿ ನಾಯಕ ವಿಜಯ್ ಶಾ, ಪ್ರಧಾನಿ ಮೋದಿ ಅವರನ್ನು ಹೊಗಳುವ ಭರದಲ್ಲಿ ಕರ್ನಲ್ ಸೋಫಿಯಾ ಖುರೇಷಿ ಅವರನ್ನು ಭಯೋತ್ಪಾದಕರ ಸಹೋದರಿ ಎಂದು ಕರೆದಿದ್ದರು.

ಈ ವಿಡಿಯೋ ವ್ಯಾಪಕ ವೈರಲ್ ಆಗುತ್ತಿದ್ದು, ವಿಜಯ್ ಶಾ ಹೇಳಿಕೆ ಕಾಂಗ್ರೆಸ್ ನಾಯಕರು ಕೆಂಡಾಮಂಡಲರಾಗಿ ವಾಗ್ದಾಳಿ ನಡೆಸಿದ್ದಾರೆ.

ಇಂದೋರ್ ಜಿಲ್ಲೆಯ ಮಾಹುವಿನ ರಾಯ್ಕುಂಡ ಗ್ರಾಮದಲ್ಲಿ ನಡೆದ ಹಲ್ಮಾ ಕಾರ್ಯಕ್ರಮದಲ್ಲಿ ವಿಜಯ್ ಶಾ ಅವರು ಮಾಡಿದ ಭಾಷಣದ ಕ್ಲಿಪ್ ಅನ್ನು ಕಾಂಗ್ರೆಸ್ ಪಕ್ಷ ತನ್ನ ಟ್ವಿಟರ್ ಖಾತೆಯಲ್ಲಿ ಹಂಚಿಕೊಂಡಿದೆ. ಆ ವಿಡಿಯೋದಲ್ಲಿ ಸಚಿವ ವಿಜಯ್ ಶಾ, ಹಿಂದಿಯಲ್ಲಿ, "ಅವರು (ಭಯೋತ್ಪಾದಕರು) ನಮ್ಮ ಸಹೋದರಿಯರು ಮತ್ತು ಹೆಣ್ಣುಮಕ್ಕಳ ಸಿಂಧೂರವನ್ನು ಒರೆಸುವ ಮೂಲಕ ಅವರನ್ನು ಅಗೌರವಗೊಳಿಸಿದ್ದರು. ಆದರೆ ಅವರಿಗೆ ಸೂಕ್ತ ಉತ್ತರ ನೀಡಲು ನಾವು ಅವರ ಸ್ವಂತ ಸಹೋದರಿಯನ್ನು ಕಳುಹಿಸಿದ್ದೇವೆ" ಎಂದು ಹೇಳುತ್ತಿರುವುದು ಕೇಳಿಬರುತ್ತದೆ.

ಇಲ್ಲಿ ವಿಜಯ್ ಶಾ ಮುಸ್ಲಿಂ ಸಮುದಾಯಕ್ಕೆ ಸೇರಿದ ಉಗ್ರಗಾಮಿಗಳನ್ನು ಮುಸ್ಲಿಂ ಸಮುದಾಯಕ್ಕೆ ಸೇರಿದ ಮಹಿಳೆ ಕರ್ನಲ್ ಸೋಫಿಯಾ ಖುರೇಷಿ ಮಟ್ಟಹಾಕಿದ್ದಾರೆ ಎನ್ನುವ ಅರ್ಥದಲ್ಲಿ ಮಾತನಾಡಿದ್ದಾರೆ.

ಪಾಕಿಸ್ತಾನದಲ್ಲಿ ಭಯೋತ್ಪಾದಕರ ವಿರುದ್ಧ ಭಾರತ ನಡೆಸಿದ ಬಲವಾದ ಪ್ರತೀಕಾರಕ್ಕಾಗಿ ಪ್ರಧಾನಿ ಮೋದಿಯವರನ್ನು ಶ್ಲಾಘಿಸುವಾಗ ವಿಜಯ್ ಶಾ ಯಾವುದೇ ವ್ಯಕ್ತಿಯ ಹೆಸರನ್ನು ಉಲ್ಲೇಖಿಸದಿದ್ದರೂ, ಅವರ ಹೇಳಿಕೆಗಳನ್ನು ಕರ್ನಲ್ ಸೋಫಿಯಾ ಖುರೇಷಿಯ ಪರೋಕ್ಷ ಉಲ್ಲೇಖವೆಂದು ವ್ಯಾಪಕವಾಗಿ ಅರ್ಥೈಸಲಾಗಿದೆ. ಈ ಹೇಳಿಕೆ ಇದೀಗ ವ್ಯಾಪಕ ವೈರಲ್ ಆಗುತ್ತಿದ್ದು ಮಾತ್ರವಲ್ಲದೇ ವ್ಯಾಪಕ ಚರ್ಚೆಗೆ ಕಾರಣವಾಗಿದೆ.


ಕರ್ನಾಟಕ ಸರ್ಕಾರ

**ರಾಷ್ಟ್ರೀಯ ಆರೋಗ್ಯ ಅಭಿಯಾನ**

**ಜಿಲ್ಲಾ ಆರೋಗ್ಯ ಮತ್ತು ಕು.ಕ ಅಧಿಕಾರಿಗಳ ಕಾರ್ಯಾಲಯ, ಕಲಬುರಗಿ**

ಸಂಖ್ಯೆ: ಡಿ.ಹೆಚ್.ಓ/ಎನ್.ಯು.ಹೆಚ್.ಎಮ್./ಕ/09/2025-26 ದಿನಾಂಕ : 12-05-2025

**:: ಅಲ್ಪಾವಧಿ ಇ-ಟೆಂಡರ್ ಅಧಿಸೂಚನೆ ::**

**(Short term E-Procurement Tender Notification)**

ರಾಷ್ಟ್ರೀಯ ನಗರ ಆರೋಗ್ಯ ಅಭಿಯಾನ ಕಾರ್ಯಕ್ರಮದಡಿಯಲ್ಲಿ 2025-26ನೇ ಸಾಲಿನಲ್ಲಿ ನಮ್ಮ ಕ್ಲಿನಿಕ್ ಗಳಿಗೆ ಪಿಠೋಪಕರಣಗಳು ಹಾಗೂ ವೈದ್ಯಕೀಯ ಉಪಕರಣಗಳು ಸರಬರಾಜು ಮಾಡಲು ಕರ್ನಾಟಕ ಸಾರ್ವಜನಿಕ ಸಂಗ್ರಹಣಗಳಲ್ಲಿ ಪಾರದರ್ಶಕ ಅಧಿನಿಯಮ (KTPP) 1999 ನಿಯಮಗಳು 2000 ರ ಪ್ರಕಾರ e-Procurement ಟೆಂಡರ್ ಮೂಲಕ ಇ-ಟೆಂಡರ್ ಕರೆಯುವ ಕುರಿತು.

1) ಟೆಂಡರ್ ಫಾರಂ ಅಪ್‌ಲೋಡ್ ಮಾಡಲು ಪ್ರಾರಂಭಿಸುವ ದಿನಾಂಕ : 12-05-2025 ಮಧ್ಯಾಹ್ನ 12.00 ಗಂಟೆಯಿಂದ, 2) ಟೆಂಡರ್ ಫಾರಂ ಅಪಲೋಡ್ ಮಾಡಲು ಕೊನೆಯ ದಿನಾಂಕ : 19-05-2025 ಸಂಜೆ 5.15 ಗಂಟೆಗೆ, 3) ತಾಂತ್ರಿಕ ಲಕೋಟೆ ತೆರೆಯುವ ವೇಳೆ ಮತ್ತು ದಿನಾಂಕ : 20-05-2025 ಸಾಯಂಕಾಲ 5.30 ಗಂಟೆಗೆ, 4) ಆರ್ಥಿಕ ಲಕೋಟೆಯನ್ನು ತೆರೆಯುವ ಸ್ಥಳ, ವೇಳೆ ಮತ್ತು ದಿನಾಂಕ : 21-05-2025 ಸಾಯಂಕಾಲ 5:30 ಗಂಟೆಗೆ, 5) ಸಾಮಗ್ರಿಗಳ ಮಾದರಿ ಪರಿಶೀಲನಾ ದಿನಾಂಕ ಮತ್ತು ಸಮಯ : ದಿನಾಂಕವನ್ನು ತಿಳಿಸಲಾಗುವುದು, 6) ಟೆಂಡರ್‌ನ ಒಟ್ಟು ಅಂದಾಜು ಮೊತ್ತ : ರೂ. 1600000/-, 7) ಟೆಂಡರ್‌ನೊಂದಿಗೆ ಪಾವತಿಸಬೇಕಾದ ಇ.ಎಂ.ಡಿ. ಮೊತ್ತ : ರೂ. 40000/-, 8) ವ್ಯವಹರಿಸಬೇಕಾದ ಅಧಿಕಾರಿ ಹಾಗೂ ವಿಳಾಸ, ದೂರವಾಣಿ ಸಂಖ್ಯೆ : ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿಗಳು, ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿ ಕಲಬುರಗಿ ದೂರವಾಣಿ ಸಂಖ್ಯೆ: 08472-278619, 9) ವೆಬ್‌ಸೈಟ್ ವಿಳಾಸ : www.kppp.karnataka.gov.in

ಸಹಿ/- ಸದಸ್ಯ ಕಾರ್ಯದರ್ಶಿಗಳು

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ ಅಧಿಕಾರಿಗಳು, ಕಲಬುರಗಿ

ವಾ.ಸಾ.ಸಂ.ಇ/ಕಲಬುರಗಿ/109/ಕೆ.ಎಸ್.ಎಂ.ಸಿ.&ಎ/2025-26



Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.